ಬೀದರ | ಕಲಬುರಗಿ | ಯಾದಗಿರಿ | ರಾಯಚೂರು | ಕೊಪ್ಪಳ | ಬಳ್ಳಾರಿ | ಬಾಗಲಕೋಟೆ | ವಿಜಯಪುರ ಜಿಲ್ಲೆಗಳಲ್ಲಿ ಏಕಕಾಲಕ್ಕೆ ಪ್ರಸಾರ    Postal Reg. No. BDR/054/2026-2027 Email: mallammanudi@gmail.com E-paper: www.mallammanudi.in

# ಮಲ್ಲಮ್ಮ ನುಡಿ

ಸತ್ಯಮೇವ ಜಯತೆ

ಪ್ರಾದೇಶಿಕ ಕನ್ನಡ ದಿನಪತ್ರಿಕೆ

ಸಂಪಾದಕರು: ರಮೇಶರೆಡ್ಡಿ | 9448 604450

Mallammanudi Regional News Paper | Editor: Ramesh Reddy | RNI NO:KARKAN/2011/48371

VOLUME - 13 ಸಂಪುಟ-13 | ISSUE - 38 ಸಂಚಿಕೆ- 38 | PAGE-8 ಪುಟ-8 | ಶನಿವಾರ 15.03.2025 | RS.2/- ಬೆಲೆ 2/-



ಹುಮನಾಬಾದ: ಮಾಣಿಕನಗರ ಡಾ. ಜ್ಞಾನರಾಜ ಶ್ರೀ ಗಳು ಶುಕ್ರವಾರ ಭಕ್ತರ ಸಮ್ಮುಖದಲ್ಲಿ ಸಂಭ್ರಮದಿಂದ ಹೋಳಿ ಹಬ್ಬವನ್ನು ಆಚರಿಸಿದರು. ಈ ಸಂದರ್ಭದಲ್ಲಿ ಆನಂದರಾಜ ಪ್ರಭುಗಳು ಉಪಸ್ಥಿತರಿದ್ದರು

# ರನ್ಯಾಗೇ ಜೈಲೇ ಗತಿ

# ಜಾಮೀನು ಅರ್ಜಿ ವಜಾ


ಮಲ್ಲಮ್ಮ ನುಡಿ ವಾರ್ತೆ

ಬೆಂಗಳೂರು:ಮಾ.14: ಚಿನ್ನ ಕಳ್ಳ ಸಾಗಾಣಿಕೆ ಪ್ರಕರಣದಲ್ಲಿ ಕಂದಾಯ ಗುಪ್ತಚರ ನಿರ್ದೇಶನಾಲಯದಿಂದ ಬಂಧನಕ್ಕೆ ಒಳಗಾದ ನಟಿ ರನ್ಯಾ ರಾವ್ ಜಾಮೀನು ಅರ್ಜಿಯನ್ನು ಬೆಂಗಳೂರಿನ ಆರ್ಥಿಕ ಅಪರಾಧಗಳ ವಿಶೇಷ ನ್ಯಾಯಾಲಯ ವಜಾಗೊಳಿಸಿದೆ.

ಸದ್ಯ ಪರಪ್ಪನ ಅಗ್ರಹಾರದಲ್ಲಿರುವ ರನ್ಯಾ ರಾವ್ ಜಾಮೀನು ಕೋರಿ ಅರ್ಜಿ ಸಲ್ಲಿಸಿದ್ದಳು. ನ್ಯಾ. ವಿಶ್ವನಾಥ್ ಸಿ. ಗೌಡರ್ ಅವರು ಅರ್ಜಿಯನ್ನು ವಿಚಾರಣೆ ನಡೆಸಿ ವಜಾಗೊಳಿಸಿದ್ದಾರೆ.

ಡಿಆರ್ಐ ಪರ ವಕೀಲರು ರನ್ಯಾಗೆ ಜಾಮೀನು ನೀಡಬಾರದು ಎಂದು ಪ್ರಬಲವಾಗಿ ವಾದ






ಮಂಡಿಸಿದ್ದರು. ಈ ವಾದವನ್ನು ಕೋರ್ಟ್ ಪುರಸ್ಕರಿಸಿದೆ.

ನಟಿ ರನ್ಯಾ ಪರ ಹಿರಿಯ ವಕೀಲ ಕಿರಣ್ ಜವಳಿ ವಾದ ಮಾಡಿದ್ದರು. ಡಿಆರ್ಐ ಅಧಿಕಾರಿಗಳು ಸುಪ್ರೀಂ ಕೋರ್ಟ್ ಮಾರ್ಗಸೂಚಿ ಪಾಲನೆ ಮಾಡಿಲ್ಲ. ಹೆಣ್ಣು ಎಂದೂ ನೋಡದೇ ರಾತ್ರಿಯಿಡೀ ತನಿಖೆ ಮಾಡಿ ಮಾನಸಿವಾಗಿ ಹಿಂಸೆ ನೀಡುವ ಕೆಲಸವಾಗಿದೆ. ಅರೆಸ್ಟ್ ಮೇ ತೆ ಮನವಿ ಮಾಡಿಕೊಂಡಿದ್ದರು.

ಡಿಆರ್ಐ ಪರ ವಕೀಲ ಮಧುರಾವ್, ಠಿಲ್ಡ್ ಸ್ಮಗ್ಲಿಂಗ್ ಮಾಡಿರುವುದು ಕಂಡುಬಂದಿದೆ. ಚಿನ್ನವನ್ನ ಕೂಡ ವಶಕ್ಕೆ ಪಡೆದುಕೊಂಡು ತನಿಖೆ ಮಾಡಲಾಗುತ್ತಿದೆ. ಮನೆ ಶೋಧ ಕಾರ್ಯದ ವೇಳೆ ಕೋಟಿ ಕೋಟಿ ಹಣ ಹಾಗೂ ಚಿನ್ನಭರಣಗಳು ಪತ್ತೆ ಆಗಿವೆ. ಒಂದು ದೊಡ್ಡ ಸಿಂಡಿಕೇಟ್ ಕೆಲಸ ಮಾಡುತ್ತಿರುವ ಬಗ್ಗೆ ತನಿಖೆಯ ವೇಳೆ ಮಾಹಿತಿ ಲಭ್ಯವಾಗಿದೆ. ಹವಾಲ ಹಣದಲ್ಲಿ ವ್ಯವಹಾರ ಆಗಿರುವ ಬಗ್ಗೆ ಅನುಮಾನಗಳು ಕೂಡ ಇವೆ. ಪೊಲೀಸ್ ಪ್ರೋಟೋಕಾಲ್ ದುರುಪಯೋಗ ಆಗಿದ್ದು, ಆ ಬಗ್ಗೆಯೂ ತನಿಖೆ ನಡೆಯುತ್ತಿದೆ. ಈ ಹಂತದಲ್ಲಿ ಆರೋಪಿ ನಟಿ ರನ್ಯಾ ರಾವ್‌ಗೆ ಜಾಮೀನು ನೀಡಿದರೆ, ತನಿಖೆಗೆ ಹಿನ್ನಡೆ ಆಗುತ್ತದೆ ಎಂದು ವಾದಿಸಿದ್ದರು. ವಾದ-ಪ್ರತಿವಾದ ಆಲಿಸಿದ್ದ ನ್ಯಾಯಾದೀಶರು ಇಂದಿಗೆ ಆದೇಶ ಕಾಯ್ದಿರಿಸಿದ್ದರು.

ಮಾ.10 ರಂದು ಕೋರ್ಟ್ ರನ್ಯಾ ರಾವ್‌ಗೆ 15 ದಿನಗಳ ನ್ಯಾಯಾಂಗ ಬಂಧನ ವಿಧಿಸಿ ಆದೇಶ ಪ್ರಕಟಿಸಿತ್ತು. ಹೀಗಾಗಿ ಮಾ.24 ರವರೆಗೆ ರನ್ಯಾ ರಾವ್ ಪರಪ್ಪನ ಅಗ್ರಹಾರದಲ್ಲೇ ಇರಲಿದ್ದಾಳೆ. ಮಾರ್ಚ್ 3 ರಂದು ರನ್ಯಾಳನ್ನು ವಶಕ್ಕೆ ಪಡೆದಿದ್ದ ಡಿಆರ್ಐ ಮಾರ್ಚ್ 4 ರಂದು ಬಂಧಿಸಿತ್ತು.

ವಜಾಗೊಂಡಿದ್ದು ಯಾಕೆ?

ಈ ಪ್ರಕರಣದಲ್ಲಿ ಅಂತರರಾಷ್ಟ್ರೀಯ ಲಿಂಕ್‌ಗಳಿವೆ. ಒಂದು ವರ್ಷದ ಅವಧಿಯಲ್ಲಿ 27 ಬಾರಿ ವಿದೇಶಿ ಪ್ರಯಾಣ ಮಾಡಿದ್ದಾಳೆ. ಇದರಿಂದ ಅಂದಾಜು 38% ಕಸ್ಟಮ್ಸ್ ಸುಂಕ ವಂಚನೆ ಆಗಿರಬಹುದು. ಜೈಲಿನಿಂದ ಹೊರಬಂದಲ್ಲಿ ಸಾಕ್ಷಿ ನಾಶವಾಗುವ ಸಾಧ್ಯತೆಯಿದೆ ಎಂದು ಅಭಿಪ್ರಾಯಪಟ್ಟ ಕೋರ್ಟ್ ಜಾಮೀನು ಅರ್ಜಿಯನ್ನು ವಜಾಗೊಳಿಸಿದೆ.

## ಪೋಕ್ಸೋ ಪ್ರಕರಣದಲ್ಲಿ ಯಡಿಯೂರಪ್ಪಗೆ ರಿಲೀಫ್



ಮಲ್ಲಮ್ಮ ನುಡಿ ವಾರ್ತೆ

ಬೆಂಗಳೂರು:ಮಾ.14: ಪೋ-ಕ್ಸೋ ಪ್ರಕರಣದ ಸಂಬಂಧ ಮಾರ್ಚ್ 15 ರಂದು ಖುದ್ದು ವಿಚಾರಣೆಗೆ ಹಾಜರಾಗುವಂತೆ ಮಾಜಿ ಮುಖ್ಯಮಂತ್ರಿ ಬಿಎಸ್ ಯಡಿಯೂಪ್ಪರಿಗೆ 1ನೇ ತ್ವರಿತಗತಿ ನ್ಯಾಯಾಲಯ ಜಾರಿ ಮಾಡಿದ್ದ ಸಮನ್ಸ್‌ಗೆ ಹೈಕೋರ್ಟ್ ತಡೆ ನೀಡಿದೆ.

ಇದರ ಜೊತೆಗೆ ಮಾಜಿ ಸಿಎಂ ಯಡಿಯೂರಪ್ಪ ಖುದ್ದು

(2ನೇ ಪುಟ ನೋಡಿ)

## ಗಡಿನಾಡಿಗೆ ಎಐ ಕ್ಯಾಮೆರಾ ಕಣ್ಗಾವಲು! ಅತ್ಯಾಧುನಿಕ ವ್ಯವಸ್ಥೆ ರಾಜ್ಯದಲ್ಲೇ ಮೊದಲು



ಮಲ್ಲಮ್ಮ ನುಡಿ ವಾರ್ತೆ ಬೀದರ. ಮಾ. 14 : ಕರುನಾಡನ್ನೇ ಬೆಚ್ಚಿಬಿಳಿಸಿದ್ದ ಎಟಿಎಂ ಹಣ ದರೋಡೆ ಪ್ರಕರಣದಿಂದ ಎಚ್ಚೆತ್ತುಕೊಂಡಿರುವ ಜಿಲ್ಲಾ ಪೊಲೀಸ್ ಇಲಾಖೆ ಗಡಿ ಜಿಲ್ಲೆಯಲ್ಲಿ ನಾಗರಿಕರ ಸುರಕ್ಷತೆ ಮತ್ತು ಕಾನೂನು- ಸುವ್ಯವಸ್ಥೆ ವ್ಯವಸ್ಥೆ ಬಲಪಡಿಸಲು ಮಹತ್ವದ ಹೆಜ್ಜೆಯನ್ನಿರಿಸಿದೆ.


ಅಪರಾಧಿಗಳ ಮೇಲೆ ನಿಗಾ ಇಡಲು ನಗರ ಸೇರಿದಂತೆ ಜಿಲ್ಲೆಯ ಗಡಿ ರೇಖೆಯಲ್ಲಿ ಎಎನ್‌ಪಿಆರ್ ಮತ್ತು ಎಫ್‌ಆರ್ ಮಾದರಿಯ ಕ್ಯಾಮೆರಾಗಳನ್ನು ಅಳವಡಿಸಿದ್ದು, ಅತ್ಯಾಧುನಿಕ ವ್ಯವಸ್ಥೆ ಹೊಂದಿರುವ ರಾಜ್ಯದ ಮೊದಲ ಜಿಲ್ಲೆಯಾಗಿದೆ.

ಕಲ್ಯಾಣ ಕರ್ನಾಟಕ ಪ್ರದೇಶಾಭಿವೃದ್ಧಿ ಮಂಡಳಿ ಮತ್ತು ಉಸ್ತುವಾರಿ ಸಚಿವರ ಒಟ್ಟು 2ಕೋಟಿ ರೂ. ಅನುದಾನ ವೆಚ್ಚದಲ್ಲಿ ಎಐ (ಕೃತಕ ಬುದ್ಧಿಮತ್ತೆ) ತಂತ್ರಜ್ಞಾನ ಆಧಾರಿತ ಎಎನ್‌ಪಿಆರ್(ಸ್ವಯಂ ಚಾಲಿತ ನಂಬರ್ ಪ್ಲೇಟ್ ಗುರುತಿಸುವಿಕೆ)20 ಸಿಸಿ ಕ್ಯಾಮೆರಾ, ಎಫ್.ಆರ್ ಮಾದರಿಯ 16 ಸಿಸಿ ಕ್ಯಾಮೆರಾ (ಮುಖ

(2ನೇ ಪುಟ ನೋಡಿ)

## ಬರಗಾಲದಲ್ಲಿಯೂ ಬತ್ತದ, ಶತಮಾನಗಳಷ್ಟು ಹಳೆಯದಾದ ಐತಿಹಾಸಿಕ ಬಾವಿಗಳ ನಿರ್ಲಕ್ಷ್ಯ, ಜನರ ಆಕ್ರೋಶ





ಬೀದರ. ಮಾ. 14: ಶತಮಾನಗಳಷ್ಟು ಹಳೆದಾದ ಪುರಾತನ ಕಾಲದ ಐತಿಹಾಸಿಕ ಬಾವಿಗಳನ್ನು ನಿರ್ಲಕ್ಷ್ಯಸಿಲಾಗುತ್ತಿದೆ ಎಂಬುದು ಜನರ ಅಳಲು. ನೋಡಲು ಸುಂದರ ಹಾಗೂ ಎಂತಹ ಭೀಕರ ಬರಗಾಲದಲ್ಲಿಯೂ ಬತ್ತದ ಬಾವಿಗಳನ್ನ ಉಳಿಸಿ ಆ ನೀರನ್ನು ಸಾರ್ವಜನಿಕರ ಬಳಕೆಗೆ ಅನುಕೂಲ ಕಲ್ಪಿಸಲು ಹಿಂದೇಟು ಜಿಲ್ಲಾಡಳಿತ ಹಿಂದೇಟು ಹಾಕುತ್ತಿದೆ. ಜಿಲ್ಲೆಯಲ್ಲಿವೆ ಏಳು ನೂರು ವರ್ಷದಷ್ಟು ಪುರಾತನ ನೂರಕ್ಕೂ ಹೆಚ್ಚು ಬಾವಿಗಳಿವೆ.

ಅಪರೂಪದಲ್ಲಿ ಅಪರೂಪದಂತಿರುವ ಬಾವಿಯನ್ನು ಸ್ವಚ್ಛಗೊಳಿಸಿ ಆ ನೀರಿನ್ನು ಅಕ್ಕಪಕ್ಕದ ಗ್ರಾಮಗಳಿಗೆ ಬಳಕೆಗೆ ಅನುಕೂಲ ಕಲ್ಪಿಸಿದರೆ ಬೇಸಿಗೆಯಲ್ಲಿ ನೀರಿನ ದಾಹ ತಪ್ಪಿಸಬಹುದು. ಹೌದು ಬೀದರ್ ಜಿಲ್ಲೆಯಲ್ಲಿ ಬಹುಮನಿ ಸುಲ್ತಾನರ ಕಾಲದ ಸುಮಾರು ಏಳು ಶತಮಾನಗಳಷ್ಟು ಹಳೆದಾದ ನೂರಾರು ಬಾವಿಗಳು ಜಿಲ್ಲೆಯಲ್ಲಿದ್ದು ಎಂಥ ಹಬೀಕರವಾದ ಬರಗಾದಲ್ಲಿಯೂ ಕೂಡಾ ಈ ಭಾವಿಗಳು ಬತ್ತಿದ ಉದಾಹರಣೆಯಿಲ್ಲ.

ಇಲ್ಲಿನ ಬಾವಿಗಳನ್ನ ಆಗಿನ ಕಾಲದಲ್ಲಿ ವೈಜ್ಞಾನಿಕವಾಗಿ ಎಲ್ಲಿ ನೀರಿನ ಸೆಲೆ ಜಾಸ್ತಿಯಿದೆಯೋ ಅಲ್ಲಯೇ ಭಾವಿಗಳನ್ನ ನಿರ್ಮಾಣ ಮಾಡಿ ಸುತ್ತ ಮುತ್ತಲಿ ಗ್ರಾಮಗಳಿಗೆ ಇದೇ ಬಾವಿಗಳನ್ನ ನೀರನ್ನ ಉಪಯೋಗಿಸುತ್ತಿದ್ದರು, ಆದರೆ ಕಾಲ ಕ್ರಮೇಣವಾಗಿ ಇಂದು ಈ ಬಾವಿಗಳನ್ನ ಸಾರ್ವಜನಿಕರು ಬಳಕೆ ಮಾಡದೆ ಇದ್ದುದರಿಂದ ಬಾವಿಗಳು ಹಾಳಾಗುತ್ತಿವೆ.

ಆದರೆ ಬಾವಿಯಲ್ಲಿ ನೀರು ತುಂಬಿತುಳುಕುತ್ತಿವೆ. ಆದರೆ ಈ ಬಾವಿಯ ನೀರನ್ನ ಬಳಕೆ ಮಾಡಲು ಮಾತ್ರ ಜಿಲ್ಲಾಡಳಿತ ವಿಫಲವಾಗಿದೆ. ಇನ್ನೂ ಬೇಸಿಗೆಯಲ್ಲಿ ಕುಡಿಯುವ ನೀರಿನ ಸಮಸ್ಯೆಯುಂಟಾಗುತ್ತದೆ,

(2ನೇ ಪುಟ ನೋಡಿ)

## ಅಂಗನವಾಡಿ ಕಾರ್ಯಕರ್ತೆಯರ ಗೌರವಧನ ಹೆಚ್ಚಳ : ಸಚಿವೆ ಲಕ್ಷ್ಮಿ ಹೆಬ್ಬಾಳ್ಕರ್



ಮಲ್ಲಮ್ಮ ನುಡಿ ವಾರ್ತೆ

ಬೆಂಗಳೂರು, ಮಾ.14 :ಅಂಗನವಾಡಿ ಕಾರ್ಯಕತೆ-ರ್ಯರ ಬಗ್ಗೆ ಸರ್ಕಾರಕ್ಕೆ ಬದ್ಧತೆ ಇದ್ದು, ಈ ಬಾರಿಯ ಬಜೆಟ್ ನಲ್ಲಿ ಅಂಗನವಾಡಿ ಕಾರ್ಯಕರ್ತೆಯರ ಗೌರವ ಧನ ಹೆಚ್ಚಿಸಲಾಗಿದೆ ಎಂದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಖಾತೆ ಸಚಿವೆ ಲಕ್ಷ್ಮಿ ಹೆಬ್ಬಾಳ್ಕರ್ ಹೇಳಿದ್ದಾರೆ.

ಇಂದು ವಿಧಾನ ಪರಿಷತ್ತಿನ ಪ್ರಶ್ನೋತ್ತರ ಅವಧಿಯಲ್ಲಿ ಸದಸ್ಯ ಪ್ರತಾಪ್ ಸಿಂಹ ನಾಯಕ್ ಪ್ರಶ್ನೆಗೆ ಉತ್ತರಿಸಿದ ಸಚಿವರು, ಇತ್ತೀಚೆಗೆ ಮಂಡಿಸಲಾದ 2025-26ನೇ ಸಾಲಿನ ಬಜೆ???ನಲ್ಲಿ ಅಂಗನವಾಡಿ ಕಾರ್ಯಕತೆ-ರ್ಯರಿಗೆ 1 ಸಾವಿರ ಹಾಗೂ ಅಂಗನವಾಡಿ ಸಹಾಯಕಿಯರಿಗೆ 750 ರೂಪಾಯಿ ಹೆಚ್ಚಿಸಲಾಗಿದ್ದು, ಇದರಿಂದ ವರ್ಷಕ್ಕೆ ಇಲಾಖೆಗೆ 144 ಕೋಟಿ ರೂಪಾಯಿ ಅನುದಾನ ಹೊರೆಯಾಗಿದೆ ಎಂದರು.

ಅಂಗನವಾಡಿ ಕಾರ್ಯಕತೆ-ರ್ಯರ ಗೌರವ ಧನ ನೀಡಿಕೆಯಲ್ಲಿ ಕೇಂದ್ರ ಮತ್ತು ರಾಜ್ಯ ಸರ್ಕಾರಗಳ ಪಾಲು ಇದ್ದು, ಇದರಲ್ಲಿ ನಮ್ಮ ರಾಜ್ಯದ ಪಾಲು ಹೆಚ್ಚಿದೆ. ಗೌರವ ಧನ ಹೆಚ್ಚಳದ ಬಗ್ಗೆ ಕೇಂದ್ರ ಸರ್ಕಾರಕ್ಕೆ ಹಲವಾರು ಬಾರಿ ಮನವಿ ಮಾಡಲಾಗಿದೆ. ಆದರೂ, ಇದುವರೆಗೂ ಅನುದಾನ ಬಿಡುಗಡೆ ಮಾಡಿಲ್ಲ ಎಂದು

(2ನೇ ಪುಟ ನೋಡಿ)

## ಗ್ಯಾರಂಟಿಗಳಿಗೆ ಪರಿಶಿಷ್ಟರ 19,000 ಕೋಟಿ ಹಣ ಬಳಕೆ : ದಲಿತರಿಗೆ ಅನ್ಯಾಯ;ಪ್ರತಿಪಕ್ಷಗಳ ಆರೋಪ



ಮಲ್ಲಮ್ಮ ನುಡಿ ವಾರ್ತೆ

ಬೆಂಗಳೂರು: ಎಸ್‌ಸಿ-ಎಸ್‌ಟಿ ಸಮುದಾಯದ ಅಭಿವೃದ್ಧಿಗೆ ಮೀಸಲಾದ ಅನುದಾನವನ್ನು ಕಾಂಗ್ರೆಸ್ ಸರ್ಕಾರದ ಗ್ಯಾರಂಟಿ ಯೋಜನೆಗಳಿಗೆ ಬಳಸ್ತಿರೋ ವಿಷಯ ಪರಿಷತ್‌ನಲ್ಲಿಂದು ಕೋಲಾಹಲ ಎಬ್ಬಿಸಿದೆ.

ಪ್ರಶ್ನೋತ್ತರ ಅವಧಿಯಲ್ಲಿ ವಿಪಕ್ಷಗಳು ಈ ವಿಚಾರ ಪ್ರಸ್ತಾಪಿಸಿದವು. ಸರ್ಕಾರವೇ ಕೊಟ್ಟಿರೋ ಮಾಹಿತಿಗಳ ಪ್ರಕಾರ, ಕಳೆದ 2 ವರ್ಷಗಳಲ್ಲಿ 19,084.72 ಕೋಟಿ ಹಣವನ್ನು ಗ್ಯಾರಂಟಿಗಾಗಿ ಬಳಕೆ ಮಾಡಲಾಗಿದೆ. ಈ ವಿಚಾರವಾಗಿ, ಸಮಾಜಕಲ್ಯಾಣ ಇಲಾಖೆ ಸಚಿವ ಮಹದೇವಪ್ಪ-ಪರಿಷತ್ ವಿಪಕ್ಷ ನಾಯಕ ಛಲವಾದಿ ನಾರಾಯಣಸ್ವಾಮಿ ಮಧ್ಯೆ ಕಾವೇರಿದ ವಾಕ್ಸಮರವೇ ನಡೆಯಿತು. 1.50 ಕೋಟಿ ಜನರಿಗೆ ಅನ್ಯಾಯ ಆಗ್ತಿದೆ ಅಂತ ಛಲವಾದಿ ನಾರಾಯಣಸ್ವಾಮಿ ರೋಷಾವೇಶಭರಿತವಾಗಿ ಮಾತಾಡಿದರು.

ಇದಕ್ಕೆ ಅಂಕಿ-ಅಂಶಗಳ ಸಮೇತ ಸಚಿವ ಮಹದೇವಪ್ಪ ಟಾಂಗ್ ಕೊಟ್ಟರು. ನಮ್ಮ ಸರ್ಕಾರ ಮಾತ್ರ ಬಳಸ್ತಿಲ್ಲ. ಹಿಂದಿನ ಬಿಜೆಪಿ ಸರ್ಕಾರವೂ

(2ನೇ ಪುಟ ನೋಡಿ)

## ಸಂಭ್ರಮದ ಹೋಳಿ ರಂಗಿನಾಟದಲ್ಲಿ ಮಿಂದೆದ್ದ ಚಿಣ್ಣರು, ಹಿರಿಯರು



ಮಲ್ಲಮ್ಮ ನುಡಿ ವಾರ್ತೆ

ಭಾಲ್ಕಿ:ಮಾ.14: ಪಟ್ಟಣದ ಸೇರಿದಂತೆ ತಾಲೂಕಿನಾದ್ಯಂತ ಹೋಳಿ ಹಬ್ಬ (ಕಾಮದಹನ) ನಿಮಿತ್ಯ ಚಿಣ್ಣರು ಸೇರಿದಂತೆ ಯುವಕರು, ಹಿರಿಯರೆಲ್ಲರೂ ರಂಗೀನಾಟದಲ್ಲಿ ಮಿಂದೆದ್ದರು.

ಪುಟಾಣಿ ಮಕ್ಕಳಿ ಬಣ್ಣ ಎರಚುತ್ತಾ ಸಂಭ್ರಿಮಿಸಿದರೆ, ಯುವಕರು ಕೋಲಾಟ, ನೃತ್ಯ, ಡಿಜೆ ಸೌಂಡ್‌ಗೆ ಹೆಜ್ಜೆ ಹಾಕುತ್ತಾ ಪಟ್ಟಣದ ಪ್ರತಿಯೊಂದು ಓಣಿಗಳಲ್ಲಿ ಸಂಭ್ರಮ ಪಟ್ಟರು. ಅಲ್ಲದೇ ತಾಲೂಕಿನ ನಾವದಗಿ, ದಾಡಗಿ, ಕುರುಬಖೇಳಗಿ, ಖಟಕಚಿಂಚೋಳಿ, ಏಣಕೂರ, ಮಾಸಿಮಾಡ, ಜೋಳದಾಪಕ, ಜ್ಯಾಂತಿ, ಕಣಜಿ, ಹುಣಜಿ, ಹಲಬರ್ಗಾ, ಧನ್ನೂರ(ಹೆಚ್), ನಿಟ್ಟೂರ(ಬಿ), ಕೇರೂರ, ಅಂಬೆಸಾಂಗವಿ, ಧಾರಜವಾಡಿ,

(2ನೇ ಪುಟ ನೋಡಿ)

## ವಿಶ್ವವಿದ್ಯಾಲಯ ಮುಚ್ಚುವ ಬಗ್ಗೆ ತೀರ್ಮಾನವಾಗಿಲ್ಲ: ಸಿಎಂ ಸಿದ್ದರಾಮಯ್ಯ



ಮಲ್ಲಮ್ಮ ನುಡಿ ವಾರ್ತೆ

ಬೆಂಗಳೂರು:ಮಾ.14: ವಿಶ್ವ ವಿದ್ಯಾಲಯಗಳನ್ನು ಮುಚ್ಚುವ ಬಗ್ಗೆ ತೀರ್ಮಾನವಾಗಿಲ್ಲ. ಸಂಪುಟ ಉಪ ಸಮಿತಿ ವರದಿಯೇ ಇನ್ನೂ ಬಂದಿಲ್ಲ. ಉಪ ಸಮಿತಿ ವರದಿ ಬರುವ ಮೊದಲೇ ಬಿಜೆಪಿಗೆ ಆತಂಕ ಏಕೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಗುರುವಾರ ಪ್ರಶ್ನಿಸಿದ್ದಾರೆ.

ವಿಧಾನಸಭೆಯಲ್ಲಿ ವಿರೋಧ ಪಕ್ಷದ ಸದಸ್ಯರ ಪ್ರಶ್ನೆಗೆ ಉತ್ತರಿಸಿದ ಸಿಎಂ, ಉಪ ಮುಖ್ಯಮಂತ್ರಿ ಅವರ ಅಧ್ಯಕ್ಷತೆಯಲ್ಲಿ ಈ ಸಂಗತಿಯ ಕೂಲಂಕುಷ ಪರಿಶೀಲನೆಗೆ ಉಪ ಸಮಿತಿ ರಚಿಸಲಾಗಿದೆ. ಉಪ ಸಮಿತಿ ವರದಿ ಕೊಡುವುದು ಬಾಕಿ ಇದೆ. ವರದಿ ಬರುತ್ತಿದ್ದಂತೆ ಅದನ್ನು ಸಂಪುಟದ ಮುಂದೆ ಇಟ್ಟು ತೀರ್ಮಾನ ತೆಗೆದುಕೊಳ್ಳಲಾಗುವುದು ಎಂದು ಹೇಳಿದರು.

ವರದಿ ಬರುವ ಮೊದಲೇ ವಿವಿಗಳನ್ನು ಮುಚ್ಚುತ್ತೇವೆ ಎನ್ನುವುದು ಸರಿಯಲ್ಲ. ಇಂಥಾ ತೀರ್ಮಾನ ನಮ್ಮಿಂದ ಆಗಿಲ್ಲ ಎಂದು ಸಿಎಂ ಸ್ಪಷ್ಟಪಡಿಸಿದರು.

ಒಂದನೇ ಪುಟದಿಂದ

## ಐತಿಹಾಸಿಕ ಬಾವಿಗಳ ನಿರ್ಲಕ್ಷ್ಯ, ಜನರ ಆಕ್ರೋಶ

ಅಂತಹ ಸಮಯದಲ್ಲಿ ಇಂಥಹ ಬಾವಿಯ ನೀರನ್ನ ಗ್ರಾಮಗಳಿಗೆ ಬಳಕೆ ಮಾಡಿದರೆ ಜನರ ಹಾಗೂ ಪ್ರಾಣಿಗಳ ದಾಹ ನಿವಾರಣೆಯಾಗುತ್ತದೆ. ಆದರೆ ಅದನ್ನ ಜಿಲ್ಲಾಢಳಿತ ಮಾಡುತ್ತಿಲ್ಲಾ, ಬದಲಾಗಿ ಟ್ಯಾಂಕರ್ ಮೂಲಕ ನೀರು ಸರಬರಾಜು ಮಾಡಿ ಲಕ್ಷಾಂತರ ರೂಪಾಯಿ ಹಣವನ್ನ ವೆಚ್ಚ ಮಾಡುತ್ತಿದೆ, ವಿನಃ ಪುರಾತನ ಬಾವಿಯ ನೀರನ್ನ ಬಳಕೆ ಮಾಡುವಲ್ಲಿ ವಿಫಲವಾಗಿದ್ದಾರೆ, ಇನ್ನೂ ಇಲ್ಲಿನ ಬಾವಿಯ ಬಗ್ಗೆ ಇಲ್ಲಿನ ಜನರು ಹೇಳಿದ್ದು ಹೀಗೆ. ಬೀದರ್ ಜಿಲ್ಲೆಯಲ್ಲಿ ಸರಿ ಸುಮಾರು ನೂರಕ್ಕೂ ಹೆಚ್ಚು ಸಿಹಿ ನೀರಿನ ಬಾವಿಗಳಳಿವೆ. ಇಲ್ಲಿನ ಬಾವಿಗಳಲ್ಲಿ ಇಂದಿಗೂ ಸಾಕಷ್ಟು ಪ್ರಮಾಣದ ಜಲವನ್ನು ತುಂಬಿಕೊಂಡಿವೆ. ಅದರೆ, ಸರಿಯಾದ ನಿರ್ವಹಣೆ ಕೊರತೆಯಿಂದ ಕೆಲ ಬಾವಿಗಳ ನೀರು ಪಾಚಿಗಟ್ಟಿಕೊಂಡು ಹಾಳಾಗಿವೆ ಎಂದು ಮೊಹ್ಮದ್ ಎಂಬುವವರು ಹೇಳಿದ್ದಾರೆ. ನಗರದಲ್ಲಿನ ಪುರಾತನ ಕಾಲದ ಅನೇಕ ಬಾವಿಗಳನ್ನು ಅಭಿವೃದ್ಧಿ ನೆಪದಲ್ಲಿ ನಗರಸಭೆ ಮುಚ್ಚಿ ಕೈತೊಳೆದುಕೊಂಡಿದೆ. ಪ್ರತಿವರ್ಷವೂ ಕೂಡಾ ಬೆಸಿಗೆಕಾಲದಲ್ಲಿ ನೀರಿಗಾಗಿ ಹಾಹಾಕಾರ ಶುರುವಾಗುತ್ತೆ, ಹೀಗಿದ್ದರೂ ಸಹ ಪುರಾತನ ಕಾಲದ ಜಲಮೂಲಗಳನ್ನು ಸಂರಕ್ಷಣೆ ಮಾಡಿ ಸರಿಯಾಗಿ ನಿರ್ವಹಣೆ ಮಾಡುವ ಗೋಜಿಗೆ ಹೋಗದೆ ಇರೋದು ವಿಪರ್ಯಾಸ. ಎಂದು ಇಲ್ಲಿನ ಜನರು ಅಸಮಾದಾನ ವ್ಯಕ್ತಪಡಿಸುತ್ತಿದ್ದಾರೆ.

ಇನ್ನೂ ಪ್ರತಿ ಬೇಸಿಗೆಯಲ್ಲಿಯೂ ಕೂಡಾ ಜಿಲ್ಲೆಯ ಜನರು ನೀರಿನ ಸಮಸ್ಯೆಯಿಂದ ಪ್ರತಿ ವರ್ಷವೂ ಕೂಡಾ ಜನರು ಪರದಾಡುತ್ತಾರೆ ಕುಡಿಯುವ ನೀರಿನ ಸಮಸ್ಯೆ ಬಗೆಹರಿಸುತ್ತೇವೆಂದು ಪ್ರತಿವೂ ಕೂಡಾ ಕೋಟ್ಯಾಂತರ ರೂಪಾಯಿ ಹಣವನ್ನ ಖರ್ಚಮಾಡುತ್ತಲೇ ಬರುತ್ತಿದ್ದಾರೆ-ಯೇ ಹೊರತು ಶಾಶ್ವತ ಕುಡಿಯು ನೀರಿನ ಸಮಸ್ಯೆಗೆ ಪರಿಹಾರ ಮಾತ್ರ ಇಂದಿಗೂ ಸಿಕ್ಕಿಲ್ಲ,

ಆದರೆ ಇದೇ ಹಣವನ್ನ ಪುರಾತನ ಭಾವಿಯ ಹೋಳನ್ನ ತೆಗೆಸಿ ಇದೇ ಬಾವಿಯಿಂದ ಗ್ರಾಮಕ್ಕೆ ಪೈಪ್ ಲೈನ್ ಮಾಡಿಸಿ ಇದೇ ಈ ಬಾವಿಯ ನೀರನ್ನು ಬಳಸಿಕೊಂಡರೆ ಎಂತಹ ಬೆಸಿಗೆಯಲ್ಲಿಯೂ ಕೂಡಾ ಕೆಲವು ಗ್ರಾಮದಲ್ಲಾಗುವ ನೀರಿನ ಹಾಹಾಕಾರ ಕಡಿಮೆಯಾಗುತ್ತದೆ. ಇಂತಹ ಬಾವಿಗಳನ್ನು ಈ ವರ್ಷದಿಂದ ಹೂಳು ತೆಗೆಸಿ ಆ ನೀರನ್ನು ಬಳಕೆ ಮಾಡುತ್ತೇವೆಂದು ಅಧಿಕಾರಿಗಳು ಹೇಳುತ್ತಿದ್ದಾರೆ.

ಶತ ಶತಮಾನಗಳಿಂದ ಎಂದೂ ಕೂಡಾ ಬತ್ತದ ಐತಿಹಾಸಿಕ ಬಾವಿಗಳು ಬೀದರ್ ಜಿಲ್ಲೆಯಲ್ಲಿರುವುದು ನಮ್ಮ ಹೆಮ್ಮೆಯ ಸಂಗತಿಯಾಗಿದೆ. ಆದರೇ ಇಂತಹ ಅಪರೂಪದಲ್ಲಿ ಅಪರೂಪವಾದ ಬಾವಿಗಳ ನೀರನನ್ನ ಬಳಸಿಕೊಳ್ಳುವುದರಲ್ಲಿ ನಮ್ಮ ಜಿಲ್ಲಾಡಳಿತ, ಜನಪ್ರತಿನಿಧಿಗಳು ಮುಂದಾಗದಿರುವುದು ದುರಂತವೇ ಸರಿ ಎಂದು ಶಿಲ್ಪಾ ಶರ್ಮಾ ಜಿಲ್ಲಾಧಿಕಾರಿಗಳು ಹೇಳಿದ್ದಾರೆ.

## ಅತ್ಯಾಧುನಿಕ ವ್ಯವಸ್ಥೆ ರಾಜ್ಯದಲ್ಲೇ ಮೊದಲು

ಗುರುತಿಸುವುದು) ಸೇರಿ ಒಟ್ಟು 36 ಕ್ಯಾಮೆರಾಗಳನ್ನು ಅಳವಡಿಸಲಾಗಿದೆ. ಇವುಗಳ ನಿಯಂತ್ರಣ-ಕ್ಕಾಗಿ ಪೊಲೀಸ್ ವರಿಷ್ಠಾ ಧಿಕಾರಿಗಳ ಕಚೇರಿಯಲ್ಲಿ ಸಿಸಿ ಟಿವಿ ಕಮಾಂಡ್ ಮತ್ತು ನಿಯಂತ್ರಣ ಕೇಂದ್ರ ಸ್ಥಾಪಿಸಲಾಗಿದ್ದು,

ಇತ್ತೀಚೆಗೆ ಜಿಲ್ಲಾ ಉಸ್ತುವಾರಿ ಸಚಿವ ಈಶ್ವರ ಖಂಡ್ರೆ ಉದ್ಘಾಟಿಸಿದ್ದಾರೆ. ಹಾಡಹಗಲಲ್ಲೇ ನಗರದ ಜನನಿಬಿಡ ಪ್ರದೇಶವಾದ ಎಸ್‌ಬಿಐ ಬ್ಯಾಂಕ್ ಎದುರು ಜ.16ರಂದು ಇಬ್ಬರು ಆಗುಂತಕರು ಎಟಿಂಎ ಸಿಬ್ಬಂದಿಯನ್ನು ಗುಂಡಿಕ್ಕಿ ಕೊಂದು, 86 ಲಕ್ಷ ರೂ.ಪೆಟ್ಟಿಗೆ ಸಮೇತ ದೋಚಿ ಪರಾರಿಯಾಗಿದ್ದರು. ಘಟನೆ ನಡೆದು ಎರಡು ತಿಂಗಳಾದರೂ ಈವರೆಗೆ ಆರೋಪಿಗಳ ಬಂಧನ ಸಾಧ್ಯವಾಗಿಲ್ಲ.

ಈ ದುಷ್ಕೃತ್ಯ ಗಡಿನಾಡಲ್ಲಿನ ಕಾನೂನು ಸುವ್ಯವಸ್ಥೆ ಬಗ್ಗೆ ಪ್ರಶ್ನಿಸುವಂತೆ ಮಾಡಿತ್ತು. ಬೀದರ ಮಹಾರಾಷ್ಟ್ರ ಮತ್ತು ತೆಲಂಗಾಣ ಗಡಿ ಹೊಂದಿಕೊಂಡಿರುವ ಜಿಲ್ಲೆಯಾದ ಹಿನ್ನೆಲೆಯಲ್ಲಿ ದುಷ್ಕೃತ್ಯಗಳನ್ನು ಸುಲಭವಾಗಿ ನಡೆಸಲು ಮಾರ್ಗವಾಗುತ್ತಿದೆ ಎಂಬ ಆತಂಕ ಹೆಚ್ಚಾಗಿತ್ತು. ಇದನ್ನು ಗಂಭೀರವಾಗಿ ಪರಿಗಣಿಸಿದ ಉಸ್ತುವಾರಿ ಸಚಿವ ಈಶ್ವರ ಖಂಡ್ರೆ ಜಿಲ್ಲೆಯಲ್ಲಿ ಕಾನೂನು ಸುವ್ಯವಸ್ಥೆ ಉತ್ತಮಗೊಳಿಸಲು ಪೊಲೀಸ್ ಇಲಾಖೆಗೆ ನಿರ್ದೇಶನ ನೀಡಿದ್ದರು. ಅದರಂತೆ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಪ್ರದೀಪ್ ಗುಂಟಿ,

ಸುಧಾರಿತ ಕ್ರಮಗಳಿಗೆ ಮುಂದಾಗಿದ್ದಾರೆ. ದೇಶ-ವಿದೇಶದ ಅತ್ಯಾಧುನಿಕ ತಂತ್ರಜ್ಞಾನವುಳ್ಳ ಕ್ಯಾಮೆರಾಗಳ ಅಧ್ಯಯನ ನಡೆಸಿದ್ದು, ಹುಬ್ಬಳ್ಳಿ ಮೂಲದ ಧಾವಾ ಕಂಪನಿ ಮೂಲಕ ಸಿಸಿ ಟಿವಿ ಕಮಾಂಡ್ ಕೇಂದ್ರ ಸ್ಥಾಪಿಸಲಾಗಿದೆ. ಬೀದರ ನಗರದ 11ಪ್ರಮುಖ ವೃತ್ತ ಮತ್ತು ಮಹಾರಾಷ್ಟ್ರ ಮತ್ತು ತೆಲಂಗಾಣ 5 ಗಡಿರೇಖೆಗಳಲ್ಲಿ ಎಎನ್‌ಪಿಆರ್, ಹಾಗೂ ಎಫ್‌ಆರ್ ಮಾದರಿಯ ಒಟ್ಟು 36 ಸಿಸಿ ಕ್ಯಾಮೆರಾಗಳನ್ನು ಅಳವಡಿಸಲಾಗಿದೆ. ಮೊದಲ ಹಂತದ ಯೋಜನೆ ಯಶಸ್ವಿಯಾಗಿದ್ದು, ಬರುವ ದಿನಗಳಲ್ಲಿ ಜಿಲ್ಲೆಯ ತಾಲೂಕುಗಳಲ್ಲಿ ಮತ್ತು ನಗರದಲ್ಲಿ ಸಂಚಾರ ವ್ಯವಸ್ಥೆ ಸುಧಾರಣೆಗೆ ಹೆಚ್ಚುವರಿ ಕ್ಯಾಮೆರಾಗಳನ್ನು ಅಳವಡಿಸಲು ಯೋಜನೆ ತಯಾರಿಸಲಾಗುತ್ತಿದೆ.

ಎಐ ಕ್ಯಾಮೆರಾಗಳ ವಿಶೇಷತೆಗಳೇನು?

ಸಾರ್ವಜನಿಕರ ಭದ್ರತೆ, ಸುರಕ್ಷತೆ ಹಾಗೂ ಜಿಲ್ಲೆಯಲ್ಲಿ ಕಾನೂನು ಸುವ್ಯವಸ್ಥೆ ಕಾಪಾಡಲು, ಅಪರಾಧ ಪ್ರಕರಣಗಳಲ್ಲಿ ತನಿಖೆ ಮತ್ತು ಅಪರಾ ಧಿಗಳ ಮೇಲೆ ನಿಗಾ ಇಡಲು ಎಐ ಸಿಸಿ ಟಿವಿ ಮಹತ್ವದ ಮಾಹಿತಿ/ ಸುಳಿವು ನೀಡುವ ತಾಂತ್ರಿಕ ಅಂಶವಾಗಿದ್ದು, ತಾಂತ್ರಿಕ ಕಾಲಮಾನದಲ್ಲಿ ಜಿಲ್ಲೆಯಲ್ಲಿ ಸುರಕ್ಷತಾ ಕಾನೂನು(ಸೆಫ್ಟಿ ಆಕ್ಟ್) ಪರಿಣಾಮಕಾರಿಯಾಗಿ ಬಳಸಲು ಈ ಕೇಂದ್ರ ಸಹಕಾರಿಯಾಗಲಿದೆ. ಈ ಕಮಾಂಡ್‌ನಲ್ಲಿ ಎಂಓಬಿ (ಪದೇ ಪದೇ ಕಳ್ಳತನ ಮಾಡುವವರು), ರೌಡಿ ಶಿಟರ್‌ಗಳ ಭಾವಚಿತ್ರ ಸಮೇತ ಸ್ವ ವಿವರಗಳನ್ನು ಅಪಲೋಡ್ ಮಾಡಲಾಗಿದೆ. ಈ ಕ್ಯಾಮೆರಾಗಳು ಅವರ ಚಲನವಲನಗಳ ಮೇಲೆ ನಿಗಾ ಇಡುವುದು ವಿಶೇಷ. ಯಾವ ಜಾಗ ಮತ್ತು ಯಾವ ಸಮಯದಲ್ಲಿ ಸುತ್ತಾಡಿದ್ದಾರೆ ಎಂಬುದನ್ನು ಅಲರ್ಟ್ ಮೂಲಕ ತಿಳಿಸುತ್ತದೆ. ಮುಖ ಗುರುತಿಸುವಿಕೆ, ವಾಹನಗಳ ನಂಬರ್ ಮತ್ತು ಕಲರ್‌ಗಳನ್ನು ಸಹ ಗುರುತಿಸುತ್ತದೆ.

## ದಲಿತರಿಗೆ ಅನ್ಯಾಯ;ಪ್ರತಿಪಕ್ಷಗಳ ಆರೋಪ

ಬಳಸಿದೆ ಅಂದ್ರು. ಮಹದೇವಪ್ಪ ಬೆಂಬಲಕ್ಕೆ ಸಚಿವ ಪ್ರಿಯಾಂಕ್ ಖರ್ಗೆ ಎದ್ದು ನಿಂತರು. ಇದಕ್ಕೆ ಛಲವಾದಿ ನಾರಾಯಣಸ್ವಾಮಿ ಆಕ್ಷೇಪಿಸ್ತಿದ್ರು. ಇಬ್ಬರ ಮಧ್ಯೆಯೂ ಪದೇ ಪದೇ ಜೋರು ವಾಕ್ಸಮರ ನಡೀತು. ಕಾಂಗ್ರೆಸ್-ದೋಸ್ತಿ ಸದಸ್ಯರು ದನಿಗೂಡಿಸಿದ್ರು. ಸದನ ಗದ್ದಲದ ಗೂಡಾಗಿ ಸ್ವಲ್ಪ ಹೊತ್ತು ಕಲಾಪವನ್ನು ಸಭಾಪತಿಗಳು ಮುಂದೂಡಿದರು.

## ಮಾ.21 ರಿಂದ ಎಸ್‌ಎಸ್‌ಎಲ್‌ಸಿ ಪರೀಕ್ಷೆ-1

ಮಲ್ಲಮ್ಮನುಡಿ ವಾರ್ತೆ

ಪರೀಕ್ಷಾ ಕೇಂದ್ರಗಳ ಸುತ್ತ 200 ಮೀ. ವ್ಯಾಪ್ತಿ ನಿಷೇಧಾಜ್ಞೆಜಾರಿಗೊಳಿಸಿ ಜಿಲ್ಲಾಧಿಕಾರಿ ಆದೇಶ

ಬಳ್ಳಾರಿ,ಮಾ.14:ಜಿಲ್ಲೆಯಾದ್ಯಂತ 64 ಪರೀಕ್ಷಾ ಕೇಂದ್ರಗಳಲ್ಲಿ ಮಾ.21 ರಿಂದ ಏ.04 ರವರೆಗೆ ಕರ್ನಾಟಕ ಶಾಲಾ ಪರೀಕ್ಷೆ ಮತ್ತು ಮೌಲ್ಯ ನಿರ್ಣಯ ಮಂಡಳಿ ವತಿಯಿಂದ ಎಸ್‌ಎಸ್‌ಎಲ್‌ಸಿ ಪರೀಕ್ಷೆ-1 ನಡೆಯಲಿದ್ದು, ಪರೀಕ್ಷಾ ಕೇಂದ್ರಗಳ ಸುತ್ತಲೂ 200 ಮೀಟರ್ ಆವರಣವನ್ನು ಭಾರತೀಯ ನಾಗರಿಕ ಸುರಕ್ಷಾ ಸಂಹಿತಾ 2023 ರ ಕಲಂ 163 ಮೇರೆಗೆ ನಿರ್ಬಂಧಿತ ಪ್ರದೇಶವೆಂದು ಘೋಷಿಸಿ ಜಿಲ್ಲಾ ದಂಡಾಧಿಕಾರಿಯೂ ಆಗಿರುವ ಜಿಲ್ಲಾಧಿಕಾರಿ ಪ್ರಶಾಂತ್ ಕುಮಾರ್ ಮಿಶ್ರಾ ಅವರು ಆದೇಶಿಸಿದ್ದಾರೆ.

ಪರೀಕ್ಷಾ ಕೇಂದ್ರಗಳ ಸುತ್ತಲೂ 200 ಮೀಟರ್ ಆವರಣದಲ್ಲಿನ ಜೆರಾ-ಕ್ಸ್ ಸೆಂಟರ್ ಮತ್ತು ಇಂಟರ್‌ನೆಟ್ ಸೆಂಟರ್‌ಗಳನ್ನು ಕಾರ್ಯನಿರ್ವಹಿಸದಂತೆ ಪ್ರತಿಬಂಧಿಸಿ ಆದೇಶಿಸಿದ್ದಾರೆ.

ಆ ಪ್ರದೇಶದಲ್ಲಿ ಅನಧಿಕೃತ ವ್ಯಕ್ತಿ ಮತ್ತು ವ್ಯಕ್ತಿಗಳ ಗುಂಪುಗಳಿಗೆ ಪ್ರವೇಶವನ್ನು ನಿಷೇಧಿಸಿದೆ. ಈ ಆದೇಶವು ಪರೀಕ್ಷೆಯ ಮೇಲ್ವಿಚಾರಣೆ ಕಾರ್ಯನಿರ್ವಹಿಸುವ ಸಿಬ್ಬಂದಿಗಳಿಗೆ ಅನ್ವಯಿಸುವುದಿಲ್ಲ ಎಂದು ಅವರು ಹೊರಡಿಸಿರುವ ಆದೇಶದಲ್ಲಿ ತಿಳಿಸಿದ್ದಾರೆ.

## ಮಿಂದೆದ್ದ ಚಿಣ್ಣರು,ಹಿರಿಯರು

ಕಲವಾಡಿ, ವರವಟ್ಟಿ(ಬಿ), ಮೊರಂಬಿ, ಉಚ್ಚಾ, ಕೊಟಗೀರಾ, ಬ್ಯಾಲಹಳ್ಳಿ(ಕೆ), ಬ್ಯಾಲಹಳ್ಳಿ(ಡಬ್ಲೂ), ಹಾಲಹಳ್ಳಿ, ಸಾಯಿಗಾಂವ, ಭಾತಂಬ್ರಾ, ಲಖಣಗಾಂವ, ಮೆಹಕರ ಸೇರಿದಂತೆ ಪ್ರತಿಯೊಂದು ಗ್ರಾಮಗಳಲ್ಲಿಯೂ ಬಣ್ಣ ಎರಚುವುದು, ನೃತ್ಯ ಮಾಡುವ ದೃಶ್ಯಗಳು ಸರ್ವೇಸಾಮಾನ್ಯವಾಗಿದ್ದವು.

ಹಳೆ ಪಟ್ಟಣದಲ್ಲಿ ಎರಡು ದಿವಸ ಹೋಳಿ ಬಣ್ಣದಾಟ ನಡೆಸುವ ನಿಮಿತ್ಯ ಶುಕ್ರವಾರ ಹೆಣ ಮಾಡಿ ಅಳುವ ಕಾರ್ಯಕ್ರಮ ಮಾಡಿದರು. ಒಟ್ಟಿನಲ್ಲಿ ತಾಲೂಕಿನಾದ್ಯಂತ ರಂಗೀನಾಟ ರಂಗೇರಿತು.

## ಗೌರವಧನ ಹೆಚ್ಚಳ : ಸಚಿವೆ ಲಕ್ಷ್ಮಿ ಹೆಬ್ಬಾಳ್ಕರ್

ತಿಳಿಸಿದರು.ಅಂಗನವಾಡಿ ಕಾರ್ಯಕರ್ತೆಯರ ಗೌರವ ಧನ ಹೆಚ್ಚಳ ಮಾಡಿರುವ ರಾಜ್ಯಗಳ ಪೈಕಿ ಇಡೀ ದೇಶದಲ್ಲೇ ನಮ್ಮ ಕರ್ನಾಟಕವು ಮೂರನೇ ಸ್ಥಾನದಲ್ಲಿದೆ. ನಮ್ಮ ಸರ್ಕಾರಕ್ಕೆ ಅಂಗನವಾಡಿ ಸಹಾಯಕರು ಹಾಗೂ ಕಾರ್ಯಕರ್ತೆಯರ ಬಗ್ಗೆ ಕಾಳಜಿ ಇದ್ದು, ಹಾಗಾಗಿಯೇ ಅವರ ಗೌರವ ಧನ ಹೆಚ್ಚಳ ಮಾಡಲು ಸರ್ಕಾರ ಮತ್ತು ಇಲಾಖೆ ಅಗತ್ಯ ಕ್ರಮ ಕೈಗೊಂಡಿದೆ ಎಂದು ತಿಳಿಸಿದರು.

## ಯಡಿಯೂರಪ್ಪಗೆ ರಿಲೀಫ್

ಹಾಜರಾತಿಗೂ ವಿನಾಯಿತಿ ನೀಡಿದೆ. ಈ ಮೂಲಕ ಬಿಎಸ್ ಯಡಿಯೂಪ್ಪ ಅವರಿಗೆ ರಿಲೀಫ್ ಸಿಕ್ಕಂತಾಗಿದೆ. ಈ ವೇಳೆ ಬಿಎಸ್ ಯಡಿಯೂರಪ್ಪ ಅವರ ಅರ್ಜಿಯ ವಿಚಾರಣೆ ಅಗತ್ಯವಿದೆ ಎಂದು ಹೇಳಿದ ನ್ಯಾಯಾಲಯವು ಕಾಗ್ನಿಜೆನ್ಸ್, ಸಮನ್ಸ್ ಆದೇಶಕ್ಕೆ ತಡೆ ನೀಡಿದೆ.


ವಿಚಾರಣೆ ವೇಳೆ ಹೈಕೋರ್ಟ್ ಮಧ್ಯಂತರ ರಿಲೀಫ್ ನೀಡಿತ್ತು. ಖುದ್ದು ಹಾಜರಾತಿಯಿಂದಲೂ ಹೈಕೋರ್ಟ್ ವಿನಾಯಿತಿ ನೀಡಿತ್ತು. 2024ರ ಫೆಬ್ರವರಿ 2ರಂದು ಅನುಚಿತವಾಗಿ ಸ್ಪರ್ಶಿಸಿದ ಆರೋಪವಿದೆ. ಒಂದು ತಿಂಗಳ ಬಳಿಕ ಪೊಲೀಸ್ ಆಯುಕ್ತರಿಗೆ ದೂರು ನೀಡಿದ್ದಾರೆ. ಸ್ಥಳದಲ್ಲಿದ್ದ ಸಾಕ್ಷಿಗಳು ಆ ರೀತಿಯ ಘಟನೆ ನಡೆದಿಲ್ಲವೆಂದಿದ್ದಾರೆ.

ಬಾಲಕಿ, ಆಕೆಯ ತಾಯಿಯ ಹೇಳಿಕೆ ಮೇಲೆ ಆರೋಪಪಟ್ಟಿ ದಾಖಲಿಸಿದ್ದಾರೆ. ತಾಯಿಯ ಮೊಬೈಲ್‌ನಲ್ಲಿದ್ದ ಸಂಭಾಷಣೆ ಬಿಎಸ್ ಯಡಿಯೂರಪ್ಪ ಅಳಿಸಿಲ್ಲ. ಪೊಲೀಸರು ಹಾಕಿರುವ ಐಟಿ ಸೆಕ್ಷನ್ ದೂರುದಾರರಿಗೆ ಅನ್ವಯವಾಗುತ್ತದೆ ಎಂದು ವಾದಿಸಿದರು.

1 ತಿಂಗಳು 12 ದಿನ ತಡವಾಗಿ ಪೊಕ್ಸೋ ಕೇಸ್ ದಾಖಲಿಸಲಾಗಿದೆ. ಘಟನೆ ನಡೆದಿದ್ದರೆ ಯಾರೂ ಇಷ್ಟು ತಡವಾಗಿ ದೂರು ದಾಖಲಿಸುತ್ತಿರಲಿಲ್ಲ. ಸಮನ್ಸ್ ರದ್ದುಪಡಿಸಿ ಹೊಸದಾಗಿ ಪರಿಶೀಲನೆಗೆ ಹಿಂದೆ ಆದೇಶಿಸಲಾಗಿತ್ತು. ಈಗ ವಿಶೇಷ ಕೋರ್ಟ್ ಕಾಗ್ನಿಜೆನ್ಸ್ ಪಡೆದು ಸಮನ್ಸ್ ಜಾರಿಗೊಳಿಸಿದೆ ಎಂದು ಬಿಎಸ್ ಯಡಿಯೂರಪ್ಪ ಪರ ವಕೀಲರು ವಾದಿಸಿದರು.

ಬಿಎಸ್ ಯಡಿಯೂರಪ್ಪ ವಕೀಲರ ಮನವಿಗೆ ಅಡ್ವೊಕೇಟ್ ಜನರಲ್ ಆಕ್ಷೇಪಿಸಿದರು. ಹೈಕೋರ್ಟ್ ಸೂಚನೆಯಂತೆ ವಿಶೇಷ ಕೋರ್ಟ್ ಸಮನ್ಸ್ ಜಾರಿಗೊಳಿಸಿದೆ. ಹೀಗಾಗಿ ಸಮನ್ಸ್‌ಗೆ ತಡೆ ನೀಡದಂತೆ ಮನವಿ ಮಾಡಿದರು.

## ಮಕ್ಕಳ ಸರ್ವಾಂಗೀಣ ಅಭಿವೃದ್ಧಿಗೆ ಶಾಲಾ ಪೂರ್ವ ಶಿಕ್ಷಣ ಸಹಕಾರಿ : ಪಿ. ವೈ. ಶೆಟ್ಟಪ್ಪನವರ್



ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ :ಮಾ.14: ಮಕ್ಕಳ ಸರ್ವಾಂಗೀಣ ಅಭಿವೃದ್ಧಿಗೆ ಶಾಲಾ ಪೂರ್ವ ಶಿಕ್ಷಣ ಸಹಕಾರಿಯಾಗಿದೆ. ಪ್ರತಿ ಪೋಷಕರು ಮಕ್ಕಳನ್ನ ಅಂಗನವಾಡಿ ಕೇಂದ್ರಗಳಿಗೆ ಕಳುಹಿಸಬೇಕು ಎಂದು ಕೊಪ್ಪಳ ಜಿಲ್ಲಾ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಉಪನಿರ್ದೇಶಕ ಪರಶುರಾಮ್ ವೈ. ಶೆಟ್ಟೆಪ್ಪನವರ್ ಹೇಳಿದರು.

ಕೊಪ್ಪಳ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಕಲ್ಯಾಣ ಕರ್ನಾಟಕ ಪ್ರದೇಶ ಅಭಿವೃದ್ಧಿ ಮಂಡಳಿ ಹಾಗೂ ಕಲಿಕೆ ಟಾಟಾ ಟ್ರಸ್ಟ್ ಇವರ ಸಂಯುಕ್ತ ಆಶ್ರಯದಲ್ಲಿ ಶಾಲಾ ಪೂರ್ವ ಶಿಕ್ಷಣ ಬಲವರ್ಧನೆ ಕಾರ್ಯಕ್ರಮದಡಿಯಲ್ಲಿ ಗಂಗಾವತಿ ಯೋಜನೆಯ ಮುಕ್ಕುಂಪಿ ಗ್ರಾಮದ ಬೈಲುರಂಗ ಮಂದಿರ ಸಮುದಾಯ ಭವನದಲ್ಲಿ ಗುರುವಾರ ಹಮ್ಮಿಕೊಳ್ಳಲಾದ ಅಂಗನವಾಡಿ ಮಕ್ಕಳ "ಬಾಲಮೇಳ ಕಾರ್ಯಕ್ರಮ" ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ಅಂಗನವಾಡಿಯ ಮಕ್ಕಳ ಸರ್ವಾಂಗೀಣ ಅಭಿವೃದ್ಧಿಗೆ ಶಾಲಾ ಪೂರ್ವ ಶಿಕ್ಷಣ ಸಹಕಾರಿಯಾಗಿದೆ. ಮಕ್ಕಳ ಆರೋಗ್ಯ ಹಾಗೂ ಪೌಷ್ಠಿಕ ಆಹಾರ ನೀಡುವುದು ಅತ್ಯವಶ್ಯಕವಾಗಿದೆ. ಚಟುವಟಿಕೆ ಮೂಲಕ ಶಿಕ್ಷಣ ನೀಡುವದರಿಂದ ಮಕ್ಕಳ ಕಲಿಕೆ ಸುಲಭವಾಗುತ್ತದೆ. ಪ್ರತಿಯೊಂದು ಅಂಗನವಾಡಿಗಳಿಗೆ ಸ್ಮಾರ್ಟ್ ಟಿವಿಗಳಿದ್ದು, ಇಲ್ಲಿನ ಸ್ವಚ್ಛತೆ ಮತ್ತು ಈ ಊರಿನ ಗುರುಹಿರಿಯರ ಕಾಳಜಿಯನ್ನು ನೋಡಿದರೆ ಖಾಸಗಿ ಶಾಲೆಗಿಂತ ನಮ್ಮ ಶಾಲೆಗಳು ಯಾವುದರಲ್ಲೂ ಕಡಿಮೆ ಇಲ್ಲವೆಂದು ತಿಳಿಯುತ್ತದೆ ಎಂದು ಹೇಳಿದರು. ಕಾರ್ಯಕ್ರಮದಲ್ಲಿ ಗಂಗಾವತಿ ತಾಲೂಕಿನ ಶಿಶು ಅಭಿವೃದ್ಧಿ ಯೋಜನಾಧಿಕಾರಿ ಜಯಶ್ರೀ ಆರ್., ತಾಲೂಕು ಸಹಾಯಕ ಶಿಶು ಅಭಿವೃದ್ಧಿ ಯೋಜನಾಧಿಕಾರಿ ಪ್ರಸನ್ನ ಕುಮಾರ್, ಹನುಮಂತಪ್ಪ ತಳವಾರ್, ಮಂಜಪ್ಪ ಬಾಲಗೊಂಡರು, ವಿರುಪಾಕ್ಷಗೌಡ ಪಾಟೀಲ್, ರಂಗನಗೌಡ ಪೊಲೀಸ್ ಮದ್ದನಪ್ಪ ಬೋವಿ, ಗಂಗಪ್ಪ, ಹಾಗೂ ಅಂಗನವಾಡಿಯ ಹಿರಿಯ ಮೇಲ್ವಿಚಾರಕಿಯರು ಮತ್ತು ಮೇಲ್ವಿಚಾರಕಿಯರು, ಸ್ಥಳಿಯ ಮೂರು ಅಂಗನವಾಡಿಗಳ 3 ರಿಂದ 6 ವರ್ಷದ ಮಕ್ಕಳು ಹಾಗೂ ಮಕ್ಕಳ ತಂದೆ ತಾಯಿಗಳು, ಸಾರ್ವಜನಿಕರು, ಅಂಗನವಾಡಿ ಶಿಕ್ಷಕಿಯರು ಮತ್ತು ಸಹಾಯಕಿಯರು ಉಪಸ್ಥಿತರಿದ್ದರು.

## ರಾಯಚೂರು ಜಿಲ್ಲೆಯಲ್ಲಿ ತಾಪಮಾನ, ಬಿಸಿಗಾಳಿ ಪ್ರಮಾಣ ಹೆಚ್ಚಳ : ಸಾರ್ವಜನಿಕರಿಗೆ ಜಿಲ್ಲಾಡಳಿತದಿಂದ ಸಲಹೆಗಳು

ಮಲ್ಲಮ್ಮ ನುಡಿ ವಾರ್ತೆ

ರಾಯಚೂರುಮಾ.14:ರಾಯಚೂರು ಜಿಲ್ಲೆಯಲ್ಲಿ ತಾಪಮಾನ ಹಾಗೂ ಬಿಸಿಗಾಳಿಯ ಪ್ರಮಾಣ ಹೆಚ್ಚಾಗುತ್ತಿದೆ. ಭಾರತೀಯ ಹವಾಮಾನ ಇಲಾಖೆ ಹಾಗೂ ಕರ್ನಾಟಕ ನೈಸರ್ಗಿಕ ವಿಕೋಪ ಉಸ್ತುವಾರಿ ಕೇಂದ್ರದ ವರದಿಯಂತೆ ರಾಯಚೂರು ಜಿಲ್ಲೆಯಲ್ಲಿ ಅಧಿಕ ಉಷ್ಣಾಂಶ ದಾಖಲಾಗಿದ್ದು, ಬಿಸಿಗಾಳಿ (ಹೀಟ್ ವೇವ್) ಎಚ್ಚರಿಕೆ ನೀಡಲಾಗಿದೆ. ಹೀಟ್ ವೇವ್ ಸ್ಟ್ರೋಕ್ ನಿಂದಾಗಿ ಸಾರ್ವಜನಿಕರ ಆರೋಗ್ಯದ ಮೇಲೆ ದುಷ್ಪರಿಣಾಮ ಬೀರುವ ಸಾಧ್ಯತೆಯಿರುವುದರಿಂದ ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರವು ಮುಂಜಾಗ್ರತಾ ಕ್ರಮವಾಗಿ ಕೆಲವು ಸಲಹೆಗಳನ್ನು ನೀಡಿದ್ದು, ಎಲ್ಲಾ ಸಾರ್ವಜನಿಕರು ಇವುಗಳನ್ನು ಪಾಲನೆ ಮಾಡಿ ಆರೋಗ್ಯ ಕಾಪಾಡಿಕೊಳ್ಳಬೇಕು ಎಂದು ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರದ ಅಧ್ಯಕ್ಷರು ಆಗಿರುವ ಜಿಲ್ಲಾಧಿಕಾರಿಗಳಾದ ನಿತೀಶ್ ಕೆ ಅವರು ತಿಳಿಸಿದ್ದಾರೆ. ಸಾರ್ವಜನಿಕರು ರೇಡಿಯೋ, ಟಿವಿ, ದಿನಪತ್ರಿಕೆಗಳಲ್ಲಿ ಬಿಸಿಲಿನ ತಾಪಮಾನದ ಕುರಿತು ಮುನ್ಸೂಚನೆಗಳನ್ನು ಪಡೆದುಕೊಳ್ಳುವುದು., ಬಾಯಾರಿಕೆಯಿಲ್ಲದಿದ್ದರೂ ಸಾಧ್ಯವಾದಷ್ಟು ಹೆಚ್ಚಾಗಿ ನೀರನ್ನು ಕುಡಿಯುವುದು.. ತೆಳುವಾದ ಸಡಿಲವಾದ ಹತ್ತಿಯ ಉಡುಪುಗಳನ್ನು ಧರಿಸುವುದು, ಆದಷ್ಟು ಬಿಳಿ ಬಣ್ಣದ ಬಟ್ಟೆಗಳ ಬಳಕೆ ಒಳ್ಳೆಯದು., ಬಿಸಿಲಿನಲ್ಲಿ ಹೊರಗೆ ಹೋಗುವಾಗ ರಕ್ಷಣಾತ್ಮಕ ಕನ್ನಡಕಗಳು, ಟೋಪಿ, ಬೂಟುಗಳು ಅಥವಾ ಚಪ್ಪಲಗಳನ್ನು ಬಳಸಿ., ದೂರದ ಪ್ರಯಾಣವನ್ನು ರಾತ್ರಿ ವೇಳೆ ಮಾಡುವುದು ಉತ್ತಮ, ಒಂದು ವೇಳೆ ಪ್ರಯಾಣ ಮಾಡುವ ಸಂದರ್ಭ ಬಂದರೆ ಪ್ರಯಾಣ ಮಾಡುವಾಗ ನಿಮ್ಮೊಂದಿಗೆ



ನೀರನ್ನು ತೆಗೆದುಕೊಂಡು ಹೋಗುವುದು., ನೀವು ಹೊರಗೆ ಕೆಲಸ ಮಾಡುತ್ತಿದ್ದರೆ, ಟೋಪಿ ಅಥವಾ ಛತ್ರಿಯನ್ನು ಬಳಸಿ ಮತ್ತು ನಿಮ್ಮ ತಲೆ, ಕುತ್ತಿಗೆ, ಮುಖ ಮತ್ತು ಕೈಕಾಲುಗಳ ಮೇಲೆ ಒದ್ದೆಯಾದ ಬಟ್ಟೆಯನ್ನು ಸಹ ಬಳಸಿ., ಮನೆಯಲ್ಲಿ ತಯಾರಿಸಿದ ಪಾನೀಯಗಳಾದ ಲಸ್ಸಿ, ಶರಬತ್, ನಿಂಬೆನೀರು, ಮಜ್ಜಿಗೆ ಇತ್ಯಾದಿಗಳನ್ನು ಬಳಸಿ ಅದು ದೇಹವನ್ನು ಪುನಃ ತಂಪಾಗಿಡಲು ಸಹಾಯ ಮಾಡುತ್ತದೆ., ಪ್ರಾಣಿ/ಪಕ್ಷಿಗಳನ್ನು ನೆರಳಿನಲ್ಲಿ ಇರಿಸಿ ಮತ್ತು ಅವುಗಳಿಗೆ ಕುಡಿಯಲು ಸಾಕಷ್ಟು ನೀರು ನೀಡಿ., ಆದಷ್ಟು ಫ್ಯಾನಗಳನ್ನು ಬಳಸಿ, ಒದ್ದೆಯಾದ ಬಟ್ಟೆಗಳನ್ನು ಮತ್ತು ಆಗಾಗ್ಗೆ ತಣ್ಣೀರಿನಲ್ಲಿ ಸ್ನಾನ ಮಾಡಿ. ಕೆಲಸದ ಸಮಯವನ್ನು ಆದಷ್ಟು ತಂಪಾದ ಸಮಯದಲ್ಲಿ ಮಾಡುವುದು ಹಾಗೂ ಕೆಲಸದ ಸ್ಥಳದ ಬಳಿ ತಂಪಾದ ಕುಡಿಯುವ ನೀರನ್ನು ಒದಗಿಸಿ., ಕೆಲಸ ನಿರ್ವಹಿಸುವ ಗರ್ಭಿಣಿಯರು ಮತ್ತು ಅನಾರೋಗ್ಯದಲ್ಲಿರುವ ಕಾರ್ಮಿಕರಿಗೆ ಹೆಚ್ಚಿನ ಗಮನ ನೀಡಬೇಕು.. ಕಲ್ಲಂಗಡಿ, ಕರಬೂಜ, ಕಿತ್ತಳೆ ದ್ರಾಕ್ಷಿ, ಅನನಾಸ್, ಸೌತೆಕಾಯಿ, ಎಳನೀರನ್ನು ಹೆಚ್ಚಾಗಿ ಸೇವಿಸಬೇಕು., ನವಜಾತ ಶಿಶುಗಳು, ಹಿರಿಯ ನಾಗರಿಕರು ಹಾಗೂ ಚಿಕ್ಕ ಮಕ್ಕಳು, ಗರ್ಭಿಣಿಯರು, ಹೊರಾಂಗಣದಲ್ಲಿ ಕೆಲಸ ನಿರ್ವಹಿಸುವವರು, ಮಾನಸಿಕ ಸಮಸ್ಯೆಗಳಿಂದ ಬಳಲುತ್ತಿರುವವರು ಹಾಗೂ ಇತರ ಅರೋಗ್ಯ ಸಮಸ್ಯೆಗಳಿರುವವರು, ಅದರಲ್ಲೂ ವಿಶೇಷವಾಗಿ ಹೃದ್ರೋಗ ಹಾಗೂ ರಕ್ತದ ಒತ್ತಡದಿಂದ ಬಳಲುತ್ತಿರುವವರು ಹೆಚ್ಚು ಜಾಗರೂಕತೆ ವಹಿಸಬೇಕು ಎಂದು ಅವರು ಸಲಹೆ ನೀಡಿದ್ದಾರೆ.ಏನು ಮಾಡಬಾರದು:ಸೂರ್ಯನ ಶಾಖ ದಿನದಿಂದ ದಿನಕ್ಕೆ ಹೆಚ್ಚುತ್ತಿರುವ ಹಿನ್ನೆಲೆಯಲ್ಲಿ ಸಾರ್ವಜನಿಕರು ಏನು ಮಾಡಬಾರದು ಎಂಬುದರ ಕುರಿತು ಈ ಮುಂದಿನ ಸಲಹೆಗಳನ್ನು ಅರಿಯಬೇಕು. ಮಕ್ಕಳು ಅಥವಾ ಸಾಕುಪ್ರಾಣಿಗಳನ್ನು ಬಿಸಿಲಿನಲ್ಲಿ ನಿಲ್ಲಿಸಿದ ವಾಹನಗಳ ಹತ್ತಿರ ಬಿಡಬೇಡಿ. ವಾಹನಗಳ ಒಳಾಂಗಣದಲ್ಲಿನ ಹೆಚ್ಚಿನ ತಾಪಮಾನವು ಅವರಿಗೆ/ಅವುಗಳಿಗೆ ಅಪಾಯಕಾರಿಯಾಗಬಹುದು., ಕಪ್ಪು ಬಟ್ಟೆ ಅಥವಾ ಬಿಗಿಯಾದ ಬಟ್ಟೆಗಳನ್ನು ಧರಿಸುವುದನ್ನು ತಪ್ಪಿಸಿ., ಹೊರಗಿನ ತಾಪಮಾನ ಹೆಚ್ಚಾದಾಗ ಶ್ರಮದಾಯಕ ಚಟುವಟಿಕೆಗಳನ್ನು ತಪ್ಪಿಸಿ., ಮಧ್ಯಾಹ್ನ 12 ರಿಂದ 3 ರವರೆಗೆ ಹೊರಗೆ ಕೆಲಸ ಮಾಡುವುದನ್ನು ತಪ್ಪಿಸಿ., ಬಿಸಿಲಿನ ಸಮಯದಲ್ಲಿ ಅಡುಗೆ ಮಾಡುವುದನ್ನು ತಪ್ಪಿಸಿ., ಅಡಿಗೆ ಪ್ರದೇಶವನ್ನು ಸಮರ್ಪಕವಾಗಿ ಗಾಳಿಯಾಡಲು ಬಾಗಿಲು ಮತ್ತು ಕಿಟಕಿಗಳನ್ನು ತೆರೆಯಿರಿ., ದೇಹವನ್ನು ನಿರ್ಜಲೀಕರಣಗೊಳಿಸುವ ಆಲ್ಕೋಹಾಲ್, ಚಹಾ, ಕಾಫಿ ಮತ್ತು ಹಾನಿಕಾರಕ ಪಾನೀಯಗಳನ್ನು ಸೇವಿಸಬೇಡಿ. ಇವು ಹೊಟ್ಟೆ ನೋವನ್ನು ಉಂಟು ಮಾಡುತ್ತದೆ., ಹಾನಿಕಾರಕವಾದ ಆಹಾರ ಮತ್ತು ಹಳಸಿದ ಆಹಾರವನ್ನು ಸೇವಿಸಬೇಡಿ., ಚಪ್ಪಲಿ ಧರಿಸದೆ ಹೊರಹೋಗುವ ಅಭ್ಯಾಸವನ್ನು ತಪ್ಪಿಸಿ ಎಂದು ರಾಯಚೂರ ಜಿಲ್ಲಾಡಳಿತದಿಂದ ಸಲಹೆಗಳನ್ನು ನೀಡಲಾಗಿದೆ.

## ಶಾಸಕರಾದ ಡಾ.ಶೈಲೇಂದ್ರ ಅವರ ಬೆಲ್ದಾಳೆ ವಿರುದ್ಧದ ಚುನಾವಣೆ ತಕಾರರು ಅರ್ಜಿ ರದ್ದು

ಮಲ್ಲಮ್ಮ ನುಡಿ ವಾರ್ತೆ

ಬೀದರ್:ಮಾ.14: ದಕ್ಷಿಣ ವಿಧಾನಸಭೆ ಕ್ಷೇತ್ರದ ಶಾಸಕ ಡಾ.ಶೈಲೇಂದ್ರ ಬೆಲ್ದಾಳೆ ಅವರ ವಿರುದ್ಧ ಸಲ್ಲಿಕೆಯಾಗಿದ್ದ ಚುನಾವಣಾ ತಕರಾರು ಅರ್ಜಿಯನ್ನು ಹೈಕೋರ್ಟ್ ಜನಪ್ರತಿನಿಧಿಗಳ ವಿಶೇಷ ನ್ಯಾಯಪೀಠ ರದ್ದುಗೊಳಿಸಿ ಮಹತ್ವದ ತೀರ್ಪು ನೀಡಿದೆ.

2023ರ ಚುನಾವಣೆಯಲ್ಲಿ ಬೆಲ್ದಾಳೆ ಅವರು ದಕ್ಷಿಣ ವಿಧಾನಸಭೆ ಕ್ಷೇತ್ರದಿಂದ ಆಯ್ಕೆಯಾಗಿದ್ದರು. ಬೆಲ್ದಾಳೆ ಅವರು ಚಿಟ್ಟಾವಾಡಿ ನಿವಾಸಿ ಎಂದು ಪ್ರಮಾಣಪತ್ರದಲ್ಲಿ (ಅಫಿಡವಿಟ್ ನಲ್ಲಿ) ಸುಳ್ಳು ಮಾಹಿತಿ ಸಲ್ಲಿಸಿದ್ದಾರೆ ಎಂದು ಫಲಿತಾಂಶದ ಬಳಿಕ ರಾಜಕುಮಾರ ಮಡಕಿ ಎಂಬುವರು ಬೆಂಗಳೂರಿನ ಜನಪ್ರತಿನಿಧಿಗಳ ವಿಶೇಷ ನ್ಯಾಯಾಲಯದಲ್ಲಿ ಚುನಾವಣಾ ತಕರಾರು ಅರ್ಜಿ ಸಲ್ಲಿಸಿದ್ದರು. ಇದೊಂದು ಅಪರಾಧಿಕ ಪ್ರಕರಣವಾಗಿದ್ದು, ಇವರ ವಿರುದ್ಧ ಕ್ರಮ ಜರುಗಿಸಲು ಕೋರಿದ್ದರು.

ರಾಜಕುಮಾರ ಮಡಕಿ ಅವರು ಸಲ್ಲಿಸಿದ್ದ ಚುನಾವಣೆ ತಕರಾರು ಅರ್ಜಿಯಲ್ಲಿ ಯಾವುದೇ ಹುರುಳಿಲ್ಲ. ಇವರು ಉಲ್ಲೇಖಿಸಿದ ವಿಷಯ ಸತ್ಯಕ್ಕೆ ದೂರವಾಗಿವೆ. ಮುಖ್ಯವಾಗಿ ಇವರು ಚುನಾವಣೆ ಸ್ಪರ್ಧಿಯೂ ಸಹ ಅಲ್ಲ. ಇದೊಂದು ರಾಜಕೀಯಪ್ರೇರಿತ ಹಾಗೂ ದುರುದ್ದೇಶಪೂರಿತ ಅರ್ಜಿಯಾಗಿದೆ. ಹೀಗಾಗಿ ಈ ಅರ್ಜಿ ರದ್ದುಗೊಳಿಸಬೇಕು ಎಂದು ಬೆಲ್ದಾಳೆ ಅವರ ಪರ ವಕೀಲ ಗೌರೀಶ ಖಾಶೆಂಪುರ ಹೈಕೋರ್ಟ್ ಜನಪ್ರತಿನಿಧಿಗಳ ವಿಶೇಷ ನ್ಯಾಯಪೀಠಕ್ಕೆ ಮೊರೆ ಇಟ್ಟಿದ್ದರು. ಒಂದೂವರೆ ವರ್ಷ ವಿಚಾರಣೆ ಬಳಿಕ ನ್ಯಾಯಮೂರ್ತಿ ಎಂ.ನಾಗಪ್ರಸನ್ನ ಅವರುಳ್ಳ ಏಕಸದಸ್ಯೀಯ ಪೀಠ ಕಳೆದ ದಿ.7ರಂದು ರಾಜಕುಮಾರ ಮಡಕಿ ಅರ್ಜಿ ರದ್ದುಗೊಳಿಸಿ ತೀರ್ಪು ನೀಡಿದ್ದಾರೆ.

ಬೆಲ್ದಾಳೆ ಅವರು ಚಿಟ್ಟಾವಾಡಿ ನಿವಾಸಿ ಇರುವ ಬಗ್ಗೆ ಹಾಗೂ ಇಲ್ಲಿ ಆಸ್ತಿ ಹೊಂದಿರುವ ಕುರಿತ ದಾಖಲೆ ಸಲ್ಲಿಕೆ, ನಾಮಪತ್ರ ಸಲ್ಲಿಸುವ ವೇಳೆ ನೀಡಿದ್ದ ಪ್ರಮಾಣಪತ್ರಗಳು ಹಾಗೂ ದಾಖಲೆಗಳ ಪರಿಶೀಲನೆ ನಡೆಸಿ ಚುನಾವಣಾಧಿಕಾರಿಗಳು ನಾಮಪತ್ರ ಸ್ವೀಕರಿಸಿರುವುದು ಸೇರಿ ಎಲ್ಲ ಅಂಶಗಳನ್ನು ಪರಿಗಣಿಸುವ ಜೊತೆಗೆ ಅರ್ಜಿದಾರರ ವಾದದಲ್ಲಿ ಯಾವುದೇ ಹುರುಳಿಲ್ಲ ಎಂದು ಗೌರೀಶ ಖಾಶೆಂಪುರ ಅವರು ನ್ಯಾಯಪೀಠಕ್ಕೆ ಮನವರಿಕೆ ಮಾಡಿಕೊಡುವಲ್ಲಿ ಸಫಲರಾಗಿದ್ದರು. ಇವರ ವಾದವನ್ನು ಪುರಸ್ಕರಿಸಿ ನ್ಯಾಯಪೀಠ ತಕರಾರು ಅರ್ಜಿ ರದ್ದುಗೊಳಿಸಿ, ಈ ಪ್ರಕರಣ ವಿಲೇವಾರಿ ಮಾಡಿದೆ.

ಪ್ರಕರಣದಲ್ಲಿ ಪರಾಜಿತ ಅಭ್ಯರ್ಥಿ ನೇರವಾಗಿ ದೂರು ಸಲ್ಲಿಸಿಲ್ಲ. ಬೇರೆಯವರ ಮೂಲಕ ಅರ್ಜಿ ಸಲ್ಲಿಸಿದ್ದರು. ಎಲ್ಲ ಹಂತದಲ್ಲೂ ಅರ್ಜಿದಾರರ ಆರೋಪಗಳು ಸುಳ್ಳು ಎಂಬುದು ಸಾಬೀತಾದ ಕಾರಣ ಅರ್ಜಿ ರದ್ದಾಗಿದೆ. ಚುನಾವಣೆ ವೇಳೆ ಸಲ್ಲಿಕೆಯಾಗುವ ಪ್ರಮಾಣಪತ್ರದಲ್ಲಿನ ದೋಷಗಳ ಬಗ್ಗೆ ಪ್ರಜಾಪ್ರತಿನಿಧಿ ಕಾಯ್ದೆಯ ಅಡಿ ದೂರು ಸಲ್ಲಿಸುವ ಹಕ್ಕು ಚುನಾವಣಾ ಆಯೋಗಕ್ಕೆ ಮಾತ್ರ ಇರಲಿದೆ ಎಂದು ಸಹ ನ್ಯಾಯಪೀಠ ಸ್ಪಷ್ಟಪಡಿಸಿದೆ ಎಂದು ಗೌರೀಶ ಖಾಶೆಂಪುರ ತಿಳಿಸಿದ್ದಾರೆ.

## ಬಾವಗಿಯಲ್ಲಿ ಸಂಭ್ರಮದ ಹೋಳಿ

ಮಲ್ಲಮ್ಮ ನುಡಿ ವಾರ್ತೆ

ಬೀದರ. ಮಾ. 14 : ಬೀದರ್ ತಾಲ್ಲೂಕಿನ ಬಾವಗಿ ಗ್ರಾಮದಲ್ಲಿ ಹೋಳಿ ಹಬ್ಬದ ಪ್ರಯುಕ್ತ ಯುವಕರು ಹಾಗೂ ಮಕ್ಕಳು ಶುಕ್ರವಾರ ಬಣ್ಣದೋಕುಳಿ ಆಡಿದರು.ಯುವಕರು ಸ್ನೇಹಿತರ ಮನೆಗೆ ತೆರಳಿ ಬಣ್ಣ ಹಚ್ಚಿ ಡಿ ಜೆ ಸೌಂಡ್ ಗೆ ಹೆಜ್ಜೆ ಹಾಕಿದರು ಈ ಸಂದರ್ಭದಲ್ಲಿ ಗುರು ಭದ್ರೇಶ್ವರ ಸಂಸ್ಥಾನದ ಶಾಂತಕುಮಾರ್ ಸ್ವಾಮಿ ಯುವ ಮುಖಂಡರಾದ ಲೋಕೇಶ್



ಕನಶೆಟ್ಟಿ, ಗುಂಡಯ್ಯ ಸ್ವಾಮಿ, ಆನಂದ ಸ್ವಾಮಿ, ಸಾಯಿನಾಥ್, ಮಹೇಶ್ ಸೇರಿದಂತೆ ಹಲವು ಉಪಸ್ಥಿತರಿದ್ದರು.

Printed, Published and Owned by: Ramesh Reddy and Printed at Metropolitan Media Company Ltd., Plot No.224, in Sy.No.41/2, 41/B & 42, Kapnoor 2nd stage, Industrial Area, Kalburagi-585104. Published at Sy.No. 466, TMC No. 22-405, First Floor, Gada Complex, Opp. Inspection Bungalow, Humnabad-585330.
Editor: Ramesh Reddy, Office Ph. No: +91 9449732000.

## ಮಾ.21 ರಿಂದ ಎಸ್‌ಎಸ್‌ಎಲ್‌ಸಿ ಪರೀಕ್ಷೆ-1
## ಪರೀಕ್ಷಾ ಕೇಂದ್ರಗಳ ಸುತ್ತ 200 ಮೀ. ವ್ಯಾಪ್ತಿ ನಿಷೇಧಾಜ್ಞೆ ಜಾರಿಗೊಳಿಸಿ ಜಿಲ್ಲಾಧಿಕಾರಿ ಆದೇಶ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಮಾ.14-ಜಿಲ್ಲೆಯಾದ್ಯಂತ 64 ಪರೀಕ್ಷಾ ಕೇಂದ್ರಗಳಲ್ಲಿ ಮಾ.21ರಿಂದ ಏ.04ರವರೆಗೆ ಕರ್ನಾಟಕ ಶಾಲಾ ಪರೀಕ್ಷೆ ಮತ್ತು ಮೌಲ್ಯ ನಿರ್ಣಯ ಮಂಡಳಿ ವತಿಯಿಂದ ಎಸ್‌ಎಸ್‌ಎಲ್‌ಸಿ ಪರೀಕ್ಷೆ-1 ನಡೆಯಲಿದ್ದು, ಪರೀಕ್ಷಾ ಕೇಂದ್ರಗಳ ಸುತ್ತಲೂ 200 ಮೀಟರ್ ಆವರಣವನ್ನು ಭಾರತೀಯ ನಾಗರಿಕ ಸುರಕ್ಷಾ ಸಂಹಿತಾ 2023 ರ ಕಲಂ 163 ಮೇರೆಗೆ ನಿರ್ಬಂಧಿತ ಪ್ರದೇಶವೆಂದು ಘೋಷಿಸಿ ಜಿಲ್ಲಾ ದಂಡಾಧಿಕಾರಿಯೂ ಆಗಿರುವ ಜಿಲ್ಲಾಧಿಕಾರಿ ಪ್ರಶಾಂತ್ ಕುಮಾರ್ ಮಿಶ್ರಾ ಅವರು ಆದೇಶಿಸಿದ್ದಾರೆ. ಪರೀಕ್ಷಾ ಕೇಂದ್ರಗಳ ಸುತ್ತಲೂ 200 ಮೀಟರ್ ಆವರಣದಲ್ಲಿನ ಜೆರಾಕ್ಸ್ ಸೆಂಟರ್ ಮತ್ತು ಇಂಟರ್‌ನೆಟ್ ಸೆಂಟರ್‌ಗಳನ್ನು ಕಾರ್ಯನಿರ್ವಹಿಸದಂತೆ ಪ್ರತಿಬಂಧಿಸಿ ಆದೇಶಿಸಿದ್ದಾರೆ.

ಆ ಪ್ರದೇಶದಲ್ಲಿ ಅನಧಿಕೃತ ವ್ಯಕ್ತಿ ಮತ್ತು ವ್ಯಕ್ತಿಗಳ ಗುಂಪುಗಳಿಗೆ ಪ್ರವೇಶವನ್ನು ನಿಷೇಧಿಸಿದೆ. ಈ ಆದೇಶವು ಪರೀಕ್ಷೆಯ ಮೇಲ್ವಿಚಾರಣೆ ಕಾರ್ಯನಿರ್ವಹಿಸುವ ಸಿಬ್ಬಂದಿಗಳಿಗೆ ಅನ್ವಯಿಸುವುದಿಲ್ಲ ಎಂದು ಅವರು ಹೊರಡಿಸಿರುವ ಆದೇಶದಲ್ಲಿ ತಿಳಿಸಿದ್ದಾರೆ.



ಬಸವಕಲ್ಯಾಣ:- ಇಲ್ಲಿನ ಡೈಮಂಡ್ ಕಾಲೇಜಿನ ಉಪನ್ಯಾಸಕರ ಸಿಬ್ಬಂದಿ ವರ್ಗದವರು ಒಬ್ಬರಿಗೊಬ್ಬರು ಬಣ್ಣ ಹಚ್ಚುವುದರ ಮೂಲಕ ಹೋಳಿ ಹಬ್ಬವನ್ನು ಸಡಗರ ಸಂಭ್ರಮದಿಂದ ಆಚರಿಸಲಾಯಿತು.



ಬಸವಕಲ್ಯಾಣ :- ತಾಲ್ಲೂಕಿನಾದ್ಯಂತ ಪ್ರತಿ ವರ್ಷದಂತೆ ಈ ವರ್ಷವೂ ಕೂಡ ಹೋಳಿ ಹಬ್ಬವನ್ನು ಸಡಗರ ಸಂಭ್ರಮದಿಂದ ಆಚರಿಸಲಾಯಿತು. ಭಾವ್ಯಕತೆಯ ಸಂಕೇತವಾಗಿರುವ ಈ ಹಬ್ಬವು ವಿವಿಧ ರೀತಿಯ ಬಣ್ಣವನ್ನು ಮುಖಕ್ಕೆ ಹಚ್ಚುವುದರ ಮೂಲಕ ನಾವೆಲ್ಲರೂ ಒಂದು ಎಂದು ಸಂದೇಶ ಸಾರುವ ಹಬ್ಬ ಇಲ್ಲಿಯೂ ನ್ಯಾಯವಾದಿ ರಾಜಶೇಖರ ನಂದಗೆ. ಉಪನ್ಯಾಸಕರಾದ ಕಾಶಿನಾಥ ನಿಣ್ಣೆ. ಅಂಕಣಕಾರರಾದ ನಾಗಪ್ಪಾ ನಿಣ್ಣೆ ಸೇರಿದಂತೆ ಅನೇಕರು ಸಹ ಹೋಳಿ ಹಬ್ಬದಲ್ಲಿ ಪಾಲ್ಗೊಂಡ ದೃಶ್ಯ ಚಿತ್ರದಲ್ಲಿ ಕಾಣಬಹುದು.



ಬಸವಕಲ್ಯಾಣ :- ನಗರದಲ್ಲಿ ನಾಯವಾದಿ ಸಂಘದ ಸಧ್ಯಸರು ಒಬ್ಬರಿಗೊಬ್ಬರು ರಂಗು ಹಚ್ಚಿ ಹೋಳಿ ಹಬ್ಬವನ್ನು ಸಂಭ್ರಮದಿಂದ ಆಚರಣೆ ಮಾಡಲಾಯಿತು.

## ಕಲಾವಿದ ಡಾ. ಸಿದ್ರಾಮ ವಾಘಮಾರೆ ಇವರಿಗೆ "ಸಾಹಿತ್ಯ ಸೌರಭ"ರಾಷ್ಟ್ರ ಪ್ರಶಸ್ತಿ.

ಮಲ್ಲಮ್ಮ ನುಡಿ ವಾರ್ತೆ

ಹುಮನಾಬಾದ:ಮಾರ್ಚ್ 14, ಗೊಂಧಳಿ ಹಾಡುಗಳನ್ನು ಸಾಹಿತ್ಯರೂಪದಲ್ಲಿ ಸಂಗ್ರಹಿಸಿ, ಅಳಿವಿನ ಅಂಚಿನಲ್ಲಿರುವ ಕಲೆಯನ್ನು ಉಳಿಸಿಕೊಂಡು ಬರುತ್ತಿರುವ ಡಾ. ಸಿದ್ರಾಮ ದಾದಾರಾವ್ ವಾಘಮಾರೆ ಇವರಿಗೆ "ಸಾಹಿತ್ಯ ಸೌರಭ" ರಾಷ್ಟ್ರಪ್ರಶಸ್ತಿ ನೀಡುತ್ತಿರುವುದಾಗಿ, ರಾಜ್ಯ ಬರಹಗಾರರ ಸಂಘ(ರಿ) ಹೂವಿನಹಡಗಲಿಯ ಸಂಸ್ಥಾಪಕ ರಾಜ್ಯಅಧ್ಯಕ್ಷರಾದ ಮಧು ನಾಯ್ಕ ಲಂಬಾಣಿಯವರು ಪತ್ರಿಕಾ ಪ್ರಕಟಣೆ ಮೂಲಕ ತಿಳಿಸಿರುವರು. ಹುಮನಾಬಾದ ತಾಲ್ಲೂಕಿನ ಐತಿಹಾಸಿಕ ಹಿನ್ನಲೆಯುಳ್ಳ ಜಲಸಂಗಿ ಗ್ರಾಮದಲ್ಲಿ ದಿನಾಂಕ: 1-12-1961 ರಂದು ಜನಿಸಿದ ಇವರು ಈ ಇಳಿ ವಯಸ್ಸಿನಲ್ಲಿಯೂ ಗೊಂಧಳಿ ಹಾಡುಗಳು, ಕಥಾ ಕೀತ9ನೆಗಳು, ತತ್ವ ಪದಗಳ



ಹಾಡುಗಳನ್ನು ಸಾಹಿತ್ಯ ರೂಪದಲ್ಲಿ ಸಂಗ್ರಹಿಸುತ್ತಾ ಆ ಹಾಡುಗಳನ್ನು ಗುಲಬಗಾ9 ಆಕಾಶವಾಣಿ, ಬೀದರ ಉತ್ಸವ, ಹಂಪಿ ಉತ್ಸವಗಳಲ್ಲಿ ಹಾಡಿ ಸನ್ಮಾನಿತರಾಗಿರುವರು. ಕನಾ9ಟಕದಲ್ಲಿ ಮಾತ್ರ ಕಲೆಯನ್ನು ಸೀಮಿತವಾಗಿಸದೆ ನೆರೆಯ ರಾಜ್ಯಗಳಾದ ಆಂಧ್ರಪ್ರದೇಶ, ಮಹಾರಾಷ್ಟ ಮತ್ತು ತೆಲಂಗಾಣ ರಾಜ್ಯಗಳಲ್ಲಿ ಗೋಂಧಳಿ ಕಲೆಯನ್ನು ಪ್ರಸ್ತುತಪಡಿಸಿರುವರು. ಇವರ ಕಲೆಗೆ "ಬೀದರ ಜಿಲ್ಲಾ ರಾಜೋತ್ಸವ ಪ್ರಶಸ್ತಿ " "ಗುಲಬಗಾ9 ವಿಶ್ವವಿದ್ಯಾಲಯದ ರಾಜ್ಯೋತ್ಸವ ಪ್ರಶಸ್ತಿ" "ಕನಾ9ಟಕ ಜಾನಪದ ಅಕಾಡೆಮಿಯ ರಾಜ್ಯ ಪ್ರಶಸ್ತಿ "ಗಳನ್ನು ಪಡೆದಿರುವರು.

ಅರೆಅಲೆಮಾರಿ ಸಮೂದಾಯದ ಕಲಾವಿದರನ್ನು ಒಂದಡೆ ಸೇರಿಸಿ ಅವರಿಗೆ ಕಲೆಯ ಕುರಿತು ಜಾಗೃತಿ ಮೂಡಿಸಲು ಬೀದರ ಜಿಲ್ಲೆಯಲ್ಲಿಯೇ ನಾಲ್ಕು ರಾಜ್ಯ ಮಟ್ಟದ ಸಮಾವೇಶಗಳನ್ನು ಮಾಡಿರುವರು. ಇವರ ಸಂದಶ9ನ ಮತ್ತು ಹಾಡುಗಳು ಗುಲಬಗಾ9 ಆಕಾಶವಾಣಿ ನಿಲಯದಿಂದ ಆಗಾಗ ಪ್ರಸಾರವಾಗುತ್ತಿರುತ್ತವೆ. ಈ ಕಾರಣಗಳಿಂದ ಡಾ. ಸಿದ್ರಾಮ ಡಿ ವಾಘಮಾರೆರವರಿಗೆ ರಾಷ್ಟ್ರ ಮಟ್ಟದ ಪ್ರಶಸ್ತಿಗೆ ಆಯ್ಕೆ ಮಾಡಿದ್ದು ಶಿವಮೊಗ್ಗದ ಕನ್ನಡ ಸಂಘದಲ್ಲಿ ಇದೇ ಮಾಚ9 16, 2025ರಂದು ಪ್ರಶಸ್ತಿ ಪ್ರದಾನ ಮಾಡಲಾಗುವುದೆಂದು ಮಧುನಾಯ್ಕ ಲಂಬಾಣಿ ಪತ್ರಿಕಾ ಪ್ರಕಟಣೆ ಮೂಲಕ ತಿಳಿಸಿರುವರು.

## ಯಶಸ್ವಿನಿ ಆರೋಗ್ಯರಕ್ಷಣಾ ಯೋಜನೆಯಡಿ ಸದಸ್ಯರನ್ನು ನೊಂದಾಯಿಸಲು ಆರಂಭ

ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ: ಮಾರ್ಚ್ 14, (ಕ.ವಾ) 2024-25ನೇ ಸಾಲಿಗೆ ಸಹಕಾರಿಗಳಿಗಾಗಿ ಯಶಸ್ವಿನಿ ಆರೋಗ್ಯರಕ್ಷಣಾ ಯೋಜನೆಯನ್ನು ಜಾರಿಗೊಳಿಸಲಾಗಿದ್ದು, ಈ ಯೋಜನೆಯಲ್ಲಿ ಸದಸ್ಯರನ್ನು ನೊಂದಾಯಿಸಲು ಆರಂಭವಾಗಿದೆ ಎಂದು ಯಾದಗಿರಿ ಸಹಕಾರ ಸಂಘಗಳ ಉಪನಿಬಂಧಕರು ಪವನಕುಮಾರ ಅವರು ತಿಳಿಸಿದ್ದಾರೆ.

ಯಾದಗಿರಿ ಜಿಲ್ಲೆಯ ಪ್ರಾಥಮಿಕ ಕೃಷಿ ಪತ್ತಿನ ಸಹಕರ ಸಂಘಗಳ, ಪಿಕಾರ್ಡ ಬ್ಯಾಂಕುಗಳ, ಹಾಲು ಉತ್ಪಾದಕರ ಸಹಕಾರ ಸಂಘಗಳ, ಟಿ.ಎ.ಪಿ.ಸಿ.ಎಂ. ಎಸ್‌ಗಳ ಹಾಗೂ ಕರ್ನಾಟಕ ಸಹಕಾರ ಸಂಘಗಳ ಕಾಯ್ದೆ 1959ರಡಿ ಅಥವಾ ಕರ್ನಾಟಕ ಸೌಹಾರ್ದ ಸಹಕಾರಿ ಕಾಯ್ದೆ 1997ರಡಿ ಅಥವಾ ಬಹುರಾಜ್ಯ ಸಹಕಾರಿ ಸಂಘಗಳ ಕಾಯ್ದೆ 2002ರಡಿ ನೊಂದಾಯಿಸಿ ಕಾರ್ಯನಿರ್ವಹಿಸುತ್ತಿರುವ ಯಾವುದೆ ಸಹಕಾರ ಸಂಘಗಳ ಸದಸ್ಯರು ಮತ್ತು ಗ್ರಾಮಿಣ ಸಹಕಾರ ಸಂಘಗಳ, ಜಿಲ್ಲಾಕೇಂದ್ರ ಸಹಕಾರ ಬ್ಯಾಂಕುಗಳ ಮತ್ತು ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘಗಳ ವತಿಯಿಂದ ಸಂಗಟಿಸಲ್ಪಟ್ಟಿರುವ ಸ್ವ-ಸಹಾಯ ಗುಂಪುಗಳ ಸದಸ್ಯರುಗಳು ಗರಿಷ್ಟ 4 ಸದಸ್ಯರ ಕುಟುಂಬಕ್ಕೆ ವಾರ್ಷಿಕ 500 ರೂ.ಗಳ ವಂತಿಗೆ ಮತ್ತು ನಾಲ್ಕಕ್ಕಿಂತ ಹೆಚ್ಚಿನ ಸದಸ್ಯರುಳ್ಳ ಕುಟುಂಬದ ಪ್ರತಿಯೊಬ್ಬ ಸದಸ್ಯರಿಗೆ ಶೇ.20%ರಷ್ಟು ಹೆಚ್ಚವರಿಯಾಗಿ ಅಂದರೆ ಪ್ರತಿ ಹೆಚ್ಚುವರಿ ಸದಸ್ಯಗೆ 100 ರೂ.ಗಳ ಪಾವತಿಸಿ ನೊಂದಾಯಿಸಬಹುದು. ಹಾಗೂ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡದ ಸದಸ್ಯರಿಗೆ ವಿಶೇಷಗಟಕ ಯೋಜನೆ ಹಾಗೂ ಗಿರಿಜನ ಉಪಯೋಜನೆಯಡಿ ಸಹಾಯಧನ ನೀಡುವ ಮೂಲಕ ಅವರ ವಾರ್ಷಿಕ ಸದಸ್ಯತ್ವದ ವಂತಿಗೆಯನ್ನು ಸರಕಾರವೆ ಭರಿಸುತ್ತದೆ. ನಗರ ಸಹಕಾರಿಗಳ ಆರೋಗ್ಯರಕ್ಷಣಾ ಯೋಜನೆಯಡಿ ನೊಂದಾಯಿಸಲು ಯೋಜನೆಯಡಿ ಗರಿಷ್ಟ 4 ಸದಸ್ಯರ ಕುಟುಂಬಕ್ಕೆ ವಾರ್ಷಿಕ ವಂತಿಗೆ 1000 ರೂ.ಗಳ ವಂತಿಗೆ ಮತ್ತು 4ಕ್ಕಿಂತ ಹೆಚ್ಚಿನ ಸದಸ್ಯರುಳ್ಳ ಕುಟುಂಬದ ಪ್ರತಿಯೊಬ್ಬ ಸದಸ್ಯರಿಗೆ ಶೇ 20%ರಷ್ಟು ಹೆಚ್ಚುವರಿಯಾಗಿ ಅಂದರೆ ಪ್ರತಿ ಹೆಚ್ಚುವರಿ ಸದಸ್ಯರಿಗೆ 200 ರೂ.ಗಳ ಪಾವತಿಸಿ, ನೊಂದಾಯಿಸಬಹುದಾಗಿದೆ. ಯಶಸ್ವಿನಿ ಯೋಜನೆಯಡಿ ಸದಸ್ಯರಾಗಲು ಸಹಕಾರ ಸಂಘಗಳಲ್ಲಿ ಸದಸ್ಯರಾಗಿ ಯಶಸ್ವಿನಿ ಯೋಜನೆಯಡಿ ನೊಂದಾಯಿಸುವ ದಿನಾಂಕಕ್ಕೆ । ತಿಂಗಳು ಕಳೆದಿರಬೇಕು. ಹಾಗೂ ವಯೋಮಿತಿ ನಿರ್ಬಂಧ ವಿರುವುದಿಲ್ಲ. ಈ ಯೋಜನೆಯಡಿ ಯಶಸ್ವಿನಿ ಸದಸ್ಯರುಗಳನ್ನು ನೊಂದಾಯಿಸುವ ನೊಂದಣಿ ಪ್ರಕ್ರಿಯೆಯನ್ನು ಜನವರಿ 1 ರಿಂದ ಪ್ರಾರಂಭಿಸಲಾಗಿದೆ. ಈ ಯೋಜನೆಯಡಿ ಸರಿ ಸೂಮಾರು 1650 ಖಾಯಿಲೆಗಳಿಗೆ ಚಿಕಿತ್ಸೆಯನ್ನು ಯಶಸ್ವಿ ಯೋಜನೆಯಡಿ ಅಳವಡಿಸಿಕೊಂಡಿರುವದರಿಂದ ಈ ಯೋಜನೆಯ ಫಲಾನುಭವಿಗಳ ಕುಟುಂಬಕ್ಕೆ ವಾರ್ಷಿಕ ವೈದ್ಯಕಿಯ ಚಿಕಿತ್ಸಾ ವೆಚ್ಚದ ಗರಿಷ್ಟ ಮೀತಿ 5 ಲಕ್ಷ ರೂ.ಗಳ ನಿಗದಿಪಡಿಸಿದೆ. ರಾಜ್ಯದ ಯಾವುದೇ ಯಶಸ್ವಿನಿ ನೆಟ್‌ವರ್ಕ ಆಸ್ಪತ್ರೆಯಲ್ಲಿ ನಗದುರಹಿತಾ ಚಿಕಿತ್ಸಾ ಪಡೆಯಲು ಅವಕಾಶವಿರುತ್ತದೆ. ಪ್ರಯೋಜನೆಯು 2025ರ ಮಾರ್ಚ್ 31ರ ಒಳಗೆ ಯೋಜನೆಯ ನೊಂದಾಯಿಸಿಕೊಂಡು ಪ್ರಯೋಜನೆ ಪಡೆದುಕೊಳ್ಳಬೇಕು. ಹಾಗೂ 2024-25ನೇ ಯಶಸ್ವಿನಿ ಯೋಜನೆಯ ಅವಧಿಯು 2025ರ ಏಪ್ರಿಲ್ 1 ರಿಂದ 2026ರ ಮಾರ್ಚ್ 31ರ ವರೆಗೆ ಜಾರಿಯಲ್ಲಿರುತ್ತದೆ.

ಹೆಚ್ಚಿನ ಮಾಹಿತಿಗಾಗಿ ಸ್ಥಳಿಯ ಸಹಕಾರ ಸಂಘಗಳು ಹಾಗೂ ಸಹಕಾರ ಇಲಾಖೆಯ ಕಛೇರಿಗಳನ್ನು ಖುದ್ದಾಗಿ ಭೇಟಿ ನೀಡಿ ಅಥವಾ ಸಹಕಾರ ಸಂಘಗಳ ಉಪ ನಿಬಂಧಕರ ಕಚೇರಿ ಯಾದಗಿರ ದೂ.ಸಂ. 08473 200424, ಯಾದಗಿರ ಸಹಕಾರ ಸಂಘಗಳ ಸಹಾಯಕ ನಿಬಂಧಕರ ಕಛೇರಿ ದೂ.ಸಂ. 08473 252379, 7899084467. ಹುಣಸಗಿ ಸಹಕಾರ ಅಭಿವೃದ್ಧಿ ಅಧಿಕಾರಿ ಕಛೇರಿ ದೂ.ಸಂ. 9886549075. ಶಹಾಪೂರ ಸಹಕಾರ ವಿಸ್ತಿರ್ಣಾಧಿಕಾರಿ ಮೊ.ನಂ. 9972786111, ವಡಗೇರಾ ಸಹಕಾರ ವಿಸ್ತಿರ್ಣಾಧಿಕಾರಿ ಮೊ.ನಂ. 9901584772. ಯಾದಗಿರ ಸಹಕಾರ ವಿಸ್ತಿರ್ಣಾಧಿಕಾರಿ ಮೊ.ನಂ.9972246622.ಗುರುಮಠಕಲ್ ಸಹಕಾರ ವಿಸ್ತಿರ್ಣಾಧಿಕಾರಿ ಮೊ.ನಂ.9886014278ಗೆ ಸಂಪರ್ಕಿಸಬಹುದು ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಪಿಕೆಪಿಎಸ್ ನೂತನ ನಿರ್ದೇಶಕರಾಗಿ ಆಯ್ಕೆಯಾದ ಈರಮ್ಮ ರಾಂಪುರ ಅವರಿಗೆ ಸನ್ಮಾನ



ಮಲ್ಲಮ್ಮ ನುಡಿ ವಾರ್ತೆ

ಚಿಟಗುಪ್ಪ:- ಪಟ್ಟಣದ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘದ ನಿರ್ದೇಶಕರಾಗಿ ಇತ್ತೀಚಿಗೆ ಆಯ್ಕೆಯಾದ ಈರಮ್ಮ ರಾಮಲಿಂಗರೆಡ್ಡಿ ರಾಂಪುರ ಅವರಿಗೆ ಸಮಾಜ ಕಾರ್ಯಕರ್ತ ಮಹಮ್ಮದ್ ಅಸ್ಲಾಂಮಿಯಾ ಶಾಲು ಹೊದಿಸಿ ಸನ್ಮಾನಿಸಿ ಶುಭ ಕೋರಿದರು. ಈ ಸಂದರ್ಭದಲ್ಲಿ ನಿವೃತ್ತ ಶಿಕ್ಷಕ ಜಗನಾಥ ಗಾದಾ, ಅನೀಲಕುಮಾರ್ ಎಂ. ಸಿಂಧೆ, ರಾಜಕುಮಾರ ಆರ್. ಹಡಪದ, ನರೇಂದ್ರರೆಡ್ಡಿ ರಾಂಪುರ ಉಪಸ್ಥಿತರಿದ್ದರು.

ಜಾಹೀರಾತಿಗಾಗಿ ಇಂದೇ
ಸಂಪರ್ಕಿಸಿರಿ:8971850542

## ಸಂಭ್ರಮದಿಂದ ಹೋಳಿ ಹಬ್ಬ ಆಚರಣೆ



ಮಲ್ಲಮ್ಮ ನುಡಿ ವಾರ್ತೆ

ಚಿಟಗುಪ್ಪ: ಪಟ್ಟಣದ ಮಂಕಾಲರವರ ತೋಟದಲ್ಲಿ ಪ್ರತಿ ವರ್ಷದಂತೆ ಈ ವರ್ಷವೂ ಕೂಡ ಸಡಗರ ಸಂಭ್ರಮದಿಂದ ಹೋಳಿ ಹಬ್ಬ ಆಚರಿಸಲಾಯಿತ್ತು. ಸ್ನೇಹಿತರು ಪರಸ್ಪರ ಒಬ್ಬರೊಬ್ಬರು ಬಣ್ಣ ಎರಚಿ ಸಂತಸಪಟ್ಟರು. ಬಣ್ಣ ಹಚ್ಚಿಕೊಂಡು ಹಾಡುಗಳಿಗೆ ಹೆಜ್ಜೆ ಹಾಕುತ್ತಾ ಸಂಭ್ರಮಿಸಿದರು. ಈ ಸಂದರ್ಭದಲ್ಲಿ ರಾಮದಾಸ್ ಮಂಕಾಲ, ಅನೀಲಕುಮಾರ್ ಸಿಂಧೆ, ಶಾಂತಕುಮಾರ್ ಪಾಟೀಲ್, ಡಾ. ಮಾರುತಿ ಸಿಂಧೆ, ಡಾ. ಸಂತೋಷ ಐನಾಪುರ್, ರಾಜಕುಮಾರ ಆರ್. ಹಡಪದ, ಗುಂಡಪ್ಪ ಕೋರಿ, ಮಲ್ಲಿಕಾರ್ಜುನ ತಿರಲಾಪುರ್, ನರೇಂದ್ರರೆಡ್ಡಿ ರಾಂಪುರ, ಬಸವರಾಜ ಪಡಗಿ, ವೆಂಕಟ ಪೂಜಾರಿ, ಮಾಣಿಕರೆಡ್ಡಿ ರಾಂಪುರ, ಬಸಪ್ಪ ಯಲಮಡಗಿ, ಪಿಲಿಪ್ಸನ್, ಸೇರಿದಂತೆ ಇತರರು ಉಪಸ್ಥಿತರಿದ್ದರು.

ಗೆಳೆಯರ ಬಳಗದಿಂದ ಕನ್ನಡ ಸಾಹಿತ್ಯ ಪರಿಷತ್ತಿನ ನೂತನ ಅಧ್ಯಕ್ಷ ಸಿಂಧೆಗೆ ಸನ್ಮಾನ

## ಕನ್ನಡ ಭಾಷೆಗೆ ತನ್ನದೇ ಆದ ಇತಿಹಾಸವಿದೆ: ಅಸ್ಲಾಂಮಿಯಾ



ಮಲ್ಲಮ್ಮ ನುಡಿ ವಾರ್ತೆ

ಚಿಟಗುಪ್ಪ :ಮಾರ್ಚ್ 14, ಕನ್ನಡ ಬೆಳೆಯಬೇಕಾದರೆ, ನಮ್ಮಲ್ಲಿ ಬದ್ಧತೆ ಇದ್ದಲ್ಲಿ ಮಾತ್ರ ಸಾಧ್ಯ ಎಂದು ಸಮಾಜ ಕಾರ್ಯಕರ್ತ ಮಹಮ್ಮದ್ ಅಸ್ಲಾಂಮಿಯಾ ತಿಳಿಸಿದರು. ಪಟ್ಟಣದ ಕನ್ನಡ ಸಾಹಿತ್ಯ ಪರಿಷತ್ತಿನ ತಾಲೂಕಾಧ್ಯಕ್ಷರಾಗಿ ಆಯ್ಕೆಯಾದ ಅನೀಲಕುಮಾರ್ ಸಿಂಧೆ ಅವರಿಗೆ ಗೆಳೆಯರ ಬಳಗದಿಂದ ಹಮ್ಮಿಕೊಂಡಿದ್ದ ಸನ್ಮಾನ ಸಮಾರಂಭದಲ್ಲಿ ಮಾತನಾಡಿದರು. ಕನ್ನಡ ಭಾಷೆಗೆ ತನ್ನದೇ ಆದ ಇತಿಹಾಸ, ಪರಂಪರೆಯಿಂದ ಶ್ರೀಮಂತ ಭಾಷೆಯಾಗಿದೆ, ಕನ್ನಡ ಭಾಷೆಗೆ 2500 ವರ್ಷಗಳ ಇತಿಹಾಸ ಹೊಂದಿದ್ದು, ಕೇಂದ್ರ ಸರ್ಕಾರದಿಂದ ಶಾಸ್ತ್ರೀಯ ಸ್ಥಾನಮಾನ ಪಡೆದಿದೆ. ನಾಡಿನಲ್ಲಿ ಅನೇಕ ರಾಜ ಮಹಾರಾಜರು, ಕವಿಗಳು, ಕನ್ನಡ ಭಾಷೆಯ ಬೆಳವಣಿಗೆಗೆ ಕಾರಣರಾಗಿದ್ದಾರೆ. ಹಾಗೇ 1956ರಲ್ಲಿ ಕನ್ನಡ ರಾಜ್ಯದ ಸ್ಥಾಪನೆಯಲ್ಲಿ ಹಲವಾರು ಮಹನೀಯರ ತ್ಯಾಗ, ಬಲಿದಾನ ಮತ್ತು ಹೋರಾಟವಿದ್ದು, ಅವರನ್ನು ನಾವು ಸ್ಮರಿಸಿಕೊಂಡು ಅವರ ಮಾರ್ಗದರ್ಶನದಲ್ಲಿ ನಡೆಯಬೇಕು ಎಂದರು. ನಿವೃತ್ತ ಶಿಕ್ಷಕ ಜಗನಾಥ ಗಾದಾ ಮಾತನಾಡಿ, ಸಿಂಧೆ ಅವರು ಯುವಕರಿದ್ದಾರೆ ಅವರ ಅಧ್ಯಕ್ಷತೆಯಲ್ಲಿ ಕನ್ನಡ, ನಾಡು, ನುಡಿ, ನೆಲ, ಜಲಕ್ಕಾಗಿ ಶ್ರಮಿಸಲ್ಲಿ ಸದಾ ಅವರ ಜೊತೆಯಲ್ಲಿರುತ್ತೇವೆ ಎಂದು ತಿಳಿಸಿದರು. ಪತ್ರಕರ್ತ ರಾಜಕುಮಾರ ಆರ್. ಹಡಪದ ಮಾತನಾಡಿ ,ಕನ್ನಡ ನಾಡು ಕಟ್ಟಲು ಒಬ್ಬರಿಂದ ಸಾಧ್ಯವಿಲ್ಲ, ಎಲ್ಲರ ಸಹಕಾರ ಇದ್ದಾಗ ಮಾತ್ರ ನಾಡು ಕಟ್ಟಲು ಸಾಧ್ಯವಾಗುತ್ತದೆ. ಕಲಿಕೆ ಎಂಬುದು ಪುಸ್ತಕ, ಶಾಲಾ ಕೊಠಡಿಯಿಂದ ಮಾತ್ರ ಸಾಧ್ಯವಿಲ್ಲ. ಮಹನೀಯರ ನಡವಳಿಕೆ ಕೂಡ ನಮ್ಮ ಕಲಿಕೆಗೆ ಸಹಕಾರಿಯಾಗಿದ್ದು, ಮುಂಬರುವ ದಿನಗಳಲ್ಲಿ ಅನೀಲಕುಮಾರ ಸಿಂಧೆ ಅವರ ಅಧ್ಯಕ್ಷತೆಯಲ್ಲಿ ಕನ್ನಡ ನಾಡು ನುಡಿ ಭಾಷೆಗಾಗಿ ಹಗಲಿರಳು ಶ್ರಮಿಸೋಣ ಎಂದು ಹೇಳಿದರು. ತಾಲ್ಲೂಕು ಕನ್ನಡ ಸಾಹಿತ್ಯ ಪರಿಷತ್ತಿನ ನೂತನ ಅಧ್ಯಕ್ಷ ಅನೀಲಕುಮಾರ್ ಎಂ. ಸಿಂಧೆ ಸನ್ಮಾನ ಸ್ವೀಕರಿಸಿ ಮಾತನಾಡಿದ ಅವರು, ಪ್ರಸ್ತುತ ದಿನಮಾನದಲ್ಲಿ ಇಂಗ್ಲಿಷ್ ವ್ಯಾಮೋಹ ಹೆಚ್ಚಾಗುತ್ತಿದೆ. ವ್ಯವಹಾರಕ್ಕೆ ಹಾಗೂ ಸ್ಪರ್ಧಾತ್ಮಕ ಪರೀಕ್ಷೆಗಳ ತಯಾರಿಗಾಗಿ ಇಂಗ್ಲಿಷ್ ಕಲಿಯಬೇಕು. ಆದರೆ ನಮ್ಮ ಕನ್ನಡ ಭಾಷೆ ಬಗ್ಗೆ ಪ್ರೀತಿ ಹಾಗೂ ಗೌರವ ನೀಡಬೇಕು. ರಾಜ್ಯದಲ್ಲಿ ಆಡಳಿತ ಭಾಷೆ ಕನ್ನಡವಾಗಿದ್ದರೂ ಸಮರ್ಪಕವಾಗಿ ಅನುಷ್ಠಾನಗೊಳ್ಳುತ್ತಿಲ್ಲವೆಂಬ ಕೂಗು ಕೇಳಿ ಬರುತ್ತಿದೆ, ಮುಂಬರುವ ದಿನಗಳಲ್ಲಿ ಕನ್ನಡಕ್ಕಾಗಿ ಹಗಲಿರಳು ಶ್ರಮಿಸುತ್ತೇನೆ.

ಚಿಟಗುಪ್ಪ ತಾಲೂಕ ಕೇಂದ್ರವಾಗಿ ಹಲವಾರು ವರ್ಷಗಳು ಕಳೆದರೂ ಕೂಡ ಸರ್ಕಾರಿ ಕಚೇರಿಗಳು ಬಂದಿಲ್ಲಾ ತಾಲೂಕಿಗೆ ಬರಬೇಕಾದ ಕಚೇರಿಗಳು ತರುವಲ್ಲಿ ಅತೀ ಶೀಘ್ರದಲ್ಲೇ ಹೋರಾಟವನ್ನು ಹಮ್ಮಿಕೊಂಡು ತಾಲೂಕಿನ ಜನರಿಗೆ ಅನುಕೂಲವಾಗುವಂತೆ ಕಚೇರಿಗಳು ತರಲು ಶ್ರಮಿಸುತ್ತೇನೆ ಎಂದು ಹೇಳಿದರು. ಈ ಸಂದರ್ಭದಲ್ಲಿ ನರೇಂದ್ರರೆಡ್ಡಿ ರಾಂಪುರ, ಮಲ್ಲಿಕಾರ್ಜುನ ರೆಡ್ಡಿ ಉಪಸ್ಥಿತರಿದ್ದರು.

## ಶಾಸಕ ಡಾ.ಶೈಲೇಂದ್ರ ಅವರ ಬೆಲ್ದಾಳೆ ವಿರುದ್ಧದ ಚುನಾವಣೆ ತಕಾರರು ಅರ್ಜಿ ರದ್ದು

ಮಲ್ಲಮ್ಮ ನುಡಿ ವಾರ್ತೆ

ಬೀದರ್: ದಕ್ಷಿಣ ವಿಧಾನಸಭೆ ಕ್ಷೇತ್ರದ ಶಾಸಕ ಡಾ.ಶೈಲೇಂದ್ರ ಬೆಲ್ದಾಳೆ ಅವರ ವಿರುದ್ಧ ಸಲ್ಲಿಕೆಯಾಗಿದ್ದ ಚುನಾವಣಾ ತಕರಾರು ಅರ್ಜಿಯನ್ನು ಹೈಕೋರ್ಟ್ ಜನಪ್ರತಿನಿಧಿಗಳ ವಿಶೇಷ ನ್ಯಾಯಪೀಠ ರದ್ದುಗೊಳಿಸಿ ಮಹತ್ವದ ತೀರ್ಪು ನೀಡಿದೆ. 2023ರ ಚುನಾವಣೆಯಲ್ಲಿ ಬೆಲ್ದಾಳೆ ಅವರು ದಕ್ಷಿಣ ವಿಧಾನಸಭೆ ಕ್ಷೇತ್ರದಿಂದ ಆಯ್ಕೆಯಾಗಿದ್ದರು. ಬೆಲ್ದಾಳೆ ಅವರು ಚಿಟ್ಟಾವಾಡಿ ನಿವಾಸಿ ಎಂದು ಪ್ರಮಾಣಪತ್ರದಲ್ಲಿ (ಅಫಿಡವಿಟ್‌ನಲ್ಲಿ) ಸುಳ್ಳು ಮಾಹಿತಿ ಸಲ್ಲಿಸಿದ್ದಾರೆ ಎಂದು ಫಲಿತಾಂಶದ ಬಳಿಕ ರಾಜಕುಮಾರ ಮಡಕಿ ಎಂಬುವರು ಬೆಂಗಳೂರಿನ ಜನಪ್ರತಿನಿಧಿಗಳ ವಿಶೇಷ ನ್ಯಾಯಾಲಯದಲ್ಲಿ ಚುನಾವಣಾ ತಕರಾರು ಅರ್ಜಿ ಸಲ್ಲಿಸಿದ್ದರು. ಇದೊಂದು ಅಪರಾಧಿಕ ಪ್ರಕರಣವಾಗಿದ್ದು, ಇವರ ವಿರುದ್ಧ ಕ್ರಮ ಜರುಗಿಸಲು ಕೋರಿದ್ದರು. ರಾಜಕುಮಾರ ಮಡಕಿ ಅವರು ಸಲ್ಲಿಸಿದ್ದ ಚುನಾವಣೆ ತಕರಾರು ಅರ್ಜಿಯಲ್ಲಿ ಯಾವುದೇ ಹುರುಳಿಲ್ಲ. ಇವರು ಉಲ್ಲೇಖಿಸಿದ ವಿಷಯ ಸತ್ಯಕ್ಕೆ ದೂರವಾಗಿವೆ. ಮುಖ್ಯವಾಗಿ ಇವರು ಚುನಾವಣೆ ಸ್ಪರ್ಧಿಯೂ ಸಹ ಅಲ್ಲ. ಇದೊಂದು ರಾಜಕೀಯ ಪ್ರೇರಿತ ಹಾಗೂ ದುರುದ್ದೇಶಪೂರಿತ ಅರ್ಜಿಯಾಗಿದೆ. ಹೀಗಾಗಿ ಈ ಅರ್ಜಿ ರದ್ದುಗೊಳಿಸಬೇಕು ಎಂದು ಬೆಲ್ದಾಳೆ ಅವರ ಪರ ವಕೀಲ ಗೌರೀಶ ಖಾಶೆಂಪುರ ಹೈಕೋರ್ಟ್ ಜನಪ್ರತಿನಿಧಿಗಳ ವಿಶೇಷ ನ್ಯಾಯಪೀಠಕ್ಕೆ ಮೊರೆ ಇಟ್ಟಿದ್ದರು. ಒಂದೂವರೆ ವರ್ಷ ವಿಚಾರಣೆ ಬಳಿಕ ನ್ಯಾಯಮೂರ್ತಿ ಎಂ.ನಾಗಪ್ರಸನ್ನ ಅವರುಳ್ಳ ಏಕಸದಸ್ಯೀಯ ಪೀಠ ಕಳೆದ ದಿ.7ರಂದು ರಾಜಕುಮಾರ ಮಡಕಿ ಅರ್ಜಿ ರದ್ದುಗೊಳಿಸಿ ತೀರ್ಪು ನೀಡಿದ್ದಾರೆ. ಬೆಲ್ದಾಳೆ ಅವರು ಚಿಟ್ಟಾವಾಡಿ ನಿವಾಸಿ ಇರುವ ಬಗ್ಗೆ ಹಾಗೂ ಇಲ್ಲಿ ಆಸ್ತಿ ಹೊಂದಿರುವ ಕುರಿತ ದಾಖಲೆ ಸಲ್ಲಿಕೆ, ನಾಮಪತ್ರ ಸಲ್ಲಿಸುವ ವೇಳೆ ನೀಡಿದ್ದ ಪ್ರಮಾಣಪತ್ರಗಳು ಹಾಗೂ ದಾಖಲೆಗಳ ಪರಿಶೀಲನೆ ನಡೆಸಿ ಚುನಾವಣಾಧಿಕಾರಿಗಳು ನಾಮಪತ್ರ ಸ್ವೀಕರಿಸಿರುವುದು ಸೇರಿ ಎಲ್ಲ ಅಂಶಗಳನ್ನು ಪರಿಗಣಿಸುವ ಜೊತೆಗೆ ಅರ್ಜಿದಾರರ ವಾದದಲ್ಲಿ ಯಾವುದೇ ಹುರುಳಿಲ್ಲ ಎಂದು ಗೌರೀಶ ಖಾಶೆಂಪುರ ಅವರು ನ್ಯಾಯಪೀಠಕ್ಕೆ ಮನವರಿಕೆ ಮಾಡಿಕೊಡುವಲ್ಲಿ ಸಫಲರಾಗಿದ್ದರು. ಇವರ ವಾದವನ್ನು ಪುರಸ್ಕರಿಸಿ ನ್ಯಾಯಪೀಠ ತಕರಾರು ಅರ್ಜಿ ರದ್ದುಗೊಳಿಸಿ, ಈ ಪ್ರಕರಣ ವಿಲೇವಾರಿ ಮಾಡಿದೆ. ಪ್ರಕರಣದಲ್ಲಿ ಪರಾಜಿತ ಅಭ್ಯರ್ಥಿ ನೇರವಾಗಿ ದೂರು ಸಲ್ಲಿಸಿಲ್ಲ. ಬೇರೆಯವರ ಮೂಲಕ ಅರ್ಜಿ ಸಲ್ಲಿಸಿದ್ದರು. ಎಲ್ಲ ಹಂತದಲ್ಲೂ ಅರ್ಜಿದಾರರ ಆರೋಪಗಳು ಸುಳ್ಳು ಎಂಬುದು ಸಾಬೀತಾದ ಕಾರಣ ಅರ್ಜಿ ರದ್ದಾಗಿದೆ. ಚುನಾವಣೆ ವೇಳೆ ಸಲ್ಲಿಕೆಯಾಗುವ ಪ್ರಮಾಣಪತ್ರದಲ್ಲಿನ ದೋಷಗಳ ಬಗ್ಗೆ ಪ್ರಜಾಪ್ರತಿನಿಧಿ ಕಾಯ್ದೆಯ ಅಡಿ ದೂರು ಸಲ್ಲಿಸುವ ಹಕ್ಕು ಚುನಾವಣಾ ಆಯೋಗ-ಕ್ಕೆ ಮಾತ್ರ ಇರಲಿದೆ ಎಂದು ಸಹ ನ್ಯಾಯಪೀಠ ಸ್ಪಷ್ಟಪಡಿಸಿದೆ ಎಂದು ಗೌರೀಶ ಖಾಶೆಂಪುರ ತಿಳಿಸಿದ್ದಾರೆ.

# ಬೀದರ್‌ನಲ್ಲಿ ಸಂಭ್ರಮದ ಹೋಳಿ: ಗುಲಾಲಿನಲ್ಲಿ ಮಿಂದೆದ್ದ ಜನ



ಮಲ್ಲಮ್ಮ ನುಡಿ ವಾರ್ತೆ

ಬೀದರ. ಮಾ. 14 : ಹೋಳಿ ಹಬ್ಬದ ಅಂಗವಾಗಿ ಜನ ರಂಗಿನಾಟವಾಡಿ ಶುಕ್ರವಾರ ಸಂಭ್ರಮಿಸಿದರು. ಪರಸ್ಪರ ವಿವಿಧ ವರ್ಣದ ಬಣ್ಣ ಎರಚಿಕೊಂಡು ಅದರಲ್ಲಿ ಮಿಂದೆದ್ದರು.

ಶುಕ್ರವಾರ ಬೆಳಿಗ್ಗೆಯಿಂದಲೇ ಎಲ್ಲೆಡೆ ಸಂಭ್ರಮ ಮನೆ ಮಾಡಿತ್ತು. ಚಿಣ್ಣರು ಮನೆ ಎದುರು ಗುಂಪು ಗುಂಪಾಗಿ ಸೇರಿಕೊಂಡು ಪರಸ್ಪರ ಬಣ್ಣ ಎರಚಿಕೊಂಡು ಸಂಭ್ರಮಿಸುವ ದೃಶ್ಯ ಎಲ್ಲೆಡೆ ಸಾಮಾನ್ಯವಾಗಿ ಕಂಡು ಬಂತು. ಪ್ರಮುಖ ರಸ್ತೆಗಳಲ್ಲಿ ಮಧ್ಯಾಹ್ನದ ವರೆಗೆ ಬಣ್ಣ ಮಾರಾಟವೂ ಜೋರಾಗಿ ನಡೆಯಿತು. ವಿವಿಧ ಪ್ರಕಾರದ ಬಣ್ಣ, ಪಿಚಕಾರಿ, ಗನ್ ಸೇರಿದಂತೆ ಬಗೆಬಗೆಯ ಬಣ್ಣದಾಟದ ವಸ್ತುಗಳನ್ನು ಖರೀದಿಸಿದರು.

ಪ್ರತಿಯೊಂದು ಬಡಾವಣೆ, ಮುಖ್ಯರಸ್ತೆ, ಅಪಾರ್ಟ್‌ಮೆಂಟ್‌ಗಳಲ್ಲಿ ಜನ ಗುಂಪು ಗುಂಪಾಗಿ ಸೇರಿದ್ದರು. ಎಲ್ಲೆಡೆ ಕಿವಿಗಡಚ್ಚಿಕ್ಕುವ ಸಂಗೀತದ ಸದ್ದು, ಅದಕ್ಕೆ ಪುರುಷರು ಮತ್ತು ಮಹಿಳೆಯರು ಎಂಬ ಭೇದಭಾವವಿಲ್ಲದೆ ಎಲ್ಲ ವಯೋಮಾನದವರು ಸಂಭ್ರಮದಿಂದ ಹೆಜ್ಜೆ ಹಾಕಿದರು.

'ಹೋಳಿ ಹೈ' ಎಂದು ಜೋರಾಗಿ ಕೂಗುತ್ತಲೇ ಗಾಳಿಯಲ್ಲಿ ಗುಲಾಲ್ ಎರಚುತ್ತ, ಬಣ್ಣ ಹಾಕಿ ಕುಣಿದರು. ಯುವಕ/ಯುವತಿಯರು ಬೈಕ್‌ಗಳಲ್ಲಿ ಗುಂಪು ಗುಂಪಾಗಿ ಸ್ನೇಹಿತರು, ಸಂಬಂಧಿಕರ ಮನೆಗೆ ತೆರಳಿ ಅವರ ಮೇಲೆ ಬಣ್ಣ ಹಾಕಿ, ಕೆಲಕಾಲ ಅವರೊಂದಿಗೆ ಬಣ್ಣದಾಟವಾಡಿ ನಗರದ ಮುಖ್ಯರಸ್ತೆಗಳಲ್ಲಿ ಸಂಚರಿಸುತ್ತ ಮೋಜು ಮಾಡಿದರು.

ವಿದ್ಯಾನಗರ, ಶಿವನಗರ, ಮೈಲೂರ, ಗುಂಪಾ, ಚಿದ್ರಿ, ಮೋಹನ್ ಮಾರ್ಕೆಟ್, ಕೆಎಚ್‌ಬಿ ಕಾಲೊನಿ, ಹೌಸಿಂಗ್ ಬೋರ್ಡ್ ಕಾಲೊನಿ, ಕುಂಬಾರವಾಡ, ಮಂಗಲಪೇಟ್, ಚೌಬಾರ, ಹಾರೂರಗೇರಿ, ನಾವದಗೇರಿ, ನೌಬಾದ್, ಸಾಯಿ ನಗರ ಹೀಗೆ ಎಲ್ಲೆಡೆ ಸಂಭ್ರಮದ ವಾತಾವರಣ ಇತ್ತು. ಕೆಲವು ಬಡಾವಣೆಗಳಲ್ಲಿ ಬಯಲಲ್ಲಿ ಬಣ್ಣದಾಟಕ್ಕೆ ವ್ಯವಸ್ಥೆ ಮಾಡಿದ್ದರೆ, ಕೆಲವೆಡೆ ಉದ್ಯಾನದ ಒಂದು ಮೂಲೆಯಲ್ಲಿ ಶಾಮಿಯಾನ ಹಾಕಿ ರಂಗಿನಾಟವಾಡಿದರು. ಬೆಳಿಗ್ಗೆ ಬಾದಾಮಿ ಹಾಲು, ಜ್ಯೂಸ್, ಹಣ್ಣು, ಉಪಾಹಾರ, ಮಧ್ಯಾಹ್ನ ಪುಲಾವ್, ಸಾಂಬಾರ್, ಮಜ್ಜಿಗೆ, ಹಪ್ಪಳದ ವ್ಯವಸ್ಥೆ ಮಾಡಿದ್ದರು. ಇದರಿಂದಾಗಿ ಮಹಿಳೆಯರೂ ಹೆಚ್ಚಿನ ಸಂಖ್ಯೆಯಲ್ಲಿ ಸೇರಿದ್ದರು. ಬೆಳಿಗ್ಗೆ 8ಗಂಟೆಗೆ ಆರಂಭಗೊಂಡ ಹೋಳಿ ಬಣ್ಣದಾಟದ ಸಂಭ್ರಮ ಮಧ್ಯಾಹ್ನ 1 ಗಂಟೆಯ ವರೆಗೆ ಇತ್ತು. ನಗರದ ಗಣೇಶ ಮೈದಾನದಲ್ಲಿ ದಹಿ ಹಂಡಿ ಒಡೆದು ಸಂಭ್ರಮಿಸಿದರು. ನಾ, ನೀ ಎಂದು ಸ್ಪರ್ಧೆಗೆ ಬಿದ್ದವರಂತೆ ಹಂಡಿ ಒಡೆಯಲು ಮುಂದಾದರು. ಅನೇಕ ಜನ ಅದನ್ನು ಕಣ್ತುಂಬಿಕೊಂಡು ಖುಷಿ ಪಟ್ಟರು. ಬಣ್ಣದಿಂದ ಜನರ ಚಹರೆಗಳೇ ಗುರುತು ಸಿಗದಂತಾಗಿತ್ತು. ಅಕ್ಷರಮಟ್ಟಿಗೆ ಬಣ್ಣಗಳಲ್ಲಿ ಮಿಂದೆದ್ದರು. ನಗರ ಸೇರಿದಂತೆ ಜಿಲ್ಲೆಯಾದ್ಯಂತ ಇದೇ ಸಂಭ್ರಮ ಮನೆ ಮಾಡಿತ್ತು.

ಬಣ್ಣದಾಟವಾಡಿ ಜನ ಮಧ್ಯಾಹ್ನ ಮನೆ ಸೇರಿದ್ದರಿಂದ ನಗರದ ಪ್ರಮುಖ ರಸ್ತೆಗಳು ಮಧ್ಯಾಹ್ನ ಜನರಿಲ್ಲದೇ ಬಿಕೋ ಎನ್ನುತ್ತಿದ್ದವು. ಪಡುವಣ ದಿಕ್ಕಿನಲ್ಲಿ ಸೂರ್ಯ ಮರೆಯಾಗುತ್ತಿದ್ದಂತೆ ಜನ ನಿಧಾನವಾಗಿ ಹೊರಬಂದರು. ಗುರುವಾರ ರಾತ್ರಿ ಕಾಮದಹನ

ಹೋಳಿ ಹಬ್ಬದ ಮುನ್ನ ಹುಣ್ಣಿಮೆಯ ದಿನವಾದ ಗುರುವಾರ ರಾತ್ರಿ ಬೆಳದಿಂಗಳ ಬೆಳಕಿನಲ್ಲಿ ನಗರದ ವಿವಿಧ ಬಡಾವಣೆಗಳಲ್ಲಿ ಕಾಮ ದಹನ ಕಾರ್ಯಕ್ರಮ ನಡೆಯಿತು. ಚಿಣ್ಣರು ಸೇರಿದಂತೆ ಎಲ್ಲ ವಯೋಮಾನದವರು ಅದಕ್ಕೆ ಸಾಕ್ಷಿಯಾದರು. ಕಾಮದಹನದ ವೇಳೆ ಬೊಬ್ಬೆ ಹೊಡೆದರು.

**ತೀವ್ರ ಕಟ್ಟೆಚ್ಚರ**

ಹೋಳಿ ಹಬ್ಬದ ಹಿನ್ನೆಲೆಯಲ್ಲಿ ಬೀದರ್ ಜಿಲ್ಲಾ ಪೊಲೀಸರು ನಗರ ಸೇರಿದಂತೆ ಜಿಲ್ಲೆಯಾದ್ಯಂತ ತೀವ್ರ ಕಟ್ಟೆಚ್ಚರ ವಹಿಸಿದ್ದರು. ಬೀದರ್ ನಗರದಲ್ಲಿ ಶುಕ್ರವಾರ ಬೆಳಿಗ್ಗೆಯಿಂದಲೇ ಎಲ್ಲೆಡೆ ಗಸ್ತು ತಿರುಗಿದರು. ಹೆಚ್ಚು ಜನ ಸೇರಿ–ಕೊಂಡು ರಂಗಿನಾಟವಾಡುವ ಸ್ಥಳಗಳ ಮೇಲೆ ಹೆಚ್ಚು ನಿಗಾ ವಹಿಸಿದ್ದರು.

**ತೋಟದಲ್ಲೂ ಹೋಳಿ**

ಕೆಲ ಶಾಸಕರು, ಮಾಜಿ ಶಾಸಕರು, ಗಣ್ಯರು ಅವರ ತೋಟಗಳಲ್ಲಿ ಹೋಳಿ ಆಚರಿಸಿದರು. ಕುಟುಂಬ ಸದಸ್ಯರೊಂದಿಗೆ ಮಧ್ಯಾಹ್ನದ ವರೆಗೆ ರಂಗಿನಾಟವಾಡಿ, ದಿನವಿಡೀ ಅಲ್ಲಿಯೇ ಕಾಲ ಕಳೆದರು.

# ವಿದ್ಯಾರ್ಥಿಗಳು ಕಠಿಣ ಪರಿಶ್ರಮ ಪಟ್ಟಾಗ ಯಶಸ್ಸು ಸಾಧ್ಯ:ಸತೀಶ್ ಎಸ್. ಅಂಬೇಸಂಗೆ



ಮಲ್ಲಮ್ಮ ನುಡಿ ವಾರ್ತೆ

ಬೀದರ. ಮಾ. 14 : ಅಧ್ಯಯನವು ಒಂದು ತಪಸ್ಸು ಆಗಿದ್ದು, ಶ್ರದ್ಧೆಯಿಂದ ಅಭ್ಯಾಸ ಮಾಡಿದಾಗ ಮಾತ್ರ ಯಶಸ್ಸು ಸಾಧಿಸುವುದು ಸಾಧ್ಯವಾಗುತ್ತದೆ ಎಂದು ಪ್ರಗ್ಯಾನ್ ಎಐ ಬೆಂಗಳೂರಿನ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಯಾದ ಸತೀಶ್ ಎಸ್ ಅಂಬೆ ಸಂಗೆಯವರು ಅಭಿಪ್ರಾಯ ಪಟ್ಟರು.

ಅವರು ಬೀದರಿನ ಜಿ ಎನ್ ಡಿ ಕಾಲೇಜಿ ನ ಎಲೆಕ್ಟ್ರಾನಿಕ್/ ಡಾಟಾ ಸೈನ್ಸ್ ವಿಭಾಗವು ಆಯೋಜಿಸಿದ್ದ, 5 ದಿನಗಳ ವಿಶೇಷ ಕಾರ್ಯಾ ಗಾರದ ಅಂತಿಮ ದಿನದ ಸಮಾರೋಪ ಸಮಾರಂಭದಲ್ಲಿ ಸಂಪನ್ಮೂಲ ವ್ಯಕ್ತಿಗಳಾಗಿ ಭಾಗವಹಿಸಿ ಮಾತನಾಡುತ್ತಿದ್ದರು. ತಮ್ಮ ಮುಖ್ಯಗುರಿಯಾದ ಅಧ್ಯಯನ ಹಾಗೂ ಕೌಶಲ್ಯವನ್ನು ವೃದ್ಧಿಸಿಕೊಳ್ಳುವ ಕಡೆಗೆ ಹೆಚ್ಚು ಒತ್ತು ಕೊಡದೆ ಅನಾವಶ್ಯಕ ವಿಷಯಗಳಲ್ಲಿ ತಲೆ ಹಾಕಿ ತಮ್ಮ ಶಕ್ತಿ ಯನ್ನು ಹಾಳು ಮಾಡಿ ಕೊಳ್ಳುತ್ತಿರುವ ವಿದ್ಯಾರ್ಥಿ ಗಳ ಬಗ್ಗೆ ಕಳವಳ ವ್ಯಕ್ತಪಡಿಸಿದ್ದ ಅವರು, ಯಾವುದೇ ವಿಷಯ ವನ್ನು ಸಕಾರಾತ್ಮಕವಾಗಿ ಯೋಚನೆ ಮಾಡುವ ಪ್ರವೃತ್ತಿಯನ್ನು ವಿದ್ಯಾರ್ಥಿಗಳು ಬೆಳೆಸಿ ಕೊಳ್ಳಬೇಕು ಎಂದು ಕರೆ ನೀಡಿದರು. ವಿಭಾಗದ ಮುಖ್ಯಸ್ಥರಾದ ಡಾ. ಕಿಶನ ಸಿಂಗ್ ರವರು ಪ್ರಾಸ್ತಾವಿಕವಾಗಿ ಮಾತನಾಡಿ, ಕಾರ್ಯಾಗಾರದ ಯಶಸ್ಸಿನಲ್ಲಿ ಸಂಪನ್ಮೂಲ ವ್ಯಕ್ತಿಗಳ ಪಾತ್ರ ಪ್ರಮುಖವಾಗಿದೆ ಎಂದು ಕೊಂಡಾಡಿದರು. ಡಾ ವೀರೇಂದ್ರ ಡಾಕುಳಗಿಯವರು, ಪ್ರೊ. ಕೆ ಕೆ ಪ್ರಸಾದರವರು ಮಾತನಾ ಡಿದರು. ಆಡಳಿತಾಧಿಕಾರಿ ಕರ್ನಲ್ ಆರ್. ಡಿ. ಸಿಂಗ ಅಧ್ಯಕ್ಷತೆ ವಹಿಸಿದ್ದರು. ಪಶುವೈದ್ಯಕೀಯ ವಿವಿಯಲ್ಲಿ ನಿವೃತ್ತ ಅಧಿಕಾರಿ ವೀರಭದ್ರಪ್ಪ ಉಪ್ಪಿನರವರು ಅತಿಥಿಯಾಗಿದ್ದರು. ಕಾರ್ಯಾಗಾರದಲ್ಲಿ ಹಾಜರಾದ ಹೆಚ್ಚಿನ ವಿದ್ಯಾರ್ಥಿಗಳು ಇದು ಒಂದು ಯಶಸ್ವಿ ಕಾರ್ಯಾಗಾರ ಎಂದು ಬಣ್ಣಿಸಿದರು. ಡಾ. ಪೂಜಾ ರವರು ನಿರೂಪಿಸಿದರು. ಸಂಯೋಜಕೀಯಾದ ಡಾ. ಶ್ವೇತಾ ಗಾದಗೆಯವರು ಕೊನೆಯಲ್ಲಿ ವಂದಿಸಿದರು.

# ಸಿಬ್ಬಂದಿಗಳ ಶ್ರೇಯೋಭಿವೃದ್ಧಿಯಲ್ಲಿ ಸಂಸ್ಥೆಯ ಬೆಳವಣಿಗೆ : ಡಾ. ಪವಾರ್




ಮಲ್ಲಮ್ಮ ನುಡಿ ವಾರ್ತೆ

ಭಾಲ್ಕಿ:ಮಾ.14: ಸಿಬ್ಬಂದಿಗಳ ಶ್ರೇಯೋಭಿವೃದ್ಧಿಯಲ್ಲಿ ಸಂಸ್ಥೆಯ ಬೆಳವಣಿಗೆ ಅಡಗಿದೆ ಎಂದು ಮಕ್ಕಳ ತಜ್ಞ ಡಾ. ವಸಂತ ಪವಾರ ಅಭಿಪ್ರಾಯಪಟ್ಟರು.

ಪಟ್ಟಣದ ವಿದ್ಯಾಚೇತನ ಪಬ್ಲಿಕ್ ಶಾಲಾ ಆವರಣದಲ್ಲಿ ಶುಕ್ರವಾರ ನಡೆದ ಡೈಮಂಡ್ ಗ್ರೂಪ್ ಲೀಗ್ ಪಂದ್ಯಾವಳಿಗೆ ಚಾಲನೆ ನೀಡಿ ಅವರು ಮಾತನಾಡಿದರು. ಯಾವುದೇ ಸಂಸ್ಥೆ ಉತ್ತಮವಾಗಿ ಬೆಳೆಯಬೇಕಾದರೆ ಅಲ್ಲಿಯ ಸಿಬ್ಬಂದಿ ಮತ್ತು ಕಾರ್ಮಿಕರ ಶ್ರೇಯ ಬಹುಮುಖ್ಯವಾಗಿದೆ. ಈ ನಿಟ್ಟಿನಲ್ಲಿ ಪ್ರತಿ ವರ್ಷ ಡೈಮಂಡ್ ಗ್ರೂಪ್‌ನ ಆಡಳಿತ ಮಂಡಳಿ ಅಲ್ಲಿಯ ಸಿಬ್ಬಂದಿಗಳಿಗೋಸ್ಕರ ಸಾಕಷ್ಟು ರಚನಾತ್ಮಕ ಕಾರ್ಯಕ್ರಮಗಳು ಹಮ್ಮಿಕೊಳ್ಳುತ್ತಾ ಬಂದಿದ್ದಾರೆ. ಸಿಬ್ಬಂದಿಗಳಲ್ಲಿ ಸಮನ್ವಯತೆ ಮತ್ತು ಭಾತೃತ್ವ ಭಾವ ಬೆಳೆಯುವುದಕ್ಕಾಗಿ ಅವರು ಇಂತಹ ಲೀಗ್ ಪಂದ್ಯಾವಳಿ ಆಯೋಜಿಸಿದ್ದು ಸಂತಸತಂದಿದೆ. ಪ್ರಸ್ತುತ ಸಾಲಿನಲ್ಲಿ ಸುಮಾರು 100 ಜನ ಬೋಧಕ ಮತ್ತು ಬೋದಕೇತರ ಸಿಬ್ಬಂದಿಗಳನ್ನು ಸೇರಿಸಿಕೊಂಡು 8 ತಂಡಗಳನ್ನು ರಚಿಸಿ ಲೀಗ್ ಪಂದ್ಯಾವಳಿ ನಡೆಸುತ್ತಿರುವುದು ಮೆಚ್ಚುವಂತಹ ಕಾರ್ಯವಾಗಿದೆ ಎಂದು ಹೇಳಿದರು.

ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ತಾಲೂಕು ಅಧ್ಯಕ್ಷ ಜಯರಾಜ ದಾಬಶೆಟ್ಟಿ ಮಾತನಾಡಿ, ಶಿಕ್ಷಣ ಸಂಸ್ಥೆಗಳಲ್ಲಿಯೇ ಗುಣಾತ್ಮಕ ಸ್ಪರ್ಧಾ ಮನೋಭಾವ ಇಟ್ಟುಕೊಂಡು ಮುನ್ನಡೆಯುತ್ತಿರುವ ಡೈಮಂಡ್ ಗ್ರೂಪ್ ಆಫ್ ಇನ್ಸಿ ಟ್ಯೂಟ್ ಸಂಸ್ಥೆಯು ಜಿಲ್ಲೆಯಲ್ಲಿ ಉತ್ತಮ ಹೆಸರು ಮಾಡಿದೆ. ಸಂಸ್ಥೆಯ ಸಿಬ್ಬಂದಿಗಳಲ್ಲಿ ಭಾತೃತ್ವ ಭಾವ ಬೆಳೆಸುವ ನಿಟ್ಟಿನಲ್ಲಿ ಡೈಮಂಡ್ ಶಿಕ್ಷಣ ಸಂಸ್ಥೆ ಮಾಡುತ್ತಿರುವ ಕಾರ್ಯ ಶ್ಲಾಘನೀಯವಾಗಿದೆ ಎಂದು ಹೇಳಿದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿದ ಡೈಮಂಡ್ ಶಿಕ್ಷಣ ಸಂಸ್ಥೆಯ ಅಧ್ಯಕ್ಷ ಮಸ್ತಾನ್ ವಲಿ, ಸಿಬ್ಬಂದಿಗಳ ಶ್ರೇಯಸ್ಸಿನಲ್ಲಿಯೇ ಸಂಸ್ಥೆಯ ಶ್ರೇಯ ಅಡಗಿದೆ. ಅದಕ್ಕಾಗಿ ಎಲ್ಲಾ ಸಿಬ್ಬಂದಿಗಳಿಗೂ ಯಾವುದೇ ಚುತಿ ಬಾರದಂತೆ ನಡೆದುಕೊಳ್ಳಲಾಗುತ್ತಿದೆ ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಉದ್ಯಮಿ ಜೈಕಿಶನ ಬಿಯಾಣಿ, ರೋಟರಿಕ್ಲಬ್ ಆಫ್ ಭಾಲ್ಕಿ ಫೋರ್ಟ ಅಧ್ಯಕ್ಷ ಸಂಜೀವಕುಮಾರ ಪಂಡರಿಗೆ, ಹೃಯದ ತಜ್ಞ ಡಾ. ಸಜ್ಜಲ್ ಬಳತೆ, ರೋಟರಿ ಕಾರ್ಯದರ್ಶಿ ದತ್ತಾತ್ರಿ, ಅಶೋಕಕುಮಾರ ಜೋಳದಪಕೆ ಉಪಸ್ಥಿತರಿದ್ದರು.

ಆಡಳಿತಾಧಿಕಾರಿ ಅಶ್ವಿನ ಭೋಸಲೆ ಸ್ವಾಗತಿಸಿದರು. ಭೀಮರಾವ ಕಣರ್ ನಿರೂಪಿಸಿದರು. ರವಿಕುಮಾರ ಮೇತ್ರೆ ವಂದಿಸಿದರು.

# ವಿಕಲಚೇತನರಿಗೆ ಒಂದು ಲಕ್ಷದವರೆಗೂ ವೈದ್ಯಕೀಯ ಪರಿಹಾರ: ಸಚಿವೆ ಲಕ್ಷ್ಮಿ ಹೆಬ್ಬಾಳ್ಕರ್



ಮಲ್ಲಮ್ಮ ನುಡಿ ವಾರ್ತೆ

ಬೆಂಗಳೂರು, ಮಾ.14 :ರಾಜ್ಯದಲ್ಲಿ ವಿಕಲಚೇತನರಿಗೆ ಸರ್ಕಾರದಿಂದ ಅಂಗವಿಕಲತೆ ನಿವಾರಣಾ ವೈದ್ಯಕೀಯ ಪರಿಹಾರ ನಿಧಿ ಯೋಜನೆ, ನಿರಾಮಯ ಆರೋಗ್ಯ ವಿಮಾ ಯೋಜನೆ ಹಾಗೂ ಕಾಕ್ಲಿಯರ್ ಇಂಪ್ಲಾಂಟ್ ಯೋಜನೆಗಳು ಜಾರಿಯಲ್ಲಿವೆ ಎಂದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಸಚಿವರಾದ ಲಕ್ಷ್ಮಿ ಹೆಬ್ಬಾಳ್ಕರ್ ತಿಳಿಸಿದರು. ಇಂದು ವಿಧಾನಪರಿಷತ್ ಕಲಾಪದ ವೇಳೆ ಪರಿಷತ್ ಸದಸ್ಯ ವೈ.ಎಂ.ಸತೀಶ್ ಅವರ ಪ್ರಶ್ನೆಗೆ ಉತ್ತರಿಸಿದ ಸಚಿವರು, ವಿಕಲಚೇತನರಿಗಾಗಿ ಪ್ರಮುಖ ಮೂರು ಯೋಜನೆಗಳನ್ನು ಜಾರಿಗೆತರಲಾಗಿದೆ. ಅಂಗವಿಕಲತೆ ನಿವಾರಣಾ ವೈದ್ಯಕೀಯ ಪರಿಹಾರ ನಿಧಿ ಯೋಜನೆಯಡಿ ಶಸ್ತ್ರಚಿಕಿತ್ಸೆಯ ಮುಖಾಂತರ ವಿಕಲಚೇತನತೆಯನ್ನು ನಿವಾರಣೆ ಮಾಡಿಕೊಳ್ಳಲು ಅಥವಾ ಕಡಿಮೆ ಮಾಡಿಕೊಳ್ಳಲು ಎಲ್ಲಾ ಸರ್ಕಾರಿ ಆಸ್ಪತ್ರೆಗಳು ಅಥವಾ ಕರ್ನಾಟಕದ ಸುಸಜ್ಜಿತ ಖಾಸಗಿ ಆಸ್ಪತ್ರೆಗಳಲ್ಲಿ ಶಸ್ತ್ರಚಿಕಿತ್ಸೆ ಮಾಡಿಸಿಕೊಳ್ಳಲು 1 ಲಕ್ಷ ರೂಪಾಯಿ ವರೆಗೆ ಸಹಾಯ ಧನ ಮಂಜೂರು ಮಾಡಲಾಗುತ್ತದೆ ಎಂದು ಹೇಳಿದರು. ಪ್ರಸ್ತುತ ರಾಜ್ಯದಲ್ಲಿ ನ್ಯಾಷನಲ್ ಟ್ರಸ್ಟ್ ಆಕ್ಟ್ ಅಡಿಯಲ್ಲಿ ನಿರಾಮಯ ಆರೋಗ್ಯ ವಿಮಾ ಯೋಜನೆಯನ್ನು ಜಾರಿಗೆ ತಂದಿದ್ದು, ಬಡತನ ರೇಖೆ–ಗಿಂತ ಕೆಳಗಿರುವ ಕುಟಂಬದ ವಿಕಲಚೇತನ ವ್ಯಕ್ತಿ ಒಂದು ಬಾರಿ ವಾರ್ಷಿಕ 250 ರೂಪಾಯಿಗಳನ್ನು ಸರ್ಕಾರದಿಂದ ವಿಮಾ ಕಂತಾಗಿ ಪಾವತಿಸಿ ಪ್ರತಿವರ್ಷ ಒಂದು ಲಕ್ಷಗಳವರೆಗೆ ಉಚಿತವಾಗಿ ವೈದ್ಯಕೀಯ ಸೌಲಭ್ಯ ಪಡೆಯಬಹುದು ಎಂದರು. ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ವತಿಯಿಂದ ಕಾಕ್ಲಿಯಾರ್ ಇಂಪ್ಲಾಂಟ್ ಯೋಜನೆ ಅಡಿಯಲ್ಲಿ ಕಡ್ಡಾಯ ನವಜಾತ ಶಿಶುಗಳ ಶ್ರವಣ ತಪಾಸಣೆ ನಡೆಸಿ, ಗುರುತು ಹಚ್ಚಿದ ತೀವ್ರತರವಾದ/ಗಂಭೀರ ಸ್ವರೂಪದ ಶ್ರವಣದೋಷವುಳ್ಳ 6 ವರ್ಷದ ಕೆಳಗಿನ ಮಕ್ಕಳಿಗೆ ಶ್ರವಣ ಸಾಧನಗಳನ್ನು ನೀಡಲಾಗುವುದು. ಜೊತೆಗೆ ಟ್ರಯಲ್ ಆಡಿಟರಿ ವರ್ಬಲ್ ಥೆರಪಿಯನ್ನು ಒದಗಿಸಲಾಗುವುದು, ವಿವಿಧ ಥೆರಪಿ ಚಿಕತ್ಸೆಗಳನ್ನು ಉಚಿತವಾಗಿ ಒದಗಿಸಲಾಗುತ್ತಿದ್ದು, 2016–17ರಿಂದ ಇಲ್ಲಿಯವರೆಗೆ 665 ಫಲಾನುಭವಿಗಳಿಗೆ ಶಸ್ತ್ರಚಿಕಿತ್ಸೆ ನಡೆಸಲಾಗಿದೆ ಎಂದು ತಿಳಿಸಿದರು. ಜೊತೆ–ಗೆ ನಿರಾಮಯ ಆರೋಗ್ಯ ವಿಮಾ ಯೋಜನೆಯಡಿ 4 ಬಗೆಯ ವಿಕಲಚೇತನರಿಗೆ ಖಾಸಗಿ ಅಥವಾ ಸರ್ಕಾರಿ ಆಸ್ಪತ್ರೆಗಳಲ್ಲಿ ಪಡೆದ ಚಿಕಿತ್ಸೆಯ ಗರಿಷ್ಠ 1 ಲಕ್ಷದವರೆಗೆ ಶಸ್ತ್ರಚಿಕಿತ್ಸೆ ಹಾಗೂ ವೈದ್ಯಕೀಯ ವೆಚ್ಚಗಳನ್ನು ಕೇಂದ್ರ ಸರ್ಕಾರ ಗುರುತಿಸಿರುವ ಸಂಸ್ಥೆಯ ಮುಖಾಂತರ ಪಡೆಯುತ್ತಿದ್ದಾರೆ ಎಂದು ತಿಳಿಸಿದರು.

# ವ್ಯಕ್ತಿಗೆ ಹೆಣದಂತೆ ಅಲಂಕಾರ ಮಾಡಿ ಮೆರವಣಿಗೆ: ಅದ್ದೂರಿ ಹಬ್ಬ ಆಚರಣೆ



ಮಲ್ಲಮ್ಮ ನುಡಿ ವಾರ್ತೆ

ಇಂಡಿ:ಮಾ.14: ಹೋಳಿ ಹಬ್ಬದ ಆಚರಣೆದ ಮರುದಿನ ಬೆಳಗಿನ ಜಾವ ಶಿರಗೂರ ಗ್ರಾಮದಲ್ಲಿ ಬಣ್ಣದ ಹಬ್ಬ ಜೋರಾಗಿತ್ತು, ಗ್ರಾಮದ ಹಿರಿಯ ಜೀವಿಯಾದ ರಾಚಯ್ಯ ಹಿರೇಮಠ ಎಂಬಾತನಿಗೆ ಹೆಣದಂತೆ ಅಲಂಕಾರ ಮಾಡಿ ಗ್ರಾಮಸ್ಥರು ಅಳಲು ತೊಡಗುವ ಮೂಲಕ ಬಣ್ಣದ ಹಬ್ಬ ಅದ್ದೂರಿ ಸಂಭ್ರಮದಿಂದ ಆಚರಿಸಿದರು. ಮೃತ ದೇಹದಂತೆ ಸಿಂಗರಿಸಿದ ವ್ಯಕ್ತಿಯನ್ನು ಪಿಕಪ್ ವಾಹನದ ಮೇಲೆ ದಾರಿ ಯುದ್ದಕ್ಕೂ ಮೆರವಣಿಗೆ ಮಾಡಿತ್ತಾ, ಹಲಗೆ, ಡೊಳ್ಳು, ತಾಳ, ನಾದಸ್ವರ, ವಾದ್ಯಗಳಿಂದ ಜನ ಜಂಗುಳಿ ಕೂಡಿದ್ದು ಉತ್ಸವದ ವಾತಾವರಣ ನಿರ್ಮಾಣಗೊಂಡಿತು. ಮಹಿಳೆಯರು ಯುವಕರು ಸೇರಿ ಗೀತೆಗಳು ಭಜನೆಗಳು ಮತ್ತು ನೃತ್ಯ ಮಾಡುತ್ತಾ ಬಣ್ಣಗಳ ಮಧ್ಯ ಹಾಸ್ಯವಾಡುತ್ತಾ ಪರಸ್ಪರ ಬಣ್ಣ ಎರಚುತ್ತಾ ಸ್ನೇಹ ಪ್ರೀತಿಯೊಂದಿಗೆ ಕುಣಿದು ಕುಪ್ಪಳಿಸಿದರು. ಗ್ರಾಮಸ್ಥರು ತಮ್ಮ ಸ್ನೇಹಿತರ ಮನೆಗಳಿಗೆ ನುಗ್ಗಿ ಗುಲಾಲ್ಲ ಬಣ್ಣದ ಪುಡಿ, ರಂಗಿನ ನೀರು ಎರಚುತ್ತಾ, ಪಿಚ್ಕಾರಿ ಹಿಡಿದು ನೀರು ಮತ್ತು ಬಣ್ಣಗಳನ್ನು ಸಿಂಪಡಿಸಿದರು. ಎಲ್ಲರ ಮನಸ್ಸಿನಲ್ಲಿರುವ ದ್ವೇಷವನ್ನು ಬಿಟ್ಟು ಒಗ್ಗಟಿನಿಂದ ಹಬ್ಬವನ್ನು ಅದ್ದೂರಿ ಸಂಭ್ರಮದಿಂದ ಆಚರಣೆ ಮಾಡಿದರು. ಮುಗಿದ ನಂತರ ಗ್ರಾಮಸ್ಥರು ಒಟ್ಟಾಗಿ ಕುಳಿತು ಹಬ್ಬದ ಸವಿ ನೆನಪುಗಳನ್ನು ಹಂಚಿಕೊಂಡರು. ಈ ಸಂದರ್ಭದಲ್ಲಿ ಗ್ರಾಪಂ ಮಾಜಿ ಸದಸ್ಯ ಭೀಮಶಂಕರ್ ನಾಯ್ಕೋಡಿ ಮಲ್ಲಿಕಾರ್ಜುನ್. ಬಿರಾದಾರ್, ಅನಿಲ್‌ಗೌಡ, ಪಾಟೀಲ್, ಅರ್ಜುನ್ ಪೂಜಾರಿ, ಮಾದೇವ್, ವಾಲಿಕರ್. ಮೈಬು ಶೇಕ್. ಪೂಜಪ್ಪ ಮನವಿ. ಮೋನಪ್ಪ. ಬಡಿಗೇರ್. ರಂಜಾನ್ ಶೇಖ್. ಕಲ್ಲಯ್ಯ ಹಿರೇಮಠ. ಗಜಾನಂದ. ಬಳಗಾರ, ಲಕ್ಷ್ಮಿಪುತ್ರ. ನವದಗಿ. ಸಿದ್ದರಾಯ್ ಬಡಿಗೇರ್. ಭೀಮಶಂಕರ್ ಪೂಜಾರಿ. ಯುವರಾಜ್ ಬಿರಾದಾರ್, ಶ್ರೀಶೈಲ್ ನವದಗಿ, ಪುಂಡಪ್ಪ ಅಪ್ಪಾಗಿರಿ, ಗ್ರಾಮಸ್ಥರು ಸೇರಿದಂತೆ ಮತ್ತಿತರ ಉಪಸ್ಥಿತರಿದ್ದರು.

# ಬಣ್ಣ ಬಣ್ಣದ ಹೋಳಿ ಸಂಭ್ರಮ



ಮಲ್ಲಮ್ಮ ನುಡಿ ವಾರ್ತೆ


ಕಮಲನಗರ:ಮಾ.14: ಬಣ್ಣ ಬಣ್ಣದ ಹಬ್ಬಕ್ಕೆ ಯುವಕರು ಸಂಭ್ರಮದಿಂದ ಆಚರಣೆ ಮಾಡಿದರು. ಕಮಲನಗರ ತಾಲೂಕಿನ ಎಲ್ಲಾ ಹಳ್ಳಿಗಳಲ್ಲಿ ಸಂಭ್ರಮದ ಹೋಳಿ ಹಬ್ಬ ಬಣ್ಣ ಓಕುಳಿಯಾಟದಲ್ಲಿ ಮಿಂದೇದ ಯುವಕರು. ಭಾರತದಾದ್ಯಂತ ಹೋಳಿ ಹಬ್ಬವನ್ನು ಸಂಭ್ರಮ ಸಡಗರದಿಂದ ಎಲ್ಲರೂ ಆಚರಿಸಲಾಗುತ್ತದೆ. ಯಾವುದೇ ಜಾತಿ ಮತಗಳ ಭೇದವಿಲ್ಲದೆ ಒಟ್ಟಾಗಿ ಸೇರಿ ಬಣ್ಣಗಳ ಓಕುಳಿಯಾಟದಲ್ಲಿ ಮಿಂದೇಳುತ್ತಾರೆ. ಯಾವುದೇ ಹಬ್ಬವೂ ತನ್ನದೇ ಆದ ಆಚಾರ ಸಂಪ್ರದಾಯಗಳನ್ನು ಹೊಂದಿರುತ್ತದೆ. ಅದೇ ರೀತಿ ಹೋಳಿ ಬಣ್ಣಗಳ ಹಬ್ಬವಾಗಿದ್ದು, ದೂರದ ಊರಿನವರು ತಮ್ಮ ಹುಟ್ಟೂರಿಗೆ ಬಂದು ಈ ಹೋಳಿ ಹಬ್ಬವನ್ನು ಸಂಭ್ರಮಮಿಸಿದರು.

ಯುವಕರು, ಮಹಿಳೆಯರು, ಪುಟಾಣಿ ಮಕ್ಕಳು ಎಲ್ಲರೂ ಹೋಳಿಯನ್ನು ಸಂತಸದಿಂದ ಆಚರಣೆ ಮಾಡಿದರು. ತಾಲೂಕಿನ ಡಿಗ್ಗಿ ಗ್ರಾಮದಲ್ಲಿ ಯುವಕರು ಡಿಜೆ ಹಾಡಿಗೆ ಕುಣಿದು ಕುಪ್ಪಳಿಸಿದರು, ಮನೆ ಮನೆಗೆ ತೆರಳಿ ತಮ್ಮ ಸ್ನೇಹಿತರನ್ನು ಬಣ್ಣ ಬಳಿದು ಸಂತಸ ಪಟ್ಟರು, ಈ ಸಂದರ್ಭದಲ್ಲಿ ಸಂಗಮನಾಥ ಬಿರಾದಾರ, ವಿಜಯಕುಮಾರ ಬನವಾಸೆ, ರಾಜಕುಮಾರ ಕುಮಾರಗಿರೆ, ಪರಮೇಶ್ವರ ಚಾಂಡೇಶ್ವರೆ, ನಿಖಿಲ ಶ್ರೀಗಿರೆ, ಆಕಾಶ ಪಾಟೀಲ, ಗಿರಿರಾಜ ಶ್ರೀಗಿರೆ, ಪ್ರದೀಪ ಸ್ವಾಮಿ, ಸುನೀಲ ಚಾಂಡೇಶ್ವರೆ, ಸಚಿನ ಬಿರಾದಾರ, ಆದಿತ್ಯ ರಾಂಪುರೆ, ಅಭಿಜಿತ ರಾಂಪುರೆ, ಸುಮಿತ ಬನವಾಸೆ, ವಿರೇಶ ಹಿರೇಮಠ, ಭಾಗ್ಯಶ ಬನವಾಸೆ, ಅರುಣ ಚಾಂಡೇಶ್ವರೆ, ನಾಗರಾಜ ಸ್ವಾಮಿ ಗಣೇಶ ಪಾಟೀಲ ಲೋಕೇಶ ಸ್ವಾಮಿ ಸೇರಿದಂತೆ ಅನೇಕರು ಇದ್ದರು.

# ಪ್ರವಾಸಿ ಮಾಹಿತಿ ಕೇಂದ್ರ ಸ್ಥಾಪನೆ ಜಿಲ್ಲಾಧಿಕಾರಿ ನಲಿನ್ ಅತುಲ್

ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ : ಕೊಪ್ಪಳ ಜಿಲ್ಲೆಯ ಪ್ರವಾಸಿ ತಾಣಗಳ ಬೇಟಿ ನೀಡುವ ಪ್ರವಾಸಿಗರಿಗೆ ಮಾಹಿತಿ, ಸುರಕ್ಷತೆ ಹಾಗೂ ಭದ್ರತೆ ಹಿತದೃಷ್ಟಿಯಿಂದ ಪ್ರವಾಸಿ ಮಾಹಿತಿ ಕೇಂದ್ರ (ಖಟಿ–ಜಿಂಡಿಟಚಿಣುಂಟಿ ಅಜಟಿ–ಣಜಡಿ) ಸಹಾಯವಾಣಿಯನ್ನು ಸ್ಥಾಪಿಸಲಾಗಿದೆ ಜಿಲ್ಲಾಧಿಕಾರಿ ನಲಿನ್ ಅತುಲ್ ಅವರು ತಿಳಿಸಿದ್ದಾರೆ.



ಕೊಪ್ಪಳ ಜಿಲ್ಲೆಯು ಐತಿಹಾಸಿಕ ಪ್ರೇಕ್ಷಣಿಯ ಸ್ಥಳಗಳನ್ನು ಹೊಂದಿರುವ ಜಿಲ್ಲೆಯಾಗಿದ್ದು, ದೇಶ ಹಾಗೂ ವಿದೇಶದಿಂದ ಹಲವಾರು ಪ್ರವಾಸಿಗರು ಭೇಟಿ ನೀಡುತ್ತಿರುತ್ತಾರೆ. ಈ ಪ್ರವಾಸಕ್ಕೆ ಆಗಮಿಸುವ ಪ್ರವಾಸಿಗರಿಗೆ ಮಾಹಿತಿ, ಸುರಕ್ಷತೆ, ಜಾಗೃತಿ ಕಲ್ಪಿಸುವ ನಿಟ್ಟಿನಲ್ಲಿ ಕೊಪ್ಪಳ ಜಿಲ್ಲಾಡಳಿತ ಭವನದಲ್ಲಿ ಒಂದು ಪ್ರವಾಸಿ ಮಾಹಿತಿ ಕೇಂದ್ರವನ್ನು (ಸಹಾಯವಾಣಿ) ಮಾರ್ಚ್ 11 ರಿಂದ ಆರಂಭಿಸಲಾಗಿದೆ. ಈ ಮಾಹಿತಿ ಕೇಂದ್ರದಲ್ಲಿ ಆರೋಗ್ಯ, ಪೊಲೀಸ್, ಅಗ್ನಿಶಾಮಕ, ಅರಣ್ಯ, ಅಬಕಾರಿ, ಪ್ರವಾಸೋದ್ಯಮ, ಪುರಾತತ್ವ ಇಲಾಖೆಯ ಅಧಿಕಾರಿ ಸಿಬ್ಬಂದಿಗಳನ್ನು ನಿಯೋಜಿಸಲಾಗಿರುತ್ತದೆ.

ಕೊಪ್ಪಳ ಜಿಲ್ಲೆಗೆ ಆಗಮಿಸುವ ಪ್ರವಾಸಿಗರಿಗೆ ಆರೋಗ್ಯ, ಪ್ರವಾಸಿ ತಾಣ, ಅಪರಾದ, ವಿಪತ್ತುಗಳಂತಹ ಇತರ ಅವಶ್ಯಕ ಮತ್ತು ತುರ್ತು ಸಂದರ್ಭದಲ್ಲಿ ನಿಖರವಾದ ಮತ್ತು ಸೂಕ್ತ ಮಾಹಿತಿಯನ್ನು ಒದಗಿಸುವ ಹಿತದೃಷ್ಟಿಯಿಂದ ವಿವಿಧ ಇಲಾಖೆಯ ಅಧಿಕಾರಿ, ಸಿಬ್ಬಂದಿಗಳನ್ನೊಳಗೊಂಡ ಸಮಿತಿಯನ್ನು ರಚಿಸಲಾಗಿದ್ದು, ಈ ಅಧಿಕಾರಿ/ಸಿಬ್ಬಂದಿ ವರ್ಗದವರು ಪ್ರತಿದಿನ ಬೆಳಗ್ಗೆ 8 ರಿಂದ ರಾತ್ರಿ 8 ಗಂಟೆಯವರೆಗೆ ಸಹಾಯವಾಣಿ ಕೇಂದ್ರದಲ್ಲಿ ಕರ್ತವ್ಯವನ್ನು ನಿರ್ವಹಿಸಲಿದ್ದು, ಜಿಲ್ಲೆಗೆ ಆಗಮಿಸುವ ಪ್ರವಾಸಿಗರು ತಮಗೆ ಬೇಕಾದ ಅಗತ್ಯ ಸಲಹೆ ಹಾಗೂ ಮಾಹಿತಿಯನ್ನು ಪಡೆಯಲು ಈ ಸಹಾಯವಾಣಿ ಸಂಖ್ಯೆ: 08539–225311 ಗೆ ಸಂಪರ್ಕಿಸಿ ಮಾಹಿತಿಯನ್ನು ಪಡೆಯಬಹುದಾಗಿದೆ ಎಂದು ಪ್ರಕಟಣೆ ತಿಳಿಸಿದೆ.

# ಮಾ. 17 ರಂದು ಕೊಪ್ಪಳದಲ್ಲಿ ವಾಕ್ ಇನ್ ಇಂಟರ್ ವ್ಯೂವ್

ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ: ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರದಿಂದ ವಾಕ್ ಇನ್–ಇಂಟರ್‌ವ್ಯೂವ್‌ನ್ನು ಮಾರ್ಚ್ 17 ರಂದು ಬೆಳಿಗ್ಗೆ 10.30 ರಿಂದ 1.30ರ ವರೆಗೆ ಜಿಲ್ಲಾಡಳಿತ ಭವನದಲ್ಲಿರುವ ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರದಲ್ಲಿ ಹಮ್ಮಿಕೊಳ್ಳಲಾಗಿದೆ.

ಈ ವಾಕ್ ಇನ್ ಇಂಟರ್‌ವ್ಯೂವನಲ್ಲಿ ಖಾಸಗಿ ಸಂಸ್ಥೆಗಳು ಭಾಗವಹಿಸಿ, ತಮ್ಮಲ್ಲಿರುವ ಖಾಲಿ ಹುದ್ದೆಗಳನ್ನು ನೇರ ಸಂದರ್ಶನದ ಮೂಲಕ ನೇಮಕಾತಿ ಮಾಡಿಕೊಳ್ಳಲಿದ್ದು, ಎಸ್.ಎಸ್.ಎಲ್.ಸಿ, ಪಿಯುಸಿ ಅಥವಾ ತತ್ಸಮಾನ, ಯಾವುದೇ ಪದವಿ ಅಭ್ಯರ್ಥಿಗಳು ಈ ಸಂದರ್ಶನದಲ್ಲಿ ಪಾಲ್ಗೊಳ್ಳಬೇಕು. ಯಾವುದೇ ಶುಲ್ಕ ಇರುವುದಿಲ್ಲ ಎಲ್ಲರಿಗೂ ಉಚಿತ ಪ್ರವೇಶವಿರುತ್ತದೆ.

ಆಸಕ್ತ 18 ರಿಂದ 29 ವರ್ಷದ ಅರ್ಹ ವಿದ್ಯಾರ್ಹತೆ ಹೊಂದಿದ ನಿರುದ್ಯೋಗಿ ಯುವಕ ಮತ್ತು ಯುವತಿಯರು ದೃಢೀಕರಿಸಲಾದ ತಮ್ಮ ವಿದ್ಯಾರ್ಹತೆಯ ಎಲ್ಲ ಪ್ರಮಾಣ ಪತ್ರಗಳು 3 ಪ್ರತಿಗಳೊಂದಿಗೆ ಮತ್ತು ಆಧಾರ ಕಾರ್ಡಿನ ಪ್ರತಿ, ಬಯೋಡಾಟಾ ಹಾಗೂ ಪಾಸ್ ಪೋರ್ಟ್ ಅಳತೆಯ 2 ಭಾವಚಿತ್ರಗಳೊಂದಿಗೆ ಈ ವಾಕ್ ಇನ್ ಇಂಟರ್‌ವ್ಯೂವನಲ್ಲಿ ಭಾಗವಹಿಸಿ, ಉದ್ಯೋಗದ ನೆರವನ್ನು ಪಡೆಯಬಹುದಾಗಿದೆ.

ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರ, ಜಿಲ್ಲಾ ಆಡಳಿತ ಭವನ, ಮೊದಲನೇ ಮಹಡಿ, ಕೊಪ್ಪಳ ಇವರನ್ನು ಸಂಪರ್ಕಿಸುವಂತೆ ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರದ ಉದ್ಯೋಗಾಧಿಕಾರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ರಾಜ್ಯದ ವೈದ್ಯಕೀಯ ಶಿಕ್ಷಣ ಸಚಿವರ ಪ್ರವಾಸ

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಮಾ.14–ರಾಜ್ಯದ ವೈದ್ಯಕೀಯ ಶಿಕ್ಷಣ, ಕೌಶಲ್ಯಾಭಿವೃದ್ಧಿ ಮತ್ತು ಜೀವನೋಪಾಯ ಸಚಿವರಾದ ಡಾ. ಶರಣಪ್ರಕಾಶ ಆರ್. ಪಾಟೀಲ ಅವರು ಬೆಂಗಳೂರಿನಿಂದ ರೈಲಿನ ಮೂಲಕ ಮಾರ್ಚ್ 15 ರಂದು ಶನಿವಾರ ಬೆಳಿಗ್ಗೆ 5.50 ಗಂಟೆಗೆ ಕಲಬುರಗಿಗೆ ಆಗಮಿಸುವರು.

ನಂತರ ಅಂದು ಬೆಳಿಗ್ಗೆ 10 ಗಂಟೆಗೆ ಕಲಬುರಗಿ ಜಿಮ್ಸ್ ಭೇಟಿ ನೀಡಿ, ಸ್ಥಳೀಯ ಕಾರ್ಯಕ್ರಮದಲ್ಲಿ ಭಾಗವಹಿಸಿ ಕಲಬುರಗಿಯಲ್ಲಿ ವಾಸ್ತವ್ಯ ಮಾಡುವರು. ಮಾರ್ಚ್ 16 ರಂದು ಭಾನುವಾರ ಮಧ್ಯಾಹ್ನ 1 ಗಂಟೆಗೆ ಸೇಡಂ ತಾಲೂಕಿನ ರಂಜೋಳ ಗ್ರಾಮದಲ್ಲಿ ಆಯೋಜಿಸಲಾದ ಪ್ರೀಮಿಯರ್ ಕಪ್ ಫೈನಲ್ ಕ್ರಿಕೇಟ್ ಪಂದ್ಯಾವಳಿಯಲ್ಲಿ ಭಾಗಹಿಸುವರು. ಸಂಜೆ 5 ಗಂಟೆಗೆ ಸೇಡಂ ಬ್ಲಾಕ್ ಕಾಂಗ್ರೆಸ್ ಕಚೇರಿಗೆ ಭೇಟಿ ನೀಡಿ ಕಾರ್ಯಕರ್ತರಿಂದ ಅಹವಾಲು ಸ್ವೀಕರಿಸುವರು. ನಂತರ ರಾತ್ರಿ 9 ಗಂಟೆಗೆ ಸೇಡಂದಿಂದ ರೈಲಿನ ಮೂಲಕ ಬೆಂಗಳೂರಿಗೆ ಪ್ರಯಾಣಿಸುವರು.

# ದೇವದಾಸಿ ಪದ್ಧತಿ ನಿರ್ಮೂಲನೆಗೆ

## ಪಣತೊಡೋಣ : ಸಿಡಿಪಿಒ ಬೆಟ್ಟದೇಶ ಮಾಳೇಕೊಪ್ಪ



ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ : ಯಲಬುರ್ಗಾ ತಾಲ್ಲೂಕನ್ನು ದೇವದಾಸಿ ಪದ್ಧತಿ ಮುಕ್ತ ತಾಲ್ಲೂಕನ್ನಾಗಿ ಮಾಡಲು ಪಣ ತೊಡೋಣ, ಇಂತಹ ಪ್ರಕರಣ ಕಂಡುಬಂದರೆ ತಕ್ಷಣ ಇಲಾಖೆಯ ಗಮನಕ್ಕೆ ತನ್ನಿ ಎಂದು ಶಿಶು ಅಭಿವೃದ್ಧಿ ಯೋಜನಾಧಿಕಾರಿ ಬೆಟದೇಶ ಮಾಳೇಕೊಪ್ಪ ಹೇಳಿದರು.

ಅವರು ಗುರುವಾರ ಯಲಬುರ್ಗಾ ಪಟ್ಟಣದ ಡಾ.ಬಾಬು ಜಗಜೀವನರಾಮ್ ಸಮುದಾಯ ಭವನದಲ್ಲಿ ಮಾಜಿ ದೇವದಾಸಿ ಮಹಿಳೆಯರಿಗೆ ಏರ್ಪಡಿಸಿದ್ದ ಉಚಿತ ಆರೋಗ್ಯ ತಪಾಸಣೆ ಮತ್ತು ಕಾನೂನು ಅರಿವು ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತಾಡಿದರು.

1982ರಲ್ಲಿ ದೇವದಾಸಿ ಸಮರ್ಪಣಾ ನಿಷೇಧ ಕಾಯ್ದೆ ಬಂದರೂ ಈ ಹಿಂದೆ ಎರಡು ಪ್ರಕರಣಗಳು ದಾಖಲೆಯಾಗಿವೆ. ದೇವದಾಸಿ ಪದ್ಧತಿ ತಡೆಗಟ್ಟಲೇಬೇಕು. ಗೃಹಲಕ್ಷ್ಮಿ ಹಣ, ಮಾಸಾಶನ ಹಣವು ಸರ್ಕಾರದಿಂದ ಮಾಜಿ ದೇವದಾಸಿ ಮಹಿಳೆಯರಿಗೆ ಬರುತ್ತಿದೆ ಎಂದರು.

ಪಟ್ಟಣ ಪಂಚಾಯಿತಿಯ ಮುಖ್ಯಾಧಿಕಾರಿ ಬಿ.ನಾಗೇಶ ಅವರು ಮಾತನಾಡಿ, ನಿವೇಶನ ಇಲ್ಲದ ಒಬ್ಬ ಮಾಜಿ ದೇವದಾಸಿ ಮಹಿಳೆಗೆ 15 ದಿನಗಳಲ್ಲಿ ನಿವೇಶನ ಕೊಡುವ ವ್ಯವಸ್ಥೆ ಮಾಡಲಾಗುವುದು ಎಂದರು.

ದೇವದಾಸಿ ಪುನರ್ವಸತಿ ಯೋಜನಾಧಿಕಾರಿ ಪೂರ್ಣಿಮಾ ಯೋಳಬಾವಿ ಅವರು ಮಾಜಿ ದೇವದಾಸಿ ಮಹಿಳೆಯರಿಗೆ ಸಿಗುವ ಸೌಲಭ್ಯಗಳ ಬಗ್ಗೆ ಹಾಗೂ ಕಾರ್ಯಕ್ರಮದ ಬಗ್ಗೆ ಪ್ರಾಸ್ತಾವಿಕವಾಗಿ ಮಾತಾಡಿದರು.

ಅಪರ ಸರ್ಕಾರಿ ವಕೀಲರಾದ ಮಲ್ಲನಗೌಡ ಎಸ್.ಪಾಟೀಲ್ ಅವರು ಮಾತನಾಡಿ, ದೇವದಾಸಿ ಪದ್ಧತಿ ಈ ತಲೆಮಾರಿಗೆ ನಿರ್ನಾಮವಾಗಬೇಕು. ಈ ಪದ್ಧತಿ ಆಚರಿಸಿದರೆ ಶಿಕ್ಷೆ ಖಚಿತವೆಂದು ಹೇಳಿದರು.

ವಕೀಲರಾದ ಸಾವಿತ್ರಿ ಗೊಲ್ಲರ ಅವರು ಬಾಲ್ಯ ವಿವಾಹ, ಪೋಕ್ಸೋ ಕಾಯ್ದೆಯ ಬಗ್ಗೆ ತಿಳಿಸಿದರು. ಸಖಿ ಒನ್ ಸ್ಟಾಪ್ ಸೆಂಟರ್‌ನ ಆಡಳಿತಾಧಿಕಾರಿ ಯಮುನಾ ಬೆಸ್ತರ್ ಅವರು ಮಹಿಳೆಯರ ಸುರಕ್ಷತೆಗೆ ಇಲಾಖೆ ಬದ್ಧವಾಗಿದೆ ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ನೊಂದ ಮಹಿಳೆಯರ ಸರ್ಕಾರಿ ಸೇವಾ ಸೌಲಭ್ಯಗಳ ಪೋಸ್ಟರ್‌ನ್ನು ಬಿಡುಗಡೆ ಮಾಡಲಾಯಿತು. ಯಲಬುರ್ಗಾ ಪಟ್ಟಣ ಪಂಚಾಯಿತಿ ಅಧ್ಯಕ್ಷರಾದ ಅಂದಯ್ಯ ಕಳ್ಳಿಮಠ ಅವರು ಕಾರ್ಯಕ್ರಮ ಉದ್ಘಾಟಿಸಿದರು. ಸಮಾಜ ಕಲ್ಯಾಣ ಇಲಾಖೆಯ ಅಧೀಕ್ಷಕ ವಿಜಯಕುಮಾರ, ಆರೋಗ್ಯಾಧಿಕಾರಿ ಡಾ.ಅಮರೇಶ ನಾಗರಾಳ, ಪೋಲಿಸ್ ಇಲಾಖೆಯ ಎ.ಎಸ್.ಐ ಪ್ರಕಾಶ, ದೇವದಾಸಿ ಪುನರ್ವಸತಿಯ ತಾಲ್ಲೂಕು ಅನುಷ್ಠಾನಾಧಿಕಾರಿಗಳಾದ ದಾದೇಸಾಬ, ಸಕ್ಕುಬಾಯಿ ಹಾಗೂ ರೇಣುಕಾ ಸೇರಿದಂತೆ ಮತ್ತಿತರರು ಉಪಸ್ಥಿತರಿದ್ದರು.

# ಆರೋಗ್ಯ ಸಚಿವರಾದ ದಿನೇಶ್ ಗುಂಡೂರಾವ್ ಪ್ರವಾಸ

ಮಲ್ಲಮ್ಮ ನುಡಿ ವಾರ್ತೆ

ರಾಯಚೂರು ಮಾ.14 – ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ ದಕ್ಷಿಣ ಕನ್ನಡ ಜಿಲ್ಲಾ ಉಸ್ತುವಾರಿ ಸಚಿವರಾದ ದಿನೇಶ್ ಗುಂಡೂರಾವ್ ಅವರು ಮಾ.15ರಂದು ರಾಯಚೂರು ಜಿಲ್ಲೆಯಲ್ಲಿ ಪ್ರವಾಸ ಕೈಗೊಂಡಿದ್ದಾರೆ.

ಬೆಂಗಳೂರಿನಿಂದ ರೈಲ್ವೇ ಮಾರ್ಗವಾಗಿ ಹೊರಟು ಮಾ.15ರ ಶನಿವಾರ ಬೆಳಿಗ್ಗೆ 4.13ಕ್ಕೆ ರಾಯಚೂರು ನಗರ–ಕ್ಕೆ ಆಗಮಿಸಲಿದ್ದಾರೆ. ಬೆಳಿಗ್ಗೆ 8.50ಕ್ಕೆ ರಾಯಚೂರಿನಿಂದ ಮಾನ್ವಿಗೆ ಪ್ರಯಾಣ ಬೆಳೆಸುವರು. ಬಳಿಕ ಬೆಳಿಗ್ಗೆ 10.30ಕ್ಕೆ ಮಾನ್ವಿ ಪಟ್ಟಣದ ಬಾಷುಮಿಯಾ ಸಾಹುಕಾರ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಆವರಣದಲ್ಲಿ ಹಮ್ಮಿಕೊಳ್ಳಲಾದ್ದ ಬೃಹತ್ ಆರೋಗ್ಯ ಮೇಳ–2025ರ ಕಾರ್ಯಕ್ರಮದಲ್ಲಿ ಭಾಗಿಯಾಗುವರು.

ಮಧ್ಯಾಹ್ನ 2 ಗಂಟೆಗೆ ಮಾನ್ವಿಯಿಂದ ನಿರ್ಗಮಿಸಿ ರಸ್ತೆ ಮೂಲಕ ಮೆಹಬೂಬ್ ನಗರ ಮಾರ್ಗವಾಗಿ ತೆಲಂಗಾಣ ರಾಜ್ಯದ ರಾಜೀವ್ ಗಾಂಧಿ ಅಂತರಾಷ್ಟ್ರೀಯ ವಿಮಾನ ನಿಲ್ದಾಣಕ್ಕೆ ಪ್ರಯಾಣ ಬೆಳೆಸುವರು ಎಂದು ಸಚಿವರ ಆಪ್ತ ಕಾರ್ಯದರ್ಶಿಯವರು ತಿಳಿಸಿದ್ದಾರೆ.

# ತಾಳಿಕೋಟೆಯಲ್ಲಿ ಸಂಭ್ರಮದ ಮೊದಲ ದಿನದ ಬಣ್ಣದಾಟ



ಮಲ್ಲಮ್ಮ ನುಡಿ ವಾರ್ತೆ

ತಾಳಿಕೋಟಿ: ಪಟ್ಟಣ ಸೇರಿದಂತೆ ತಾಲೂಕಿನ ವಿವಿಧಡೆ ಹೋಳಿ ಹುಣ್ಣಿಮೆಯ ಮರುದಿನದಿಂದ ಎರಡು ದಿನಗಳವರೆಗೆ ಬಣ್ಣದಾಟ ಆಡುವ ಸಂಪ್ರದಾಯ ಇದೆ. ಶುಕ್ರವಾರ ಹೋಳಿ ಹಬ್ಬದ ಮೊದಲ ದಿನವನ್ನು ಸಡಗರ ಸಂಭ್ರಮದಿಂದ ಆಚರಿಸಲಾಯಿತು.

ಹುಬ್ಬಿ ನಕ್ಷತ್ರದ ದಿನವಾದ ಗುರುವಾರ ಸಂಜೆ ಸಂಪ್ರದಾಯದಂತೆ ಪಟ್ಟಣ ಸೇರಿದಂತೆ ತಾಲೂಕಿನಾದ್ಯಂತ ಕಾಮದಹನ ಮಾಡಲಾಯಿತು. ಶುಕ್ರವಾರ ಬೆಳಿಗ್ಗೆ ಮಕ್ಕಳು ಯುವಕರು ವಿವಿಧ ಗಲ್ಲಿಗಳಲ್ಲಿ ಪರಸ್ಪರ ಬಣ್ಣ ಎರಚಿ ಹೋಳಿ ಹಬ್ಬವನ್ನು ಸಡಗರ ಸಂಭ್ರಮದಿಂದ ಆಚರಿಸಲಾಯಿತು. ಮಕ್ಕಳಿಂದ ಬಣ್ಣದ ಓಕುಳಿ ಆಟ: ಬೆಳಿಗ್ಗೆ ಮಕ್ಕಳು ಪಟ್ಟಣದ ವಿವಿಧ ಗಲ್ಲಿ ನಗರ ಬಡಾವಣೆಗಳಲ್ಲಿ ಜಮಾಯಿಸಿದ ಯುವಕರು ಬಸವೇಶ್ವರ ವೃತ್ತ, ಅಂಬೇಡ್ಕರ್ ವೃತ್ತ, ಶಿವಾಜಿ ಸರ್ಕಲ್ ಹಾಗೂ ವಿವಿಧ ಬಡಾವಣೆಗಳಲ್ಲಿ ಪರಸ್ಪರ ಬಣ್ಣ ಎರಚಿ ಹೋಳಿ ಹಬ್ಬವನ್ನು ಸಡಗರ ಸಂಭ್ರಮದಿಂದ ಆಚರಿಸಿದರು. ತಾಳಿಕೋಟೆಯಲ್ಲಿ ಸಂಭ್ರಮದ ಮೊದಲ ದಿನದ ಬಣ್ಣದಾಟ

# ಅಪರಿಚಿತ ಮೃತ ವ್ಯಕ್ತಿಯ ವಾರಸುದಾರರ ಪತ್ತೆಗೆ ಮನವಿ

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ.ಮಾ.14– ದಿನಾಂಕ: 13–03–2025 ರಂದು ಕಲಬುರಗಿ ಮತ್ತು ಬಬಲಾದ ರೈಲು ನಿಲ್ದಾಣಗಳ ಮಧ್ಯೆ ಕಿ.ಮೀ. ನಂ. 567/03 ಅಪ್ ರೈಲು ಹಳಿಯಲ್ಲಿ ಸುಮಾರು 40 ರಿಂದ 45 ವರ್ಷದ ಅಪರಿಚಿತ ವ್ಯಕ್ತಿಯು ಮೃತಪಟ್ಟಿದ್ದು, ಈವರೆಗೆ ಈ ಮೃತ ವ್ಯಕ್ತಿಯ ವಾರಸುದಾರರು ಯಾರೂ ಪತ್ತೆಯಾಗಿರುವುದಿಲ್ಲ ಎಂದು ವಾಡಿ (ಜಂ) ರೈಲ್ವೆ ಪೊಲೀಸ್ ಠಾಣೆಯ ಪೊಲೀಸ್ ಸಬ್ ಇನ್ಸ್‌ಪೆಕ್ಟರ್ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಮೃತ ವ್ಯಕ್ತಿಯು 5 ಅಡಿ 1 ಇಂಚು ಎತ್ತರ ಇದ್ದು, ಗೋಧಿ ಮೈಬಣ್ಣ, ಕೋಲು ಮುಖ, ಉದ್ದನೆಯ ಮೂಗು, ತಲೆಯಲ್ಲಿ ಕಪ್ಪು ಮತ್ತು ಬಿಳಿ ಮಿಶ್ರಿತ ಕೂದಲು, ಮುಖದ ಮೇಲೆ ಕರುಚಲು ಬಿಳಿ ಬಣ್ಣದ ಮೀಸೆ ಮತ್ತು ದಾಡಿ ಇದ್ದು, ಸಾಧಾರಣ ಮೈಕಟ್ಟು ಹೊಂದಿರುತ್ತಾರೆ.

ಈ ಮೃತ ವ್ಯಕ್ತಿಯು ಬಿಳಿ ಬಣ್ಣದ ಅರ್ಧ ತೋಳಿನ ಕಾಟನ್ ಶರ್ಟ್, ನೀಲಿ ಬಣ್ಣದ ನೈಟ್ ಪ್ಯಾಂಟ್, ಬಿಳಿ ಬಣ್ಣದ ಅರ್ಧ ತೋಳಿನ ಬನಿಯಾನ, ಕೈಯಲ್ಲಿ ಹಳದಿ ಮತ್ತು ಕೆಂಪು ಮಿಶ್ರಿತ ಬಣ್ಣದ ಧಾರ, ಸೊಂಟದಲ್ಲಿ ಕಪ್ಪು ಮತ್ತು ಬಿಳಿ ಮಿಶ್ರಿತ ಉಡದಾರ ಅದಕ್ಕೆ ಸ್ಟೀಲ್‌ನ ತಾಯಿತಾ ಇರುತ್ತದೆ.

ಈ ಮೃತ ವ್ಯಕ್ತಿಯ ವಾರಸುದಾರರು ಯಾರಾದರೂ ಇದ್ದಲ್ಲಿ ರೈಲ್ವೆ ಪೊಲೀಸ್ ಕಂಟ್ರೋಲ್ ರೂಮ್ ಸಂಖ್ಯೆ 080–22871291, ವಾಡಿ ರೈಲ್ವೆ ಪೊಲೀಸ್ ಠಾಣೆಯ ದೂರವಾಣಿ ಸಂಖ್ಯೆ 08476–202244 ಹಾಗೂ ರೈಲ್ವೆ ಪೊಲೀಸ್ ಠಾಣೆಯ ಮೊಬೈಲ್ ಸಂಖ್ಯೆ 9480802132ಗೆ ಸಂಪರ್ಕಿಸಲು ಕೋರಿದೆ.

# ಯೋಗಿ ನಾರಾಯಣ ಯತೀಂದ್ರ ಕೈವಾರ್ ತಾತಯ್ಯ ಜಯಂತಿಯನ್ನು ಸರಳವಾಗಿ ಆಚರಣೆ

ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ : ಮಾರ್ಚ್ 14– ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಹಾಗೂ ನಗರಸಭೆ ಇವರ ಸಹಯೋಗದೊಂದಿಗೆ ಇಂದು ಜಿಲ್ಲಾಧಿಕಾರಿಗಳ ಕಾರ್ಯಾಲಯದಲ್ಲಿ ಯೋಗಿ ನಾರಾಯಣ ಯತೀಂದ್ರ ಕೈವಾರ್ ತಾತಯ್ಯ ಜಯಂತಿಯನ್ನು ಸರಳವಾಗಿ ಆಚರಿಸಲಾಯಿತು.

ಅಪರ ಜಿಲ್ಲಾಧಿಕಾರಿ ಶರಣಬಸಪ್ಪ ಕೋಟೆಪ್ಪಗೋಳ ಸೇರಿದಂತೆ ಅಧಿಕಾರಿ ಸಿಬ್ಬಂದಿಗಳು ಯೋಗಿ ನಾರಾಯಣ ಯತೀಂದ್ರ ಅವರ ಭಾವಚಿತ್ರಕ್ಕೆ ಪೂಜೆ ಸಲ್ಲಿಸಿ ಗೌರವ ಅರ್ಪಿಸಿದರು. ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕಿ ಉತ್ತರಾದೇವಿ ಮಠಪತಿ ಸೇರಿದಂತೆ ಇನ್ನಿತರರು ಉಪಸ್ಥಿತರಿದ್ದರು.

# ಕಂಪ್ಲಿ: ಇಂದು ರಂದು ವಿದ್ಯುತ್ ಗ್ರಾಹಕರ ಕುಂದು ಕೊರತೆ ಸಭ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಮಾ.14–ಕಂಪ್ಲಿ ಜೆಸ್ಕಾಂ ವತಿಯಿಂದ ಕಂಪ್ಲಿ ವ್ಯಾಪ್ತಿಗೆ ಬರುವ ವಿದ್ಯುತ್ ಗ್ರಾಹಕರು ಹಾಗೂ ಸಾರ್ವಜನಿಕರಿಗೆ ವಿದ್ಯುತ್ ಸಂಬಂಧಿಸಿದ ಸಮಸ್ಯೆಗಳನ್ನು ಬಗೆಹರಿಸಲು ಮಾ.15 ರಂದು ಮಧ್ಯಾಹ್ನ 12 ಗಂಟೆಗೆ ಕಂಪ್ಲಿ ಜೆಸ್ಕಾಂ ಕಚೇರಿಯಲ್ಲಿ ವಿದ್ಯುತ್ ಗ್ರಾಹಕರ ಕುಂದು ಕೊರತೆ ಸಭೆ ಆಯೋಜಿಸಲಾಗಿದ್ದು, ಸಾರ್ವಜನಿಕರು ಮತ್ತು ವಿದ್ಯುತ್ ಗ್ರಾಹಕರು ಭಾಗವಹಿಸಿ ಸದುಪಯೋಗ ಪಡೆದುಕೊಳ್ಳಬೇಕು ಎಂದು ಕಂಪ್ಲಿ ಜೆಸ್ಕಾಂನ ಸಹಾಯಕ ಇಂಜಿನಿಯರ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಇಂದು ವಿದ್ಯುತ್ ಗ್ರಾಹಕರ ಸಂವಾದ ಸಭೆ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಮಾ.14–ಕುರುಗೋಡು ಜೆಸ್ಕಾಂ ಕುಡತಿನಿ ಶಾಖೆ ವ್ಯಾಪ್ತಿಯಲ್ಲಿ ಬರುವ ಎಲ್ಲಾ ವಿದ್ಯುತ್ ಗ್ರಾಹಕರ ವಿದ್ಯುತ್ ಸಂಬಂಧಿತ ಸಮಸ್ಯೆಗಳನ್ನು ಬಗೆಹರಿಸಲು ಮಾ.15 ರಂದು ಬೆಳಿಗ್ಗೆ 11 ಗಂಟೆಗೆ ಏಳುಬೆಂಚಿ ಗ್ರಾಮದ ಸರ್ಕಾರಿ ಶಾಲೆ ಆವರಣದಲ್ಲಿ ವಿದ್ಯುತ್ ಗ್ರಾಹಕರ ಸಂವಾದ ಸಭೆ ಆಯೋಜಿಸಲಾಗಿದೆ ಎಂದು ಸಹಾಯಕ ಕಾರ್ಯನಿರ್ವಾಹಕ ಅಭಿಯಂತರ ರಾಜೇಂದ್ರ ಪ್ರಸಾದ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ತಾಪಮಾನ 45 ಡಿಗ್ರಿ ಸೆಂಟಿಗ್ರೇಡ್ ವರೆಗೂ ಮುಟ್ಟುವ ಸಂಭವವಿರುತ್ತದೆ ಮುನ್ನೆಚ್ಚರಿಕೆ ಕ್ರಮ ವಹಿಸಲು ಸಲಹೆ –ಜಿಲ್ಲಾಧಿಕಾರಿ ಡಾ.ಸುಶೀಲಾ.ಬಿ

ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ : ಮಾರ್ಚ್ 14–ರಾಷ್ಟ್ರೀಯ ಹಾಗೂ ರಾಜ್ಯ ಹವಾಮಾನ ಇಲಾಖೆ ಇವರ ಸೂಚನೆಯಂತೆ ಜಿಲ್ಲೆಯಲ್ಲಿ ಮಾರ್ಚ್ ಮತ್ತು ಏಪ್ರಿಲ್, ಮೇ ತಿಂಗಳಿನಲ್ಲಿ ತಾಪಮಾನ 45 ಡಿಗ್ರಿ ಸೆಂಟಿಗ್ರೇಡ್ ವರೆಗೂ ಮುಟ್ಟುವ ಸಂಭವವಿರುತ್ತದೆ ಎಂದು ಮುನ್ನೆಚ್ಚರಿಕೆ ನೀಡಿರುತ್ತಾರೆ. ಅದರಂತೆ ಜಿಲ್ಲೆಯಲ್ಲಿ ಮಾರ್ಚ್ ಮತ್ತು ಏಪ್ರಿಲ್, ಮೇ ತಿಂಗಳಿನಲ್ಲಿ ಗರಿಷ್ಠ ತಾಪಮಾನ ದಾಖಲಾಗುವ ಮತ್ತು ಬಿಸಿಗಾಳಿ ಬೀಸುವ ಸಂಭವವಿರುತ್ತದೆ, ಗರಿಷ್ಠ ತಾಪಮಾನ ಮತ್ತು ಬಿಸಿಗಾಳಿಯಿಂದ ಪ್ರತಿಕೂಲ ಪರಿಣಾಮಗಳನ್ನು ತಗ್ಗಿಸಲು ಸಾರ್ವಜನಿಕರು ಈ ಕೆಳಗಿನಂತೆ ಕ್ರಮವಹಿಸಬೇಕು ಎಂದು ಯಾದಗಿರಿ ಜಿಲ್ಲಾಧಿಕಾರಿ ಡಾ.ಸುಶೀಲಾ.ಬಿ ಅವರು ತಿಳಿಸಿದ್ದಾರೆ. ಬಿಸಿಗಾಳಿಗೆ ಸಲಹೆಗಳು: ಸಾಮಾನ್ಯ ಜನರಿಗೆ, ವಿಶೇಷವಾಗಿ ಮಧ್ಯಾಹ್ನ 12 ರಿಂದ 3 ಗಂಟೆಯ ವರೆಗೆ ಬಿಸಿಲಿನಲ್ಲಿ ಹೋಗುವುದನ್ನು ತಪ್ಪಿಸಿ. ಹೆಚ್ಚಾಗಿ ಬಾಯಾರಿಕೆ ಇಲ್ಲದಿದ್ದರೂ ಸಹ ಸಾಕಷ್ಟು ನೀರು ಕುಡಿಯಿರಿ. ಸಾಧ್ಯವಾದಷ್ಟು ಹಗುರವಾದ, ತಿಳಿ ಬಣ್ಣದ, ಸಡಿಲವಾದ ಮತ್ತು ರಂಧ್ರವಿರುವ ಹತ್ತಿ ಬಟ್ಟೆಗಳನ್ನು ಧರಿಸಿ. ಬಿಸಿಲಿನಲ್ಲಿ ಹೋಗುವಾಗ ರಕ್ಷಣಾತ್ಮಕ ಕನ್ನಡಕಗಳು, ಛತ್ರಿ, ಟೋಪಿ, ಬೂಟುಗಳು ಅಥವಾ ಚಪ್ಪಲ್ ಗಳನ್ನು ಬಳಸಿ. ಹೊರಗಿನ ತಾಪಮಾನ ಹೆಚ್ಚಿರುವಾಗ ಶ್ರಮದಾಯಕ ಚಟುವಟಿಕೆಗಳನ್ನು ತಪ್ಪಿಸಿ. ಮಧ್ಯಾಹ್ನ 12 ರಿಂದ 3 ಗಂಟೆಯವರೆಗೆ ಹೊರಗೆ ಕೆಲಸ ಮಾಡುವುದನ್ನು ತಪ್ಪಿಸಿ. ದೇಹವನ್ನು ನಿರ್ಜಲೀಕರಣಗೊಳಿಸುವ ಆಲ್ಕೋಹಾಲ್, ಕಾರ್ಬೋನೇಟೆಡ್ ತಂಪು ಪಾನೀಯಗಳನ್ನು ತಪ್ಪಿಸಿ. ಚಹಾ. ಕಾಫಿ ಮತ್ತು ಹೆಚ್ಚಿನ ಪ್ರೋಟೀನ್ ಆಹಾರವನ್ನು ತಪ್ಪಿಸಿ ಮತ್ತು ಹಳೆಯ ಆಹಾರವನ್ನು ಸೇವಿಸಬೇಡಿ. ನೀವು ಹೊರಗೆ ಕೆಲಸ ಮಾಡುತ್ತಿದ್ದರೆ, ಟೋಪಿ ಅಥವಾ ಛತ್ರಿ ಬಳಸಿ ಮತ್ತು ನಿಮ್ಮ ತಲೆ, ಕುತ್ತಿಗೆ, ಮುಖ ಮತ್ತು ಕೈಕಾಲುಗಳ ಮೇಲೆ ಒದ್ದೆಯಾದ ಬಟ್ಟೆಯನ್ನು ಬಳಸಿ. ನಿಲ್ಲಿಸಿದ ವಾಹನಗಳಲ್ಲಿ ಮಕ್ಕಳನ್ನು ಅಥವಾ ಸಾಕುಪ್ರಾಣಿಗಳನ್ನು ಬಿಡಬೇಡಿ. ನಿಮಗೆ ಮೂರ್ಛ ಅಥವಾ ಅನಾರೋಗ್ಯ ಅನಿಸಿದರೆ, ತಕ್ಷಣ ವೈದ್ಯರನ್ನು ಭೇಟಿ ಮಾಡಿ. ಓಆರ್‌ಎಸ್, ಮನೆಯಲ್ಲಿ ತಯಾರಿಸಿದ ಪಾನೀಯಗಳಾದ ಲಸ್ಸಿ, ತೆ–ೞರಣಿ (ಅಕ್ಕಿ ನೀರು), ನಿಂಬೆ ನೀರು, ಮಜ್ಜಿಗೆ ಇತ್ಯಾದಿಗಳನ್ನು ಬಳಸಿ ದೇಹವನ್ನು ಮರು–ಜಲೀಕರಣ ಮಾಡಲು ಸಹಾಯ ಮಾಡುತ್ತದೆ. ಪ್ರಾಣಿಗಳನ್ನು ನೆರಳಿನಲ್ಲಿ ಇರಿಸಿ ಮತ್ತು ಅವುಗಳಿಗೆ ಕುಡಿಯಲು ಸಾಕಮ್ಮ ನೀರು ನೀಡಿ. ನಿಮ್ಮ ಮನೆಯನ್ನು ತಂಪಾಗಿ ಇರಿಸಿ, ಪರದೆಗಳು, ಶಟರ್‌ಗಳು ಅಥವಾ ಸನ್‌ಶೇಡ್ ಗಳನ್ನು ಬಳಸಿ ಮತ್ತು ರಾತ್ರಿಯಲ್ಲಿ ಕಿಟಕಿಗಳನ್ನು ತೆರೆಯಿರಿ. ಫ್ಯಾನ್, ಒದ್ದೆ ಬಟ್ಟೆಗಳನ್ನು ಬಳಸಿ ಮತ್ತು ಆಗಾಗ ತಣ್ಣೀರಿನಲ್ಲಿ ಸ್ನಾನ ಮಾಡಬೇಕು. ಸನ್‌ಸ್ಟ್ರೋಕ್‌ನಿಂದ ಪೀಡಿತ ವ್ಯಕ್ತಿಯ ಚಿಕಿತ್ಸೆಗಾಗಿ ಸಲಹೆಗಳು : ವ್ಯಕ್ತಿಯನ್ನು ತಂಪಾದ ಸ್ಥಳದಲ್ಲಿ ನೆರಳಿನ ಕೆಳಗೆ ಇರಿಸಿ. ಅವರನ್ನು ಒಮ್ಮೆ ಬಟ್ಟೆಯಿಂದ ಒರೆಸಿ, ಆಗಾಗ ದೇಹವನ್ನು ತೊಳೆಯಿರಿ. ತಲೆಯ ಮೇಲೆ ಸಾಮಾನ್ಯ ತಾಪಮಾನದ ನೀರನ್ನು ಸುರಿಯಿರಿ. ದೇಹದ ಉಷ್ಣತೆಯನ್ನು ಕಡಿಮೆ ಮಾಡುವುದು ಮುಖ್ಯ ವಿಷಯ. ವ್ಯಕ್ತಿಗೆ ಔಖಖ ಕುಡಿಯಲು ಅಥವಾ ನಿಂಬೆ ಸರಬತ್, ತೋರಣಿ ಅಥವಾ ದೇಹವನ್ನು ಪುನರ್ಜಲೀಕರಣಗೊಳಿಸಲು ಉಪಯುಕ್ತವಾದ ಯಾವುದನ್ನಾದರೂ ನೀಡಿ. ತಕ್ಷಣ ವ್ಯಕ್ತಿಯನ್ನು ಹತ್ತಿರದ ಆರೋಗ್ಯ ಕೇಂದ್ರ–ಕ್ಕೆ ಕರೆದುಕೊಂಡು ಹೋಗಿ ರೋಗಿಗೆ ತಕ್ಷಣದ ಆಸ್ಪತ್ರೆಗೆ ಅಗತ್ಯವಿರುತ್ತದೆ, ಏಕೆಂದ–ರೆ ಶಾಖದ ಹೊಡೆತಗಳು ಮಾರಣಾಂತಿಕವಾಗಬಹುದು.

ಅಪಾಯದಲ್ಲಿರುವ ಜನರು ತಂಪಾದ ವಾತಾವರಣದಿಂದ ಬಿಸಿ ವಾತಾವರಣಕ್ಕೆ, ಬಂದವರು. ಶಾಖದ ಅಲೆಯ ಸಮಯದಲ್ಲಿ ನಿಮ್ಮ ಕುಟುಂಬಕ್ಕೆ ಅಂತಹ ವ್ಯಕ್ತಿ(ರು) ಭೇಟಿ ನೀಡುತ್ತಿರಬಹುದು. ದೇಹವು ಶಾಖಕ್ಕೆ ಒಗ್ಗಿಕೊಳ್ಳುವವರೆಗೆ ಅವರು ಒಂದು ವಾರದವರೆಗೆ ತೆರೆದ ಮೈದಾನದಲ್ಲಿ ಚಲಿಸಬಾರದು ಮತ್ತು ಸಾಕಷ್ಟು ನೀರು ಕುಡಿಯಬೇಕು. ಶಾಖ ತರಂಗದ ಸಮಯದಲ್ಲಿ ಬಿಸಿ ವಾತಾವರಣಕ್ಕೆ ಕ್ರಮೇಣ ಒಡ್ಡಿಕೊಳ್ಳುವುದರಿಂದ ಒಗ್ಗಿಕೊಳ್ಳುವಿಕೆಯನ್ನು ಸಾಧಿಸಲಾಗುತ್ತದೆ. ರೈತರು, ಕೃಷಿ ಕಾರ್ಮಿಕರು : ನೀವು ಹೊಲದಲ್ಲಿ ಕೆಲಸ ಮಾಡುತ್ತಿದ್ದರೆ ಟೋಪಿ ಅಥವಾ ಛತ್ರಿ ಬಳಸಿ ಮತ್ತು ನಿಮ್ಮ ತಲೆ, ಕುತ್ತಿಗೆ, ಮುಖ ಮತ್ತು ಕೈಕಾಲುಗಳ ಮೇಲೆ ಒದ್ದೆಯಾದ ಬಟ್ಟೆಯನ್ನು ಬಳಸಬೇಕು. ಪ್ರಯಾಣಿಕರಿಗೆ, ಪ್ರಯಾಣಿಸುವಾಗ, ನಿಮ್ಮೊಂದಿಗೆ ನೀರನ್ನು ಒಯ್ದಿರಬೇಕು.

ಬಿಸಿಗಾಳಿ ಸಂದರ್ಭದಲ್ಲಿ ಸಮುದಾಯ ಮಟ್ಟದಲ್ಲಿ ಅನುಸರಿಸಬೇಕಾದ, ಅನುಸರಿಸಬಾರದ ಕ್ರಮಕ್ಕೆ ಸೂಚನೆ ಅನುಸರಿಸಬೇಕಾದ ಕ್ರಮಗಳು : ಸಾಧ್ಯವಾದಷ್ಟು ತಂಪಾದ ಸ್ಥಳಗಳ ಇರತಕ್ಕದ್ದು, ಬಿಸಿಲಿನ ಅವಧಿಯಲ್ಲಿ ಕೊಡೆಗಳನ್ನು ಬಳಸಿ. ಸಾಧ್ಯವಾದಷ್ಟು ಹತ್ತಿಯ ಉಡುವುಗಳನ್ನು ಧರಿಸಿ. ಹತ್ತಿಯ ಟೋಪಿಗಳನ್ನು ಬಳಸಿ. ಹೆಚ್ಚಿನ ಬಿಸಿಲು ಅವಧಿಯಲ್ಲಿ ವಿಶ್ರಾಂತಿ ಪಡೆಯಿರಿ. ಸಾಕಷ್ಟು ನೀರು, ಮಜ್ಜಿಗೆ ಕುಡಿಯಿರಿ. ವಾಸವಿರುವ ಕೋಣೆಯನ್ನು ತಂಪಾಗಿರಿಸಿ. ಬಿಸಿಗಾಳಿಗೆ ತುತ್ತಾದ ವ್ಯಕ್ತಿಯನ್ನು ಕೂಡಲೇ ತಂಪಾದ ಸ್ಥಳಕ್ಕೆ ರವಾನಿಸಿ. ಬಿಸಿಗಾಳಿ ತುತ್ತಾದ ವ್ಯಕ್ತಿಗೆ ಕೂಡಲೇ ಚಿಕಿತ್ಸೆ ನೀಡಿ. ಬಿಸಿಗಾಳಿ ತುತ್ತಾದವರಿಗೆ ಸಾಕಷ್ಟು ಕುಡಿಯುವ ನೀರು, ಮಜ್ಜಿಗೆ ದ್ರವಹಾರ ನೀಡಿ. ಅನುಸರಿಸಬಾರದ ಕ್ರಮಗಳು : ನೇರ ಬಿಸಿಲು, ಬಿಸಿಗಾಳಿಗೆ ಒಡ್ಡಿಕೊಳ್ಳಬೇಡಿ. ಬಿಸಿಲಿನ ಅವಧಿಯಲ್ಲಿ ಕೊಡ ಇಲ್ಲದೆ ಹೊರಗೆ ಹೋಗಬೇಡಿ. ಕಪ್ಪು, ಘಾಡ ಬಣ್ಣದ ತೆಳುವಾದ ಹಾಗೂ ಸಿಂಥಟಿಕ್ ಉಡುಪುಗಳನ್ನು ಧರಿಸಬೇಡಿ. ನೇರವಾಗಿ ಬಿಸಿಲಿನ ಝಳಕ್ಕೆ ತಲೆ ಒಡ್ಡಬೇಡಿ. ಹೆಚ್ಚಿನ ಬಿಸಿಲು ಇರುವ ಅವಧಿಯಲ್ಲಿ ಶ್ರಮದಾಯಕ ದೈಹಿಕ ಕೆಲಸಗಳನ್ನು ಮಾಡಬೇಡಿ. ಬಿಸಿ ಚಹ ಮಧ್ಯ ಸೇವಿಸಬೇಡಿ. ವಾಸವಿರುವ ಕೋಣೆಯಲ್ಲಿ ನೇರವಾಗಿ ಬಿಸಿಲು ಬೀಳುವುದನ್ನು ತಪ್ಪಿಸಿ. ಬಿಸಿಗಾಳಿಗೆ ತುತ್ತಾದ ವ್ಯಕ್ತಿಯನ್ನು ಕೂಡಲೇ ತಂಪಾದ ಸ್ಥಳಕ್ಕೆ ರವಾನಿಸಲು ತಡಮಾಡಬೇಡಿ. ಬಿಸಿಗಾಳಿ ತುತ್ತಾದ ವ್ಯಕ್ತಿಗೆ ಪ್ರಥಮ ಚಿಕಿತ್ಸೆ ನೀಡುವುದನ್ನು ತಡಮಾಡಬೇಡಿ. ಬಿಸಿಗಾಳಿ ಸಂದರ್ಭಗಳಲ್ಲಿ ಚಹಾ, ಕಾಫಿ ಮತ್ತು ಜೇನು ಸೇವಿಸಬೇಡಿ ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಕೊಪ್ಪಳ : ಜಾನಪದ ಕಾರ್ಯಕ್ರಮಗಳ ಮೂಲಕ ತಂಬಾಕು ನಿಯಂತ್ರಣಕ್ಕೆ ಜಾಗೃತಿ



ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ:ತಂಬಾಕು ಸೇವನೆಯಿಂದ ಆರೋಗ್ಯದ ಮೇಲೆ ಆಗುವ ದುಷ್ಪರಿಣಾಮಗಳ ಕುರಿತು ಜಾನಪದ ಕಾರ್ಯಕ್ರಮಗಳ ಮೂಲಕ ತಂಬಾಕು ನಿಯಂತ್ರಣ–ಕ್ಕೆ ಕೊಪ್ಪಳ ಬಸ್ ನಿಲ್ದಾಣದಲ್ಲಿ ಇತ್ತೀಚೆಗೆ ವಿಶೇಷ ಜಾಗೃತಿ ಮೂಡಿಸಲಾಯಿತು.

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಜಿಲ್ಲಾ ಸರ್ವೇಕ್ಷಣ ಘಟಕ ಜಿಲ್ಲಾ ತಂಬಾಕು ನಿಯಂತ್ರಣ ಕೊಶ ಕೊಪ್ಪಳ ಹಾಗೂ ಶ್ರೀ ಕಾರ್ಗಿಲ್ ಮಲ್ಲಯ್ಯ ಅಂಗವಿಕಲರ ಸಂಘ, ಅಳವಂಡಿ ಇವರ ಸಹಯೋಗದಲ್ಲಿ ತಂಬಾಕು ಸೇವನೆಯಿಂದ ಆರೋಗ್ಯದ ಮೇಲೆ ಆಗುವ ದುಷ್ಪರಿಣಾಮಗಳು ಕುರಿತು ಜಾನಪದ ಸಂಗೀತ ಬೀದಿ ನಾಟಕ ಕಾರ್ಯಕ್ರಮ ನಡೆಯಿತು.

ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ತಾಲೂಕಿನ ಆರೋಗ್ಯ ಶಿಕ್ಷಣಾಧಿಕಾರಿ ಗಂಗಮ್ಮ ಕಳಾಸಪುರ ಅವರು ಕಾರ್ಯಕ್ರಮಕ್ಕೆ ಚಾಲನೆ ನೀಡಿದರು. ಬಳಿಕ ಮಾತನಾಡಿ, ತಂಬಾಕು ಸೇವನೆಯಿಂದ ಅನಾರೋಗ್ಯ ಉಂಟಾಗುತ್ತದೆ. ತಂಬಾಕಿನ ನಿಕೋಟಿನ್ ಅಂಶದಿಂದ ನಮ್ಮ ದೇಹವು ಕ್ಯಾನ್ಸರ್, ದಂತಕ್ಷಯ, ಗರ್ಭಪಾತ, ಹೃದಯ ರೋಗ ಸಮಸ್ಯೆ ಗಂಟಲು ನೋವು, ಮೂತ್ರಕೋಶ ತೊಂದರೆ ಸೇರಿದಂತೆ ಇನ್ನೂ ಅನೇಕ ಸಮಸ್ಯೆಗಳಿಗೆ ತುತ್ತಾಗಿ ಸಾವನ್ನು ತರುತ್ತದೆ. ಸಾರ್ವಜನಿಕ ಸ್ಥಳಗಳಲ್ಲಿ ಧೂಮಪಾನ ನಿಷೇಧಿತ ಕಾನೂನು ಜಾರಿಯಲ್ಲಿದೆ. ತಂಬಾಕು ಸೇವನೆ ಆರೋಗ್ಯಕ್ಕೆ ತುಂಬಾ ಹಾನಿಕಾರಕವಾಗಿದ್ದು, ಈ ಬಗ್ಗೆ ಎಚ್ಚರಿಕೆ ವಹಿಸಬೇಕು ಎಂದು ತಿಳಿಸಿದರು.

ಶಾಂತಮ್ಮ ಅವರು ಮಾತನಾಡಿ, ತಂಬಾಕು ಸೇವನೆಯಿಂದ ಭಾರತ ದೇಶದಲ್ಲಿ ಹತ್ತು ಲಕ್ಷಕ್ಕೂ ಹೆಚ್ಚು ಜನರು ಮರಣ ಹೊಂದುತ್ತಿದ್ದಾರೆ. ಶೇಕಡ 15ರಷ್ಟು ಯುವ ಪೀಳಿಗೆ ಬಲಿಯಾಗಿ ಕ್ಯಾನ್ಸರ್ ಎಂಬ ಮಹಾಮಾರಿಗೆ ತುತ್ತಾಗುತ್ತಿದ್ದಾರೆ. ಸಾರ್ವಜನಿಕ ಸ್ಥಳಗಳಲ್ಲಿ ತಂಬಾಕು ಮತ್ತು ಧೂಮಪಾನ ಮಾಡುವುದು ಶಿಕ್ಷಾಹಾರ ಅಪರಾಧವಾಗಿರುತ್ತದೆ ಸಾರ್ವಜನಿಕರು ಇದರ ಬಗ್ಗೆ ಅರಿತು ಜಾಗೃತರಾಗಬೇಕು ಜಿಲ್ಲಾ ಆರೋಗ್ಯ ಕುಟುಂಬ ಕಲ್ಯಾಣ ಇಲಾಖೆ ಮೂಲಕ ರಾಷ್ಟ್ರೀಯ ತಂಬಾಕು ನಿಯಂತ್ರಣ ಯೋಜನೆ ಅಡಿಯಲ್ಲಿ ಪ್ರಸನ್ನ ಮುಕ್ತ ಕೇಂದ್ರಗಳ ಮೂಲಕ ತಂಬಾಕು ಸೇವನೆ ದುಷ್ಪರಿಣಾಮಗಳ ಕುರಿತು ಆಪ್ತ ಸಮಾಲೋಚನೆ ಮೂಲಕ ಸೂಕ್ತ ಚಿಕಿತ್ಸೆ ಮತ್ತು ಸಲಹೆ ಮಾರ್ಗದರ್ಶನ ಮೂಲಕ ತಂಬಾಕು ಚಟ್ಟವನ್ನು ಬಿಡಿಸಲಾಗುತ್ತದೆ ಎಂದು ತಿಳಿಸಿದರು. ಇದೆ ಸಂದರ್ಭದಲ್ಲಿ ಸಾಮಾಜಿಕ ಕಾರ್ಯಕರ್ತೆ ಸರಸ್ವತಿ ಸೇರಿದಂತೆ ಮತ್ತಿತರರಿದ್ದರು.

ಅಳವಂಡಿಯ ಶ್ರೀ ಕಾರ್ಗಿಲ್ ಮಲ್ಲಯ್ಯ ಅಂಗವಿಕಲರ ಸಂಘದ ಕಲಾವಿದರಾದ ವೀರೇಶ ಹಾಲಗುಂಡಿ, ಸಿದ್ದಲಿಂಗಯ್ಯ ಗೋರ್ಲೆಕೊಪ್ಪ, ವಿರುಪಾಕ್ಷ ಎಡಿಯಪುರ್ ಮಹಾದೇವಪ್ಪ ಐನಕ್ಕನವರ, ವಸಂತ ಉಳ್ಳಾಗಡ್ಡಿ ಉಮೇಶ್ ಸಿದ್ದಲಿಂಗಮ್ಮ ಹಾಲಗುಂಡಿ, ಶಿವಲಿಂಗಮ್ಮ ಹಲಗಿ ಕಲಾವಿದರು ತಂಬಾಕು ಸೇವನೆಯಿಂದ ಆರೋಗ್ಯದ ಮೇಲೆ ಆಗುವ ದುಷ್ಪರಿಣಾಮಗಳ ಕುರಿತು ಹಾಗೂ ತಂಬಾಕು ನಿಯಂತ್ರಣ ಕುರಿತು ಜಾನಪದ ಸಂಗೀತ ಬೀದಿ ನಾಟಕ ಕಲಾಭಿನಯದ ಮೂಲಕ ಸಾರ್ವಜನಿಕರಿಗೆ ಅರಿವು ಮೂಡಿಸಿದರು.

# 'ಈಜಿಪುರ ಮೇಲ್ಸೇತುವೆ' ಕಾಮಗಾರಿಗೆ : ಸಚಿವ ರಾಮಲಿಂಗಾ ರೆಡ್ಡಿ ತಾಕೀತು; ಬೆನ್ನಲ್ಲೇ ಬಿಬಿಎಂಪಿ ಮಹತ್ವದ ಆದೇಶ

ಮಲ್ಲಮ್ಮ ನುಡಿ ವಾರ್ತೆ

ಬೆಂಗಳೂರು:ಕೋರಮಂಗಲದ 'ಈಜಿಪುರ ಮೇಲ್ಸೇತುವೆ' ಕಾಮಗಾರಿ ತ್ವರಿತವಾಗಿ ಪೂರ್ಣಗೊಳಿಸುವಂತೆ ಸಾರಿಗೆ ಸಚಿವ ರಾಮಲಿಂಗಾ ರೆಡ್ಡಿ ಅವರು ಅಧಿಕಾರಿಗಳಿಗೆ ತಾಕೀತು ಮಾಡಿದ್ದಾರೆ.

ತಾವು ಪ್ರತಿನಿಧುಸುತ್ತಿರುವ ಬೆಂಗಳೂರಿನ ಬಿಟಿಎಂ ವಿಧಾನಸಭಾ ಕ್ಷೇತ್ರದಲ್ಲಿ ಮೂಲ ಸೌಕರ್ಯ ಅಭಿವೃದ್ಧಿ ಸಂಬಂಧ ಅಧಿಕಾರಿಗಳೊಂದಿಗೆ ಚರ್ಚಿಸಿದ ಸಚಿವ ರಾಮಲಿಂಗಾ ರೆಡ್ಡಿ, ಕೋರಮಂಗಲದ ಈಜಿಪುರ ಮೇಲ್ಸೇತುವೆ ಕಾಮಗಾರಿಯನ್ನು ತ್ವರಿತವಾಗಿ ಪೂರ್ಣಗೊಳಿಸಿ ಸಾರ್ವಜನಿಕರ ಸೇವೆಗೆ ಅನುವು ಮಾಡಲು ಪ್ರತೇ–್ಯಕ ಅಭಿಯಂತರರ ತಂಡ ರಚಿಸಲು ಸೂಚಿಸಿದ್ದಾರೆ. ಈ ಹಿನ್ನೆಲೆಯಲ್ಲಿ ಬಿ.ಬಿ.ಎಂ.ಪಿ ಮುಖ್ಯ ಆಯುಕ್ತರ ಆದೇಶ ಹೊರಬಿದ್ದಿದೆ.

ಖಜಟಚಣಜಜಕಥಣ

ಆಪ್ ನಾಯಕರಿಗೆ ಸಂಕಷ್ಟ: ಸಿಸೋಡಿಯಾ, ಸತ್ಯೇಂದ್ರ ಜೈನ್ ವಿರುದ್ಧ ಈಖಐಖಗೆ ರಾಷ್ಟ್ರಪತಿ ಗ್ರೀನ್ ಸಿಗ್ನಲ್

'ಆವೆ ಮಣ್ಣನ್ನು ಮೈನ್ಸ್ ಎಂದು ಪರಿಗಣಿಸಬೇಡಿ': ಸರ್ಕಾರದ ನಿರ್ಧಾರಕ್ಕೆ ಗಂಟಿಹೊಳೆ ಆಕ್ರೋಶ..

ಸೂಪರ್ ಸ್ಪೆಷಾಲಿಟಿ ವೈದ್ಯರ ನಿವೃತ್ತಿ ವಯಸ್ಸು ಹೆಚ್ಚಳಕ್ಕೆ ಸರ್ಕಾರದ ಚಿಂತನೆ



ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯ ಕೋರಮಂಗಲದ "ಈಜಿಪುರ ಮೇಲ್ಸೇತುವ ಯೋಜನೆ' ಕಾಮಗಾರಿಯನ್ನು ಪ್ರಸ್ತುತ ಯೋಜನೆ–ಕೇಂದ್ರ ವಿಭಾಗದಿಂದ ನಿರ್ವಹಿಸಲಾಗುತ್ತಿರುತ್ತದೆ. ಈಜಿಪುರ ಮೇಲ್ಸೇತುವೆ ಕಾಮಗಾರಿ ಯೋಜನೆಯನ್ನು ಸಾರ್ವಜನಿಕರ ಹಿತದೃಷ್ಟಿಯಿಂದ ಶೀಘ್ರವಾಗಿ ಪೂರ್ಣಗೊಳಿಸಿ ಅನುಷ್ಠಾನಗೊಳಿಸಬೇಕೆಂದು ಸಚಿವರು ಸೂಚನೆ ನೀಡಿದ ಹಿನ್ನೆಲೆಯಲ್ಲಿ ಬಿ.ಬಿ.ಎಂ.ಪಿ ಯ ಮುಖ್ಯ ಆಯುಕ್ತರು, ಇನ್ನು ಮುಂದೆ ಕೇಂದ್ರ ಕಚೇ–ರಿಯ ಗುಣನಿಯಂತ್ರಣ / ಗುಣಭರವಸೆ ವಿಭಾಗದಿಂದ "ಈಜಿಪುರ ಮೇಲೇತುವೆ ಯೋಜನೆ ಕಾಮಗಾರಿಯನ್ನು ಅನುಷ್ಠಾನಗೊಳಿಸಲು ಆದೇಶ ಹೊರಡಿಸಿದ್ದಾರೆ.

'ಈಜಿಪುರ ಮೇಲೇತುವೆ ಯೋಜನೆ' ಕಾಮಗಾರಿ ಪೂರ್ಣಗೊಳ್ಳುವವರೆಗೆ ಮುಖ್ಯ ಅಭಿಯಂತರರು (ಗುಣನಿಯಂತ್ರಣ/ಗುಣಭರವಸೆ) ಡಾ. ರಾಘವೇಂದ್ರ ಪ್ರಸಾದ್ ಬಿ. ಜಿ.ರವರ ಅಧೀನದಲ್ಲಿ ಪೂರ್ಣ ಪ್ರಮಾಣದಲ್ಲಿ ಕಾರ್ಯನಿರ್ವಹಿಸಲು ಇಂಜಿನಿಯರುಗಳನ್ನು ನೇಮಿಸಿ ಆದೇಶಿಸಲಾಗಿದೆ.

ಕಾರ್ಯಪಾಲಕ ಅಭಿಯಂತರರು (ಯೋಜನೆ–ಕೇಂದ್ರ/1) ಎನ್. ಚಂದ್ರಶೇಖರ್, ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರಾದ ಸಂದೇಶ್ ಶೆಟ್ಟಿ, ರಂಜಿತ್ ಜೆ. ಎಲ್., ಅವರ ಬಳಿ ಹಾಜರಾತಿ ಸಲ್ಲಿಸಿ, 'ಈಜಿಪುರ ಮೇಲ್ವೇತುವೆ ಯೋಜನೆ" ಕಾಮಗಾರಿಯನ್ನು ತ್ವರಿತವಾಗಿ ಅನುಷ್ಠಾನಗೊಳಿಸಲು ಅಗತ್ಯ ಕ್ರಮ ಕೈಗೊಳ್ಳಲು ಸೂಚಿಸಲಾಗಿದೆ ಎಂದು ಮೂಲಗಳು ತಿಳಿಸಿವೆ.

# ಮಾನ್ವಿ ಬೃಹತ್ ಆರೋಗ್ಯ ಮೇಳದ ಸಿದ್ಧತೆ ಪರಿಶೀಲಿಸಿದ ಜಿಲ್ಲಾಧಿಕಾರಿಗಳು




ಮಲ್ಲಮ್ಮ ನುಡಿ ವಾರ್ತೆ

ರಾಯಚೂರು ಮಾ.14– ಜಿಲ್ಲಾಧಿಕಾರಿಗಳಾದ ನಿತೀಶ್ ಕೆ. ಅವರು ಮಾರ್ಚ 14ರಂದು ಮಾನವಿ ಪಟ್ಟಣಕ್ಕೆ ಭೇಟಿ ನೀಡಿ ಬೃಹತ್ ಆರೋಗ್ಯ ಮೇಳದ ಸಿದ್ದತೆಯನ್ನು ಪರಿಶೀಲಿಸಿದರು.

ಮಾನ್ವಿ ಪಟ್ಟಣದ ಬಾಷುಮಿಯಾ ಸಾಹುಕಾರ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಆವರಣದಲ್ಲಿ ಹಮ್ಮಿಕೊಳ್ಳಲಾದ ಆರೋಗ್ಯ ಮೇಳದ ಸ್ಥಳಕ್ಕೆ ಖುದ್ದು ಭೇಟಿ ನೀಡಿ ಅಂತಿಮ ಹಂತದಲ್ಲಿರುವ ಸಿದ್ಧತೆಯನ್ನು ಪರಿಶೀಲಿಸಿದರು.

ಇಎನ್‌ಟಿ, ಚರ್ಮರೋಗ, ದಂತ, ಶ್ವಾಸಕೋಶ, ಕ್ಯಾನ್ಸರ್ ತಪಾಸಣೆಗಾಗಿ ಆಯಾ ಕಡೆಗೆ ಪ್ರತ್ಯೇಕವಾಗಿ ನಿರ್ಮಿಸಲಾದ ವಿಭಾಗಗಳ ವೀಕ್ಷಣೆ ನಡೆಸಿದರು.

ಈ ಆರೋಗ್ಯ ಮೇಳದಲ್ಲಿ ಸುಮಾರು 5 ಸಾವಿರಕ್ಕೂ ಹೆಚ್ಚಿನ ಜನರು ಆಗಮಿಸುವ ನಿರೀಕ್ಷೆ ಇದ್ದು, ಎಲ್ಲರಿಗೂ ಶುದ್ಧ ಕುಡಿಯುವ ನೀರು, ಊಟ ಸೇರಿದಂತೆ ಮೂಲಸೌಕರ್ಯಗಳನ್ನು ಅಚ್ಚುಕಟ್ಟಾಗಿ ಒದಗಿಸಲು ಕ್ರಮ ವಹಿಸಬೇಕು ಎಂದು ಅವರು ಅಧಿಕಾರಿಗಳಿಗೆ ಸೂಚನೆ ನೀಡಿದರು.

ಇದೇ ಸಂದರ್ಭದಲ್ಲಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಎಂ.ಪುಟ್ಟಮಾದಯ್ಯ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಅಧಿಕಾರಿ ಡಾ.ಸುರೇಂದ್ರಬಾಬು, ಜಿಲ್ಲಾ ಸರ್ವೇಕ್ಷಣಾಧಿಕಾರಿ ಡಾ.ಗಣೇಶ್, ತಾಲೂಕು ಆರೋಗ್ಯಾಧಿಕಾರಿ ಡಾ.ಶರಣಬಸವ ಸೇರಿದಂತೆ ಇತರರು ಇದ್ದರು.

### ವಿಜಯನಗರ ಶ್ರೀ ಕೃಷ್ಣದೇವರಾಯ ವಿವಿಯಲ್ಲಿ ಎರಡು ದಿನಗಳ ವಿಜ್ಞಾನ ವಸ್ತು ಪ್ರದರ್ಶನ ಮೇಳಕ್ಕೆ ಚಾಲನೆ

# ವಿಜ್ಞಾನಕ್ಕೆ ಭಾರತದ ಕೊಡುಗೆ ಅಪಾರ: ಪ್ರೊ.ಡೇವಿಡ್ ಲಾರೋಝ್



ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಮಾ.14–ಭಾರತವು ಸಾಂಪ್ರದಾಯಿಕ ಸಂಶೋಧನೆಗಳ ತವರಾಗಿದ್ದು, ವಿನೂತನ ಸಂಶೋಧನೆಗಳ ಮೂಲಕ ವಿಶ್ವಕ್ಕೆ ಮಾದರಿಯಾಗಿದೆ ಎಂದು ಸೌತ್ ಅಮೇರಿಕದ ಚಿಲಿಯ ತರಪಾಕ ವಿಶ್ವವಿದ್ಯಾಲಯದ ನಿರ್ದೇಶಕರಾದ ಪ್ರೊ. ಡೇವಿಡ್ ಲಾರೋಝ್ ಹೇಳಿದರು.

ವಿಜಯನಗರ ಶ್ರೀಕೃಷ್ಣದೇವರಾಯ ವಿಶ್ವವಿದ್ಯಾಲಯದಲ್ಲಿ ಆಯೋಜಿಸಿರುವ ಎರಡು ದಿನಗಳ ವಿಜ್ಞಾನ ವಸ್ತು ಪ್ರದರ್ಶನ ಮೇಳವನ್ನು ಶುಕ್ರವಾರ ಉದ್ಘಾಟಿಸಿ ಅವರು ಮಾತನಾಡಿದರು.

ವಿಜ್ಞಾನವು ವಿಶ್ವದ ಎಲ್ಲೆಡೆ ವ್ಯಾಪಿಸಿದೆ. ವಿಜ್ಞಾನದ ಎಲ್ಲಾ ಅಂಶಗಳಿಗೆ ಇಂದು ನಾವು ಹತ್ತಿರವಾಗಿದ್ದೇವೆ. ವಿದ್ಯಾರ್ಥಿಗಳು ತಮ್ಮಲ್ಲಿರುವ ನವೀನ ವಿಚಾರಧಾರೆಗಳನ್ನು ತಮ್ಮ ಸಂಶೋಧನೆಗಳಾಗಿ ಮಾರ್ಪಡಿಸಲು ಗಮನ ಹರಿಸಬೇಕು. ಆ ಮೂಲಕ ಹೊಸ ಅನ್ವೇಷಣೆ ಹಾಗೂ ವಿಚಾರಗಳು ಲಭಿಸುತ್ತವೆ. ವಿಜ್ಞಾನ ಕ್ಷೇತ್ರಕ್ಕೆ ಭಾರತೀಯರ ಕೊಡುಗೆ ಅಪಾರವಾಗಿದೆ ಎಂದು ತಿಳಿಸಿದರು.

ವಿಶ್ವವಿದ್ಯಾಲಂ೦ುದ ಕುಲಸಚಿವರಾದ ಎಸ್.ಎನ್ ರುದ್ರೇಶ್ ಮಾತನಾಡಿ, ಹೊಸ ಅನ್ವೇಷಣೆಗಳತ್ತ ವಿದ್ಯಾರ್ಥಿಗಳು ಶ್ರಮಿಸಬೇಕು. ಇದರಿಂದ ಪಾಶ್ಚಿಮಾತ್ಯ ದೇಶಗಳಿಗೆ ತೆರಳಿ ಹೆಚ್ಚಿನ ಸಂಶೋಧನೆ ನಡೆಸಲು ಸಾಧ್ಯವಾಗುತ್ತದೆ. ಪ್ರಾಧ್ಯಾಪಕರು ವಿದ್ಯಾರ್ಥಿಗಳನ್ನು ಅಂತರಾಷ್ಟ್ರೀಯ ಮಟ್ಟದಲ್ಲಿ ಗುರುತಿಸುವಂತೆ ಮಾರ್ಗದರ್ಶನ ಮಾಡಬೇಕು ಎಂದರು.

ವಿಶ್ವವಿದ್ಯಾಲಯದ ಮೌಲ್ಯಮಾಪನ ಕುಲಸಚಿವರಾದ ಡಾ.ಎನ್.ಎಂ ಸಾಲಿ ಮಾತನಾಡಿ, ವಿಜ್ಞಾನ ಬೆಳೆದಷ್ಟು ಸವಾಲುಗಳು ಸಾಕಷ್ಟಿವೆ. ಇನ್ನೂ ಹಲವಾರು ಕ್ಷೇತ್ರಗಳಲ್ಲಿ ವಿಜ್ಞಾನದಿಂದ ಪರಿಹಾರವನ್ನು ಕಂಡುಕೊಳ್ಳಲು ಸಾಧ್ಯವಾಗಿಲ್ಲ. ಈ ನಿಟ್ಟಿನಲ್ಲಿ ಸಂಶೋಧನೆಗಳಲ್ಲಿ ಎಲ್ಲರೂ ಹೆಚ್ಚಾಗಿ ಭಾಗಿಯಾಗಬೇಕು ಎಂದು ಅಭಿಪ್ರಾಯಪಟ್ಟರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ವಿಶ್ವವಿದ್ಯಾಲಯದ ಕುಲಪತಿಗಳಾದ ಪ್ರೊ.ಎಂ. ಮುನಿರಾಜು ಮಾತನಾಡಿ, ಅಮೇರಿಕಾದಲ್ಲಿ ತಂತ್ರಜ್ಞಾನ ಎಷ್ಟೇ ಬೆಳೆದಿದ್ದರು ಅದನ್ನು ನಿರ್ವಹಿಸಲು ಭಾರತೀಯರ ಕೊಡುಗೆ ಅಪಾರವಾಗಿದೆ. ಸಂಶೋಧನೆ ಹಾಗೂ ಅಭಿವೃದ್ಧಿಗೆ ವಿದ್ಯಾರ್ಥಿಗಳು ಹೆಚ್ಚು ಮಹತ್ವ ನೀಡಬೇಕು. ಜಗತ್ತಿನಲ್ಲಿರುವ ನೈಜ ಸಮಸ್ಯೆಗಳಿಗೆ ಪರಿಹಾರ ಕಂಡುಕೊಳ್ಳುವುದು ಕೇವಲ ಸಂಶೋಧನೆಯಿಂದ ಮಾತ್ರ ಸಾಧ್ಯ. ಸಂಶೋಧನೆ ಮತ್ತು ಅಭಿವೃದ್ಧಿಗೆ ಆದ್ಯತೆ ನೀಡಲು ಮುಂಬರುವ ದಿನಗಳಲ್ಲಿ ಹಲವಾರು ಅಂತರಾಷ್ಟ್ರೀಯ ವಿಶ್ವವಿದ್ಯಾಲಯಗಳೊಂದಿಗೆ ಶೈಕ್ಷಣಿಕ ಒಡಂಬಡಿಕೆಯನ್ನು ಮಾಡಿಕೊಳ್ಳಲಾಗುವುದು ಎಂದು ಹೇಳಿದರು.

ಈ ಸಂದರ್ಭದಲ್ಲಿ ವಿಜಯನಗರ ಶ್ರೀಕೃಷ್ಣದೇವರಾಯ ವಿಶ್ವವಿದ್ಯಾಲಯವು ಸೌತ್ ಅಮೇರಿಕದ ಚಿಲಿಯ ತರಪಾಕ ವಿಶ್ವವಿದ್ಯಾಲಯದೊಂದಿಗೆ ಶೈಕ್ಷಣಿಕ ಒಡಂಬಡಿಕೆಗೆ ಪರಸ್ಪರ ಸಹಿ ಹಾಕುವುದರ ಮೂಲಕ ಒಪ್ಪಂದ ಮಾಡಿಕೊಳ್ಳಲಾಯಿತು.

ಬಳಿಕ ವಿಜ್ಞಾನ ಪ್ರದರ್ಶನ ಮೇಳಕ್ಕೆ ಗಣ್ಯರು ಚಾಲನೆ ನೀಡಿದರು. ವಿವಿಯ ಎಲ್ಲ ವಿಜ್ಞಾನ ವಿಭಾಗಗಳ ಸಂಶೋಧನಾ ವಿದ್ಯಾರ್ಥಿಗಳು, ಸ್ನಾತಕೋತ್ತರ ವಿದ್ಯಾರ್ಥಿಗಳು ಸಿದ್ಧಪಡಿಸಿರುವ 50ಕ್ಕೂ ಅಧಿಕ ವೈವಿಧ್ಯಮಯ ವಿಜ್ಞಾನ ಪ್ರಯೋಗಗಳ ಪ್ರದರ್ಶನ ನಡೆಯಿತು. ಇದೇ ಸಂದರ್ಭದಲ್ಲಿ ಅಂತರಾಷ್ಟ್ರೀಯ ಗಣಿತ ದಿನ (ವಿಶ್ವ ಪೈ ದಿನ) ವನ್ನು ಗಣಿತಶಾಸ್ತ್ರ ವಿಭಾಗದಲ್ಲಿ ಆಚರಿಸಲಾಯಿತು.

ಈ ಸಂದರ್ಭದಲ್ಲಿ ಅನ್ವಯಿಕ ವಿಜ್ಞಾನ ನಿಕಾಯದ ಡೀನರಾದ ಡಾ.ಶಶಿಕಾಂತ್ ಎಚ್.ಮಜಗಿ, ಶುದ್ಧ ವಿಜ್ಞಾನ ನಿಕಾಯದ ಡೀನರಾದ ಡಾ.ಹನುಮೇಶ್ ವೈದ್ಯ ಸೇರಿದಂತೆ ವಿವಿಧ ನಿಕಾಯಗಳ ಡೀನರು, ಎಲ್ಲ ವಿಜ್ಞಾನ ವಿಭಾಗಗಳ ಮುಖ್ಯಸ್ಥರು, ಸಿಬ್ಬಂದಿ, ವಿವಿಧ ವಿಭಾಗಗಳ ಮುಖ್ಯಸ್ಥರು, ಸಂಶೋಧನಾ ವಿದ್ಯಾರ್ಥಿಗಳು, ಬೋಧಕೇತರ ಸಿಬ್ಬಂದಿ ಮತ್ತು ವಿದ್ಯಾರ್ಥಿಗಳು ಹಾಜರಿದ್ದರು.

ಕಾರ್ಯಕ್ರಮವನ್ನು ಕುಮಾರಿ ಐಶ್ವರ್ಯ ನಿರೂಪಿಸಿದರು. ಪ್ರೊ. ತಿಪ್ಪೇರುದ್ರಪ್ಪ.ಜೆ ಅತಿಥಿಗಳನ್ನು ಪರಿಚಯಿಸಿದರು.

ಶನಿವಾರವು ಪ್ರದರ್ಶನ ಮೇಳ ಮುಂದುವರೆಯುವುದರಿಂದ ಆಸಕ್ತರು, ವಿದ್ಯಾರ್ಥಿಗಳು, ಸಾರ್ವಜನಿಕರು ಮುಕ್ತವಾಗಿ ಮೇಳ ವೀಕ್ಷಣೆಗೆ ಅವಕಾಶವಿದೆ.

# ಬೀದರ್ :ಇಂದು ರಂದು ಜಾನಪದ ಅಕಾಡೆಮಿಯ ವಾರ್ಷಿಕ ಗೌರವ ಪ್ರಶಸ್ತಿ ಹಾಗೂ ತಜ್ಞ ಪ್ರಶಸ್ತಿ ಪ್ರದಾನ



ಬೀದರ್:ಕರ್ನಾಟಕ ಜಾನಪದ ಅಕಾಡೆಮಿ ವತಿಯಿಂದ ಮಾ. 15 ರಂದು ಶನಿವಾರ ಬೆಳಿಗ್ಗೆ 11.30ಕ್ಕೆ ಬೀದರ ನಗರದ ಡಾ.ಚನ್ನಬಸವ ಪಟ್ಟದ್ದೇವರ ರಂಗಮಂದಿರದಲ್ಲಿ 2023 ಹಾಗೂ 2024ನೇ ಸಾಲಿನ ವಾರ್ಷಿಕ ಗೌರವ ಪ್ರಶಸ್ತಿ ಹಾಗೂ ತಜ್ಞ ಪ್ರಶಸ್ತಿ ಪ್ರದಾನ ಸಮಾರಂಭ ನಡೆಯಲಿದೆ ಎಂದು ಕರ್ನಾಟಕ ಜಾನಪದ ಅಕಾಡೆಮಿ ಸದಸ್ಯರಾದ ವಿಜಯಕುಮಾರ ಸೋನಾರೆ ತಿಳಿಸಿದ್ದಾರೆ.

ಅಂದು ಬೆಳಿಗ್ಗೆ ಮೆರವಣಿಗೆ ಕಾರ್ಯಕ್ರಮ ಹಾಗೂ ಸಾಯಂಕಾಲ ಸಾಂಸ್ಕೃತಿಕ ಕಾರ್ಯಕ್ರಮ ಜರುಗಲಿದೆ. ಮಧ್ಯಾಹ್ನ 2 ಗಂಟೆಗೆ ಪ್ರಶಸ್ತಿ ಪ್ರದಾನ ಸಮಾರಂಭ ಜರುಗಲಿದೆ. ರಾಜ್ಯದ ಅರಣ್ಯ, ಪರಿಸರ ಹಾಗೂ ಜೀವಶಾಸ್ತ್ರ ಸಚಿವರು ಹಾಗೂ ಜಿಲ್ಲಾ ಉಸ್ತುವಾರಿ ಮಂತ್ರಿ ಈಶ್ವರ ಬಿ. ಖಂಡ್ರೆ ಸಮಾರಂಭ ಉದ್ಘಾಟಿಸುವರು. ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಚಿವರಾದ ಶಿವರಾಜ ತಂಗಡಗಿ ಪ್ರಶಸ್ತಿ ಪ್ರದಾನ ಮಾಡುವರು. ರಾಜ್ಯದ ಪೌರಾಡಳಿತ ಸಚಿವ ರಹಿಮ್ ಖಾನ್ ಅಧ್ಯಕ್ಷತೆ ವಹಿಸುವರು.

ಸಂಸದ ಸಾಗರ ಖಂಡ್ರೆ ಪುಸ್ತಕ ಬಿಡುಗಡೆ ಮಾಡುವರು. ತಾನು ಪ್ರಾಸ್ತಾವಿಕ ಮಾತನಾಡಲಿದ್ದು, ಔರಾದ್ ಶಾಸಕ ಪ್ರಭು ಚವ್ಹಾಣ, ಬಸವಕಲ್ಯಾಣ ಶಾಸಕ ಶರಣು ಸಲಗರ, ಬೀದರ್ ದಕ್ಷಿಣ ಶಾಸಕ ಡಾ.ಶೈಲೇಂದ್ರ ಬೆಲ್ದಾಳೆ, ಹುಮನಾಬಾದ್ ಶಾಸಕ ಡಾ.ಸಿದ್ಧಲಿಂಗಪ್ಪ ಪಾಟೀಲ, ವಿಧಾನ ಪರಿಷತ್ ಸದಸ್ಯರಾದ ಡಾ.ಚಂದ್ರಶೇಖರ ಪಾಟೀಲ, ಶಶೀಲ.ಜಿ.ನಮೋಷಿ, ಭೀಮರಾವ ಪಾಟೀಲ, ಡಾ.ಎಂ.ಜಿ ಮುಳೆ, ಕರ್ನಾಟಕ ಮೀನುಗಾರಿಕೆ ಅಭಿವೃದ್ಧಿ ನಿಗಮದ ಅಧ್ಯಕ್ಷೆ ಮಾಲಾ.ಬಿ.ನಾರಾಯಣರಾವ, ನಗರ ಸಭೆ ಅಧ್ಯಕ್ಷ ಮಹಮ್ಮದ್ ಗೌಸ್, ಬೀದರ್ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಬಸವರಾಜ ಜಾಬಶೆಟ್ಟಿ, ಜಿಲ್ಲಾಧಿಕಾರಿ ಶಿಲ್ಪಾ ಶರ್ಮಾ, ಜಿಲ್ಲಾ ಪಂಚಾಯತ್ ಮುಖ್ಯಕಾರ್ಯನಿರ್ವಹಣಾಧಿಕಾರಿ ಗಿರೀಶ ದಿಲಿಪ ಬದೋಲೆ, ಜಿಲ್ಲಾ ಪೋಲಿಸ್ ವರಿಷ್ಠಾಧಿಕಾರಿ ಪ್ರದಿಪ ಗುಂಟಿ, ಅಕಾಡೆಮಿಯ ಸದಸ್ಯರುಗಳು ಸೇರಿದಂತೆ ಜಿಲ್ಲೆಯ ಇತರೆ ಜನಪ್ರತಿನಿಧಿಗಳು ಕಾರ್ಯಕ್ರಮದಲ್ಲಿ ಭಾಗವಹಿಸುವರು.

ಆದ ಕಾರಣ ಜಿಲ್ಲೆಯ ಎಲ್ಲ ಕನ್ನಡಪರ ಸಂಘಟನೆಗಳು, ದಲಿತಪರ ಸಂಘಟನೆಗಳ ಪ್ರತಿನಿಧಿಗಳು ಮುಖಂಡರುಗಳು, ಕಾರ್ಯಕ್ರಮದಲ್ಲಿ ಭಾಗವಹಿಸಿ ಕಾರ್ಯಕ್ರಮ ಯಶಸ್ವಿಗೊಳಿಸಬೇಕೆಂದು ವಿಜಯಕುಮಾರ ಸೋನಾರೆ ಮನವಿ ಮಾಡಿದ್ದಾರೆ.

# ಪ್ರವಾಸೋದ್ಯಮ ಇಲಾಖೆ: ಅಂತಿಮ ಆಯ್ಕೆ ಪಟ್ಟಿ ಪ್ರಕಟ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಮಾ.14–ಪ್ರವಾಸೋದ್ಯಮ ಇಲಾಖೆಯಿಂದ 2024–25ನೇ ಸಾಲಿನಲ್ಲಿ ಎಸ್.ಸಿ.ಎಸ್.ಪಿ ಮತ್ತು ಟಿ.ಎಸ್.ಪಿ ಯೋಜನೆಯಡಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಸಣ್ಣ ಉದ್ಯಮಿದಾರರನ್ನು ಉತ್ತೇಜಿಸಲು ಒಂದು ತಿಂಗಳ ಉದ್ಯಮಶೀಲತೆ ತರಬೇತಿ ನೀಡುವುದು ಹಾಗೂ ತರಬೇತಿ ಪಡೆದ ಅಭ್ಯರ್ಥಿಗಳಿಗೆ ಮೊಬೈಲ್ ಕ್ಯಾಂಟಿನ್ ನಡೆಸಲು ಸಹಾಯಧನ ನೀಡಲು ಬಳ್ಳಾರಿ ಜಿಲ್ಲೆಗೆ ನಿಗಧಿಪಡಿಸಿರುವ ಗುರಿಗಳಂತೆ ಅಂತಿಮ ಆಯ್ಕೆಪಟ್ಟಿ ಪ್ರಕಟಿಸಲಾಗಿದೆ.

ಆಯ್ಕೆ ಪಟ್ಟಿಯನ್ನು ಉಪ ನಿರ್ದೇಶಕರು, ಪ್ರವಾಸೋದ್ಯಮ ಇಲಾಖೆ, ಲೋಟಸ್ ಮಹಲ್ ಹತ್ತಿರ, ಕಮಲಾಪುರದ ಕಚೇರಿಯ ಸೂಚನಾ ಫಲಕದಲ್ಲಿ ಪ್ರಕಟಿಸಲಾಗಿದೆ.

ಹೆಚ್ಚಿನ ಮಾಹಿತಿಗಾಗಿ ದೂ.08394–295640 ಗೆ ಸಂಪರ್ಕಿಸಬಹುದು ಎಂದು ಪ್ರವಾಸೋದ್ಯಮ ಇಲಾಖೆಯ ಉಪ ನಿರ್ದೇಶಕ ಪ್ರಭುಲಿಂಗ ತಳಕೇರಿ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಪ್ರೊ. ಗುರುವಿನಮಠಗೆ ಪಿಎಚ್‌ಡಿ ಪದವಿ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಮಾ.14–ಜಿಲ್ಲೆಯ ಹುನಗುಂದ ತಾಲೂಕಿನ ಕಮತಗಿಯ ಹುಚ್ಚೇಶ್ವರ ವಿದ್ಯಾವರ್ಧಕ ಸಂಘದ ಗ್ರಾಮೀಣ ಕಲಾ ಹಾಗೂ ವಾಣಿಜ್ಯ ಮಹಾವಿದ್ಯಾಲಯದ ಪ್ರಾಚಾರ್ಯ ಪ್ರೊ.ಪಿ.ಎಂ.ಗುರುವಿನಮಠ ಅವರಿಗೆ ಹಂಪಿ ಕನ್ನಡ ವಿಶ್ವವಿದ್ಯಾಲಯ ಗೌರವಡಾಕ್ಟರೇಟ(ಪಿ.ಎಚ್.ಡಿ)ಪದವಿ ನೀಡಿದೆ.

ಪ್ರೊ.ಪಿ.ಎಂ.ಗುರುವಿನಮಠ ವಿಜಯಪುರ ಸಿಕ್ಯಾಬ್ ಎಂ.ಆರ್.ಎಸ್.ಇನಾಮದಾರ ಕಲಾ,ವಿಜ್ಞಾನ, ವಾಣಿಜ್ಯ ಮಹಾವಿದ್ಯಾಲಯದ ಪ್ರಾಧ್ಯಾಪಕ ಡಾ.ಚಿದಾನಂದ ಎನ್.ಕುಳಗೇರಿ ಅವರ ಮಾರ್ಗದರ್ಶನದಲ್ಲಿ ಅಭಿವೃದ್ಧಿ ಅಧ್ಯಯನ ವಿಭಾಗದ ಸಮಾಜಶಾಸ್ತ್ರದ ವಿಷಯದ ಮೇಲೆ 'ಮಕ್ಕಳ ಪಾಲನೆ ಪೋಷಣೆ ಹಾಗೂ ಪೌಷ್ಠಿಕತೆ' ಎಂಬ ವಿಷಯದ ಮೇಲೆ ಪ್ರಬಂಧವನ್ನು ಮಂಡಿಸಿದ್ದರು.

ಗುರುವಿನಮಠ ಅವರ ಈ ಸಾಧನೆಗೆ ಹುಚ್ಚೇಶ್ವರ ವಿದ್ಯಾವರ್ಧಕ ಸಂಘದ ಅಧ್ಯಕ್ಷರಾದ ಮ.ನಿ.ಪ್ರ. ಹುಚ್ಚೇಶ್ವರ ಮಹಾಸ್ವಾಮಿಗಳು ಹಾಗೂ ಆಡಳಿತ ಮಂಡಳಿಯ ಸರ್ವ ಸದಸ್ಯರು,ಸಲಹಾ ಸಮಿತಿ ಸದಸ್ಯರು ಮತ್ತು ಮಹಾವಿದ್ಯಾಲಯದ ಬೋಧಕ,ಬೋಧಕೇತರ ಸಿಬ್ಬಂದಿ ಅಭಿನಂದಿಸಿದ್ದಾರೆ.

# ಇಂದು ವಿದ್ಯುತ್ ಗ್ರಾಹಕರ ಸಭೆ

ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಮಾ.14–ವಿದ್ಯುತ್ ಗ್ರಾಹಕರ ಕುಂದು ಕೊರತೆ ಸಭೆಯನ್ನು ಮಾ.15 ರಂದು ಬಾಗಲಕೋಟೆ ವಿಭಾಗ ವ್ಯಾಪ್ತಿಯ ನಗರ ಮತ್ತು ಗ್ರಾಮೀಣ ಉಪವಿಭಾಗಗಳಲ್ಲಿ ಆಯೋಜಿಸಲಾಗಿದೆ.

ಬೆಳಿಗ್ಗೆ 10 ರಿಂದ ಮಧ್ಯಾಹ್ನ 1 ಗಂಟೆಯವರೆಗೆ ನಗರ ಮತ್ತು ಗ್ರಾಮೀಣ ಉಪವಿಭಾಗದ ಬದಾಮಿ, ಗುಳೇದಗುಡ್ಡ ಹಾಗೂ ಸಾಯಂಕಾಲ 3 ರಿಂದ 5 ವರೆಗೆ ಹುನಗುಂದ, ಇಳಕಲ್ ಉಪ ವಿಭಾಗಗಳಲ್ಲಿ ಸಭೆ ನಡೆಯಲಿದೆ.

ಎಲ್ಲ ವಿದ್ಯುತ್ ಗ್ರಾಹಕರು ವಿದ್ಯುತ್ ಸರಬರಾಜಿಗೆ ಸಂಬಂಧಿಸಿದ ಕುಂದು ಕೊರತೆಗಳನ್ನು ಈ ಸಭೆಯಲ್ಲಿ ಭಾಗವಹಿಸಿ ಇತ್ಯರ್ಥಪಡಿಸಿಕೊಳ್ಳಬೇಕು ಎಂದು ಬಾಗಲಕೋಟ ಹೆಸ್ಕಾಂ ಅಧಿಕಾರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಶಿರೂರ ಪಪಂಗೆ 1.98 ಲಕ್ಷ ರೂ.ಗಳ ಉಳಿತಾಯ ಬಜೆಟ್



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಮಾ.14–ತಾಲೂಕಿನ ಶಿರೂರ ಪಟ್ಟಣ ಪಂಚಾಯಿತಿಯ 2025–26 ನೇ ಸಾಲಿನ 1.98 ಲಕ್ಷ ರೂಪಾಯಿಗಳ ಉಳಿತಾಯ ಬಜೆಟ್‌ಗೆ ಅನುಮೋದನೆ ದೊರೆತಿದೆ.

ಇತ್ತೀಚೆಗೆ ಪಟ್ಟಣ ಪಂಚಾಯಿತಿಯಲ್ಲಿ ಜರುಗಿದ ಸ್ಥಳೀಯ ಸಾರ್ವಜನಿಕರು,ಸಂಘ ಸಂಸ್ಥೆಗಳ ಪದಾಧಿಕಾರಿಗಳು ಹಾಗೂ ಗಣ್ಯರ ಸಭೆಯಲ್ಲಿ ಚರ್ಚಿಸಿ ತಯಾರಿಸಲಾಗಿದ್ದ ಬಜೆಟ್‌ಗೆ ಪಪಂ ಆಡಳಿತಾಧಿಕಾರಿ, ತಹಸೀಲ್ದಾರ ಅಮರೇಶ ಪಮ್ಮಾರ ಅನುಮೋದನೆ ನೀಡಿದ್ದಾರೆ ಎಂದು ಪಪಂ ಮುಖ್ಯಾಧಿಕಾರಿ ಶಿವಾನಂದ ಆಲೂರ ತಿಳಿಸಿದ್ದಾರೆ.

ಪ್ರಸಕ್ತ ಸಾಲಿನ ಬಜೆಟ್‌ನಲ್ಲಿ 1.18 ಕೋಟಿ ರೂ. ವೇತನ ಅನುದಾನ, ಎಸ್. ಎಫ್.ಸಿ ಯೋಜನೆಯ 23 ಲಕ್ಷ, ನೀರು ಸರಬರಾಜು ವಿಭಾಗದ 80 ಲಕ್ಷ, ನೀರಿನ ಶುಲ್ಕದ 23.50 ಲಕ್ಷ, ಆಸ್ತಿ ತೆರಿಗೆಯಿಂದ 37.50 ಲಕ್ಷ ರೂ.ಗಳ ಅನುದಾನ ಸೇರಿ ವಿವಿಧ ಮೂಲಗಳಿಂದ ಒಟ್ಟು 5.14 ಕೋಟಿ ಆದಾಯ ನಿರೀಕ್ಷಿಸಲಾಗಿದೆ.

ಬೀದಿ ದೀಪ ಹಾಗೂ ನೀರು ಸರಬರಾಜು ವಿದ್ಯುತ್ ಬಿಲ್‌ಗೆ 1.04 ಕೋಟಿ, ಚರಂಡಿ, ಸಿಸಿ ರಸ್ತೆಗಳ ಅಭಿವೃದ್ಧಿಗೆ 8 ಲಕ್ಷ, ಕಚೇರಿ ವಾಹನಗಳ ಇಂಧನಕ್ಕೆ 12 ಲಕ್ಷ, ಹೊರಗುತ್ತಿಗೆ ಸಿಬ್ಬಂದಿ ವೇತನಕ್ಕೆ 45ಲಕ್ಷ, ವಾಹನಗಳ ದುರಸ್ತಿ ಮತ್ತು ನಿರ್ವಹಣೆಗೆ 6 ಲಕ್ಷ, ಉದ್ಯಾನವನ ಮತ್ತು ಸ್ಮಶಾನ ಅಭಿವೃದ್ಧಿಗೆ 1.50 ಲಕ್ಷ ರೂ.ಗಳು ಸೇರಿ ಒಟ್ಟು 5.10 ಕೋಟಿ ರೂ.ಗಳ ವೆಚ್ಚ ನಿರೀಕ್ಷಿಸಲಾಗಿದೆ.

ಒಟ್ಟು ಆದಾಯದಲ್ಲಿ ವೆಚ್ಚವನ್ನು ಸರಿದೂಗಿಸಿ 1.98 ಲಕ್ಷ ರೂ.ಗಳ ಉಳಿತಾಯದ ಬಜೆಟ್‌ಗೆ ಒಪ್ಪಿಗೆ ದೊರೆತಿದೆ ಎಂದು ಆಲೂರ ತಿಳಿಸಿದ್ದಾರೆ. ಪಪಂ ಮ್ಯಾನೇಜರ ಯು.ಜಿ.ವರದಪ್ಪನವರ ಇದ್ದರು.

# ಕುರಿಗಾಹಿಗಳಿಗೆ ಬಂದೂಕು ತರಬೇತಿ ಶಿಬಿರ

ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಮಾ.14–ಜಿಲ್ಲೆಯ ಕುರಿಗಾಹಿಗಳ ಆತ್ಮರಕ್ಷಣೆಗೆ ವಿಶೇಷ ಬಂದೂಕು ತರಬೇತಿ ಶಿಬಿರವನ್ನು ಬಾಗಲಕೋಟ ಜಿಲ್ಲಾ ಪೊಲೀಸ್ ಘಟಕ ಆಯೋಜಿಸಿದ್ದು, ಶಿಬಿರವು ಏಪ್ರಿಲ್ 7 ರಿಂದ 13ರವರೆಗೆ ಬೆಳಿಗ್ಗೆ 7 ರಿಂದ 9.30ರವರೆಗೆ ತಾತ್ಕಾಲಿಕ ಪೊಲೀಸ್ ತರಬೇತಿ ಶಾಲೆಯಲ್ಲಿ ನಡೆಯಲಿದೆ.

ಜಿಲ್ಲೆಯಲ್ಲಿ ವಾಸಿಸುತ್ತಿರುವ ಹಾಲುಮತದ ಕುರಿಗಾಹಿಗಳು ತರಬೇತಿ ಸದುಪಯೋಗಪಡೆಯಬಹುದಾಗಿದೆ. ಅರ್ಜಿಯನ್ನು ಪೊಲೀಸ್ ಶಸ್ತ್ರಾಗಾರದಿಂದ ಪಡೆದು, ಪೊಲೀಸ್ ಪರಿಶೀಲನೆ, ವಿಳಾಸದ ಗುರುತಿನ ಚೀಟಿ ಮತ್ತು 3 ಭಾವಚಿತ್ರಗಳೊಂದಿಗೆ ಏಪ್ರಿಲ್ 5ರೊಳಗೆ ಶಸ್ತ್ರಾಗಾರಕ್ಕೆ ಸಲ್ಲಿಸಬೇಕು.

ಅಭ್ಯರ್ಥಿಗಳು 18 ವರ್ಷ ಮೇಲ್ಪಟ್ಟ, ಆರೋಗ್ಯವಂತರಾಗಿದ್ದು, ಯಾವುದೇ ಅಪರಾಧ ದಾಖಲೆ ಇಲ್ಲದವರಾಗಿರಬೇಕು. ಹೆಚ್ಚಿನ ಮಾಹಿತಿಗೆ ಡಿಎಸ್‌ಪಿ, ಡಿ.ಎ.ಆರ್ (9480803906) ಅಥವಾ ಆರ್‌ಪಿಐ, ಡಿ.ಎ.ಆರ್ (9480803937) ಸಂಪರ್ಕಿಸಬಹುದು ಎಂದು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಅಮರನಾಥ ರೆಡ್ಡಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಶ್ರೀಶೈಲ ಯಾತ್ರಿಗಳಿಗೆ ಶ್ರೀಗಳಿಂದ ಪ್ರಸಾದ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಮಾ.14–ಬೆಳಗಾವಿ–ರಾಯಚೂರ ಮಾರ್ಗವಾಗಿ ಶ್ರೀಶೈಲಕ್ಕೆ ತೆರಳುತ್ತಿರುವ ಪಾದಯಾತ್ರಿಗಳಿಗೆ ಜಿಲ್ಲೆಯ ಕಮತಗಿಯಲ್ಲಿ ಶುಕ್ರವಾರ ಶ್ರೀಗಳು ಪ್ರಸಾದ ಬಡಿಸಿದರು.

ಕಮತಗಿ ಹಾಗೂ ಸುತ್ತಮುತ್ತಲಿನ ಗ್ರಾಮಗಳ ಸದ್ಭಕ್ತ ಮಂಡಳಿಯವರು ಕಳೆದ 24 ವರ್ಷಗಳಿಂದ ನಿರಂತರವಾಗಿ ಸ್ಥಳೀಯ ವೀರೇಶ್ವರ ಮಠದಲ್ಲಿ ಅನ್ನ ಪ್ರಸಾದ ಸೇವೆಯನ್ನು ಹಮ್ಮಿಕೊಂಡು ಬರುತ್ತಿದ್ದಾರೆ.

ಕಮತಗಿಯ ಹೊಳೆ ಹುಚ್ಚೇಶ್ವರ ಮಠದ ಪೂಜ್ಯ ಶ್ರೀ ಹುಚ್ಚೇಶ್ವರ ಮಹಾಸ್ವಾಮೀಜಿ ಹಾಗೂ ಗುಳೇದಗುಡ್ಡ ಮರಡಿ ಮಠದ ಶ್ರೀಗಳು ಅನ್ನ ಪ್ರಸಾದ ವ್ಯವಸ್ಥೆಗೆ ಚಾಲನೆ ನೀಡಿದರಲ್ಲದೇ, ಶ್ರೀಶೈಲ ಪಾದಯಾತ್ರಿಗಳಿಗೆ ತಾವೇ ಅನ್ನ ಪ್ರಸಾದ ಬಡಿಸಿದರು. ಈ ಸಂದರ್ಭದಲ್ಲಿ ಸದ್ಭಕ್ತ ಮಂಡಳಿಯ ಸರ್ವ ಸದಸ್ಯರು, ಹಿರಿಯರು ಇದ್ದರು.

# ಶೌಚಾಲಯ ನಿರ್ಮಾಣಕ್ಕೆ ಅರ್ಜಿ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಮಾ.14–ಸ್ವಚ್ಛ ಭಾರತ್ ಮಿಷನ್(2.0)ಅಡಿಯಲ್ಲಿ ಬಾಗಲಕೋಟ ನಗರಸಭೆ ವ್ಯಾಪ್ತಿಯಲ್ಲಿ 75 ವೈಯಕ್ತಿಕ ಶೌಚಾಲಯಗಳ ನಿರ್ಮಾಣಕ್ಕೆ 22.50 ಲಕ್ಷ ಅನುದಾನ ಬಿಡುಗಡೆಯಾಗಿದ್ದು, ಅರ್ಹ ನಾಗರಿಕರು ತಕ್ಷಣವೇ ಅರ್ಜಿ ಸಲ್ಲಿಸಬಹುದು. ಮೊದಲು ಬಂದವರಿಗೆ ಆದ್ಯತೆ ನೀಡಲಾಗುತ್ತದೆ.

ಶೌಚಾಲಯಗಳ ನಿರ್ಮಾಣಕ್ಕೆ ಮನೆ ಉತಾರೆ, ಭಾವಚಿತ್ರ, ಆಧಾರ ಕಾರ್ಡ್, ರೇಷನ್ ಕಾರ್ಡ್, ಬ್ಯಾಂಕ್ ಪಾಸ್‌ಬುಕ್, ಜಾತಿ ಮತ್ತು ಆದಾಯ ಪ್ರಮಾಣಪತ್ರ ಸೇರಿದಂತೆ ಅಗತ್ಯ ದಾಖಲೆಗಳೊಂದಿಗೆ ಅರ್ಜಿ ಸಲ್ಲಿಸಬಹುದು. ಹೆಚ್ಚಿನ ಮಾಹಿತಿಗೆ ನಗರಸಭೆ ಕಚೇರಿಯನ್ನು ಸಂಪರ್ಕಿಸಬೇಕು ಎಂದು ನಗರಸಭೆಯ ಪೌರಾಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಅಗ್ನಿಪಥ ನೇಮಕಾತಿ: ಆನ್‌ಲೈನ್ ನೋಂದಣಿ ಆರಂಭ

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಮಾ.14–ಆರ್ಮಿ ರಿಕ್ರೂಟಿಂಗ್ ಆಫೀಸ್ ಬೆಳಗಾವಿ ಹಾಗೂ ಬೆಂಗಳೂರು ಹೆಡ್‌ಕ್ವಾಟರ್ಸ್ ರಿಕ್ರೂಟಿಂಗ್ ಜೋನ್ ಬೆಂಗಳೂರು ಇವರ ಸಹಯೋಗದಲ್ಲಿ ಅಗ್ನಿಪಥ ನೇಮಕಾತಿಗಾಗಿ ಇದೇ ಮಾರ್ಚ್ 12 ರಿಂದ ಏಪ್ರಿಲ್ 10ರ ವರೆಗೆ ಆನ್‌ಲೈನ್ ಮೂಲಕ ನೋಂದಣಿ ಪ್ರಕ್ರಿಯೆ ನಡೆಯಲಿದೆ ಎಂದು ಬೆಳಗಾವಿ ಆರ್ಮಿ ರಿಕ್ರೂಟಿಂಗ್ ಕಚೇರಿಯ ಡೈರೆಕ್ಟರ್ ರಿಕ್ರೂಟಿಂಗ್ ಕರ್ನಲ್ ಎ.ಕೆ ಉಪಾಧ್ಯಾಯ ಅವರು ತಿಳಿಸಿದ್ದಾರೆ.

ಬೆಳಗಾವಿ, ಬೀದರ, ಕಲಬುರಗಿ, ಕೊಪ್ಪಳ, ರಾಯಚೂರು ಹಾಗೂ ಯಾದಗಿರಿ ಜಿಲ್ಲೆಗಳ ಜಿಲ್ಲೆಗಳ ಪುರುಷ ಅಭ್ಯರ್ಥಿಗಳು ಜಾಯಿನ್ ಇಂಡಿಯನ್ ಆರ್ಮಿ ತಿತಿತಿ. joinindianarmy.nic.in ವೆಬ್‌ಸೈಟ್‌ನಲ್ಲಿ ನೋಂದಣಿ ಮಾಡಿಕೊಳ್ಳಬೇಕು.

ಅಗ್ನಿವೀರ್ ಜನರಲ್ ಡ್ಯೂಟಿ, ಅಗ್ನಿವೀರ್ ಟೆಕ್ನಿಕಲ್, ಅಗ್ನಿವೀರ್ ಟ್ರೇಡ್ಸ್‌ಮೆನ್ ಹುದ್ದೆಗಳಿಗೆ 10ನೇ ತರಗತಿ ಉತ್ತೀರ್ಣರಾಗಿರಬೇಕು. ಅಗ್ನಿವೀರ್ ಟ್ರೇಡ್ಸ್‌ಮೆನ್ ಹುದ್ದೆಗೆ 8ನೇ ತರಗತಿ ಪಾಸ್ ಆಗಿರಬೇಕು. ಅಗ್ನಿವೀರ್ ಕ್ಲರ್ಕ್/ಸ್ಟೋರ್‌ಕೀಪರ್ ಟೆಕ್ನಿಕಲ್ ವಿಭಾಗಗಳಿಗೆ ನೇಮಕಾತಿ ನಡೆಯಲಿದೆ.

ವಯೋಮಿತಿ, ಶೈಕ್ಷಣಿಕ ಅರ್ಹತೆ ಮತ್ತು ಇನ್ನಿತರ ಹೆಚ್ಚಿನ ಮಾಹಿತಿಗಾಗಿ 2025ರ ಮಾರ್ಚ್ 12 ರಂದು ಬೆಳಗಾವಿ ಆರ್ಮಿ ರಿಕ್ರೂಟಿಂಗ್ ಆಫೀಸ್‌ದಿಂದ ಹೊರಡಿಸಿದ ಅಧಿಸೂಚನೆ ವೀಕ್ಷಿಸಬಹುದಾಗಿದೆ ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.



ಹುಮನಾಬಾದ:ಪಟ್ಟಣದ ಶಿವಪೂರ ಬಡಾವಣೆಯಲ್ಲಿ ಮಂಡಾ ಪರಿವಾರದ ಚಿಕ್ಕಮಕ್ಕಳು ತಮ್ಮ ಗೆಳೆಯರೊಂದಿಗೆ ಪರಸ್ಪರವಾಗಿ ಬಣ್ಣ ಎರಚಿ ಹೋಳಿ ಹಬ್ಬವನ್ನು ಆಚರಿಸಿದರು. (ಮಲ್ಲಮ್ಮ ನುಡಿ ಚಿತ್ರ)

# ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ನಿಗಮ ಕಚೇರಿಯಲ್ಲಿ ವಿಶ್ವ ಮಹಿಳಾ ದಿನಾಚರಣೆ



ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಮಾ.14.–ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ನಿಗಮದ ಕೇಂದ್ರ ಕಚೇರಿಯಲ್ಲಿ ಬುಧವಾರ ಹಮ್ಮಿಕೊಳ್ಳಲಾದ ವಿಶ್ವ ಮಹಿಳಾ ದಿನಾಚರಣೆ ಆಚರಣೆ ಕಾರ್ಯಕ್ರಮವನ್ನು ನಿಗಮದ ವ್ಯವಸ್ಥಾಪಕ ನಿರ್ದೇಶಕ ಎಂ.ರಾಚಪ್ಪ ಅವರು ಉದ್ಘಾಟಿಸಿದರು.

ನಂತರ ಅವರು ಮಾತನಾಡಿ, ಮಹಿಳೆ ಅಬಲೆಯಲ್ಲ ಸಬಲೆ ಎಂಬುದನ್ನು ಸಾಬೀತುಪಡಿಸುವ ಮೂಲಕ ಇಂದು ಎಲ್ಲಾ ಕ್ಷೇತ್ರಗಳಲ್ಲೂ ಛಾಪು ಮೂಡಿಸುತ್ತಿದ್ದಾರೆ. ಈಗಾಗಲೇ ಮಹಿಳೆಯರು ಹಲವಾರು ಕ್ಷೇತ್ರಗಳಲ್ಲಿ ತಮ್ಮ ಕಾರ್ಯಕ್ಷಮತೆಯ ಮೂಲಕ ವಿನೂತನ ಸಾಧನೆಗಳನ್ನು ತೆ–ೋರಿದ್ದು, ಪ್ರತಿಯೊಬ್ಬ ಯಶಸ್ವಿ ವ್ಯಕ್ತಿಯ ಹಿಂದೆ ಮಹಿಳೆಯ ಪರಿಶ್ರಮ ಇರುತ್ತದೆ. ಪ್ರಸ್ತುತ ಶಿಕ್ಷಣವು ಪ್ರಮುಖ ಪಾತ್ರ ವಹಿಸಿದ್ದು, ಶಿಕ್ಷಣದಿಂದಲೇ ಮಹಿಳೆಯರು ರಾಷ್ಟ್ರ ಮತ್ತು ಅಂತರ ರಾಷ್ಟ್ರೀಯ ಎಲ್ಲಾ ಕ್ಷೇತ್ರಗಳಲ್ಲಿ ಆರ್ಥಿಕ, ರಾಜಕೀಯ, ಶಿಕ್ಷಣ ಹೀಗೆ ಹಲವಾರು ಕ್ಷೇತ್ರಗಳಲ್ಲಿ ತಮ್ಮದೇ ಆದ ಛಾಪನ್ನು ಮೂಡಿಸಿದ್ದಾರೆ ಎಂದರು. ಡಾ.ಬಿ.ಆರ್.ಅಂಬೇಡ್ಕರ ಅವರು ತಿಳಿಸಿದಂತೆ ಶಿಕ್ಷಣದಿಂದಲೇ ಸರ್ವತೋಮುಖದ ಅಭಿವೃದ್ಧಿ ಸಾಧ್ಯ. ಈ ನಿಟ್ಟಿನಲ್ಲಿ ಪ್ರತಿ ಮಹಿಳೆಯು ಶಿಕ್ಷಣ ಪಡೆಯುವುದು ಅತೀ ಮುಖ್ಯವಾಗಿದೆ. ಮಹಿಳೆಯರು ನಿಗಮದಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ನಿರ್ವಾಹಕ ಮತ್ತು ಚಾಲಕ ಹುದ್ದೆಗೆ ಹೆಚ್ಚಿನ ಆಸಕ್ತಿ ವಹಿಸಿ ನೇಮಕಗೊಳ್ಳಬೇಕು ಎಂದು ಸಲಹೆ ನೀಡಿದರು. ಕಾರ್ಯಕ್ರಮದಲ್ಲಿ ಡಾ. ಅಶ್ವಿನಿಕುಮಾರಿ ಧನವಡಕರ್ ಅವರು ಮಾತನಾಡಿ, ಮಹಿಳೆಯರು ತಮ್ಮ ದೈನಂದಿನ ಕೆಲಸಕಾರ್ಯಗಳೊಂದಿಗೆ ತಮ್ಮ ಆರೋಗ್ಯದ ಕಡೆಗೆ ಹೆಚ್ಚಿನ ಗಮನ ಹರಿಸಿ ಆರೋಗ್ಯವನ್ನು ಕಾಪಾಡಿಕೊಳ್ಳಬೇಕು ಎಂದರು.

ಸೇಡಂ ತಾಲೂಕಿನ ಬಟಗೇರಾ ಸರ್ಕಾರಿ ಪ್ರೌಢಶಾಲೆಯ ಮುಖ್ಯ ಗುರುಗಳಾದ ರಾಜಶ್ರೀ ಮಾತನಾಡಿ ಇಂದಿನ ಜಗತ್ತಿನಲ್ಲಿ ಮಹಿಳೆಯರು ಎಲ್ಲಾ ಕ್ಷೇತ್ರಗಳಲ್ಲಿ ತಮ್ಮ ಕೊಡುಗೆ ನೀಡುತ್ತಿದ್ದು, ಮಹಿಳೆಯರು ಶಿಕ್ಷಣ ಕಡೆ ಹೆಚ್ಚಿನ ಗಮನ ಕೊಡಬೇಕು. ಅಲ್ಲದೇ "ತೊಟ್ಟಿಲು ತೂಗಿದ ಕೈ ದೇಶವನ್ನೇ ಆಳಬಹುದೆಂದು" ಎಂಬುದನ್ನು ಈಗಾಗಲೇ ಮಹಿಳೆಯರು ಸಾಧಿಸಿ ತೋರಿಸಿದ್ದಾರೆ ಎಂದು ಹೇಳಿದರು. ಕಾರ್ಯಕ್ರಮದಲ್ಲಿ ನಿಗಮದ ಎಲ್ಲಾ ಇಲಾಖಾ ಮುಖ್ಯಸ್ಥರು, ಇತರೆ ಅಧಿಕಾರಿಗಳು ಹಾಗೂ ಸಿಬ್ಬಂದಿಗಳು ಉಪಸ್ಥಿತರಿದ್ದರು.

## ಭೀಮ್ ಪ್ರಜಾ ಸಂಘ [ರಿ,]ಬೀದರನಿಂದ ಫ್ರೀಡಂ ಪಾರ್ಕಗೆ ಚಲೋ ಜಾಥಾಕ್ಕೆ ಸ್ವಾಗತ!!



ಮಲ್ಲಮ್ಮ ನುಡಿ ವಾರ್ತೆ

ಶಹಾಪುರ,200 ಮೀಟರ್ ಎತ್ತರದ ಡಾ,ಬಿ,ಆರ್,ಅಂಬೇಡ್ಕರ ಪುತ್ಥಳಿ ನಿರ್ಮಾಣ, ಕರ್ನಾಟಕ ಸರ್ಕಾರದ ಲಂಛನದಲ್ಲಿ ಸತ್ಯಮೇವ ಜಯತೇ ಹಿಂದಿ ಪದವನ್ನು ಹೋಲಿಕೆಯಂತೆ ಸಂಸ್ಕೃತ ಪದದಲ್ಲಿರುತ್ತದೆ. ಅದನ್ನು ಕನ್ನಡಕ್ಕೆ ಅನುವಾದ ಮಾಡಬೇಕು ಎಂದು ಒತ್ತಾಯಿಸಿ ಡಾ,ಬಾಬಾಸಾಹೇಬರ ಗ್ರಂಥಾಲಯಗಳು ಐ,ಎ,ಎಸ್, ಐ,ಪಿಎಸ್, ತರಬೇತಿ ಕೇಂದ್ರಗಳನ್ನಾಗಿಸಬೇಕು ಎಂದು ಆಗ್ರಹಿಸಿ, ಭೀಮಾ ಪ್ರಜಾ ಸಂಘ,ರಿ, ಬೀದರನಿಂದ ಬೆಂಗಲೂರಿನ ಫ್ರೀಡಂ ಪಾರ್ಕನವರೆಗೂ ಸ್ವಾಭಿಮಾನಿ 40 ದಿನಗಳ ಕಾಲ್ನಡಿಗೆ ಜಾಥಾಕ್ಕೆ ಶಹಾಪುರ ತಾಲುಕಿನ ಭೀಮರಾಯ ಗುಡಿಯಲ್ಲಿ ಅದ್ದೂರಿಯಾಗಿ ಸ್ವಾಗತಿಸಿ ಗೌರವಿಸಲಾಯಿತು, ಯಾದಗಿರಿ ಜಿಲ್ಲಾ ಸಮಾತಾ ಸೈನಿಕ ದಳದ ಅಧ್ಯಕ್ಷರಾದ ಮಾಹಾದೇವ ದಿಗ್ಗಿಯವರು ಈ ಯಾತ್ರೆಗೆ ಸ್ವಾಗತಿಸಿ ಬರಮಾಡಿಕೊಂಡರು, ಈ ಸಂಧರ್ಭದಲ್ಲಿ ಪೂಜ್ಯ ಬಂತೇಜಿಯರುಯವರ ನೇತೃತ್ವದ ಈ ಜಾಥಾಕ್ಕೆ ಮಾಲಾರ್ಪಣೆ ಮಾಡಿದರು,ದಲಿತ ಮುಖಂಡರಾದ ರಾಮಣ್ಣ ಸಾಧ್ಯಾಪುರ, ಈರಣ್ಣ ದೊಡಮನಿ, ಶಖಾಪುರ, ಮರೆಪ್ಪ ಮುಡಾಸ್, ಹಾಗೂ ಕಾಂಗ್ರೆಸ್ ಯುವ ಮುಖಂಡರಾದ ಮಲ್ಲಣಗೌಡ ಸೇರಿದಂತೆ ಅನೇಕ ಕಾರ್ಯಕರ್ತರು ಅಭಿಮಾನಿಗಳು ಹಾಜರಿದ್ದರು.

## ಬೆಂಬಲ ಬೆಲೆ ಯೋಜನೆಯಡಿ ಎಫ್.ಎ.ಕ್ಯೂ

# ಗುಣಮಟ್ಟದ ಕುಸಬೆ ಖರೀದಿ ರೈತರು ನೋಂದಣಿಗೆ ಸೂಚನೆ

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಮಾ.14–2024–25ನೇ ಸಾಲಿನ ಬೆಂಬಲ ಬೆಲೆ ಯೋಜನೆಯಡಿ ಎಫ್.ಎ.ಕ್ಯೂ. ಗುಣಮಟ್ಟದ ಕುಸಬೆ ಖರೀದಿಗಾಗಿ ಕಲಬುರಗಿ ಜಿಲ್ಲೆಯಲ್ಲಿ ಪ್ರತಿ ತಾಲ್ಲೂಕಿಗೆ 01 ರಂತೆ ಜಿಲ್ಲೆಯಲ್ಲಿ ಒಟ್ಟು 10 ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘಗಳು ಖರೀದಿ ಕೇಂದ್ರಗಳನ್ನು ಗುರುತಿಸಲಾಗಿದೆ ಎಂದು ಕಲಬುರಗಿ ಜಿಲ್ಲಾಧಿಕಾರಿ ಬಿ.ಫೌಜಿಯಾ ತರನ್ನುಮ್ ಅವರು ತಿಳಿಸಿದ್ದಾರೆ. ಎಫ್.ಎ.ಕ್ಯೂ. (ಈಂಕಿ) ಗುಣಮಟ್ಟದ ಕುಸುಬೆ ಪ್ರತಿ ಎಕರೆಗೆ 05 ಕ್ವಿಂಟಲ್‌ನಂತೆ ಹಾಗೂ ಪ್ರತಿ ರೈತರಿಂದ ಗರಿಷ್ಠ 20 ಕ್ವಿಂಟಲ್‌ವರೆಗೆ ಖರೀದಿಸಲು ಬೆಂಬಲ ಬೆಲೆ 5940 ರೂ. ನಿಗದಿಪಡಿಸಲಾಗಿದೆ. ಮೊತ್ತವನ್ನು ಡಿ.ಬಿ.ಟಿ. ಮೂಲಕ ರೈತರ ಬ್ಯಾಂಕ ಖಾತೆಗೆ ಜಮಾ ಮಾಡಲಾಗುತ್ತದೆ. ತಕ್ಷಣದಿಂದ ಜಾರಿಗೆ ಬರುವಂತೆ ರೈತರ ನೊಂದಣಿ ಕಾರ್ಯವನ್ನು ಸರ್ಕಾರದ ಆದೇಶದ ದಿನಾಂಕದಿಂದ 80 ದಿನಗಳವರೆಗೆ ಹಾಗೂ ಖರೀದಿ ಪ್ರಕ್ರಿಯೆ ಸರ್ಕಾರದ ಆದೇಶದ ದಿನಾಂಕದಿಂದ 90 ದಿನಗಳವರೆಗೆ ಜರುಗಲಿದ್ದು, ರೈತರು ತಮ್ಮ ಸಮೀಪದ ಖರೀದಿ ಕೇಂದ್ರಕ್ಕೆ ಭೇಟಿ ನೀಡಿ ತಾವು ಬೆಳೆದ ಕುಸುಬೆ ಮಾರಾಟಕ್ಕೆ ನೊಂದಾಯಿಸಿಕೊಂಡು ಇದರ ಸದುಪಯೋಗಪಡೆದುಕೊಳ್ಳಬೇಕು.

ಸರ್ಕಾರಿ ಆದೇಶದನ್ವಯ ಜಿಲ್ಲಾ ಮಟ್ಟದ ಟಾಸ್ಕ್‌ಫೋರ್ಸ್ ಸಭೆಯಲ್ಲಿ ಬೆಂಬಲ ಬೆಲೆ ಯೋಜನೆಯಡಿ ಎಫ್.ಎ.ಕ್ಯೂ. ಗುಣಮಟ್ಟದ ಕುಸುಬೆ ಖರೀದಿ ಮಾಡಲು ಕರ್ನಾಟಕ ಸಹಕಾರ ಎಣ್ಣೆ ಬೀಜ ಬೆಳೆಗಾರರ ಮಹಾಮಂಡಳ ನಿಯಮಿತ (ಏಔಈ) ಸಂಸ್ಥೆಗೆ ನೋಡಲ್ ಏಜೆನ್ಸಿಗಳನ್ನಾಗಿ ನೇಮಿಸಿದೆ ಎಂದು ಅವರು ತಿಳಿಸಿದ್ದಾರೆ.

# ಇಂದು ಗ್ರಾಹಕರ ಕುಂದುಕೊರತೆ ಸಭೆ

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಮಾ.13.(ಕ.ವಾ.)–ಕಲಬುರಗಿ ಜೆಸ್ಕಾಂ ಗ್ರಾಮೀಣ ವಿಭಾಗೀಯ ಕಚೇರಿ–2ರ ವ್ಯಾಪ್ತಿಯಲ್ಲಿ ಬರುವ ಜೇವರ್ಗಿ, ಯಡ್ರಾಮಿ, ಚಿತ್ತಾಪೂರ, ಶಹಾಬಾದ ಹಾಗೂ ಕಾಳಗಿ ಜೆಸ್ಕಾಂ ಉಪವಿಭಾಗಗಳ ಈ ಕೆಳಕಂಡ ಉಪವಿಭಾಗಗಳಲ್ಲಿ ಮಾರ್ಚ್ 15 ರಂದು ಬೆಳಿಗ್ಗೆ 11 ಗಂಟೆಯಿಂದ ಮಧ್ಯಾಹ್ನ 1 ಗಂಟೆಯವರೆಗೆ ಗ್ರಾಹಕರ ಕುಂದುಕೊರತೆ ಸಭೆ ಹಾಗೂ ವಿದ್ಯುತ್ ಸುರಕ್ಷತಾ ದಿನವನ್ನು ಹಮ್ಮಿಕೊಳ್ಳಲಾಗಿದೆ ಎಂದು ಕಲಬುರಗಿ ಜೆಸ್ಕಾಂ ಕಾರ್ಯ ಮತ್ತು ಪಾಲನೆ ಗ್ರಾಮೀಣ ವಿಭಾಗ–2ರ ಕಾರ್ಯನಿರ್ವಾಹಕ ಅಭಿಯಂತರರು ತಿಳಿಸಿದ್ದಾರೆ.

# ಇಂದು ರಾಷ್ಟ್ರೀಯ ಆರೋಗ್ಯ ಕಾರ್ಯಕ್ರಮಗಳ ಕುರಿತು ಪರಿಚಯ ಮತ್ತು ಜಾಗೃತಿ ಕಾರ್ಯಾಗಾರ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಮಾ.14–ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಮತ್ತು ಮಾಹಿತಿ ಶಿಕ್ಷಣ ಸಂವಹನ ವಿಭಾಗ ಇವರ ಸಂಯುಕ್ತಾಶ್ರಯದಲ್ಲಿ ರಾಷ್ಟ್ರೀಯ ಆರೋಗ್ಯ ಅಭಿಯಾನದಡಿ ರಾಷ್ಟ್ರೀಯ ಆರೋಗ್ಯ ಕಾರ್ಯಕ್ರಮಗಳ ಕುರಿತು ಮಾಧ್ಯಮ ಪ್ರತಿನಿಧಿಗಳಿಗೆ ಪರಿಚಯ ಮತ್ತು ಜಾಗೃತಿ ಕಾರ್ಯಾಗಾರವನ್ನು ಮಾ.15 ರಂದು ಬೆಳಿಗ್ಗೆ 11 ಗಂಟೆಗೆ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿಗಳ ಸಭಾಂಗಣದಲ್ಲಿ ಆಯೋಜಿಸಲಾಗಿದೆ.

ಜಿಲ್ಲಾ ಪಂಚಾಯತ್ ನ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಮಹಮ್ಮದ್ ಹ್ಯಾರೀಸ್ ಸುಮೈರ್ ಅವರು ಕಾರ್ಯಾಗಾರವನ್ನು ಉದ್ಘಾಟಿಸುವರು.

ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ.ಯಲ್ಲಾ ರಮೇಶ್ ಬಾಬು ಅವರು ಅಧ್ಯಕ್ಷತೆ ವಹಿಸುವರು.

ಜಿಲ್ಲಾ ಶಸ್ತ್ರಚಿಕಿತ್ಸಕ ಡಾ.ಬಸರೆಡ್ಡಿ, ವಾರ್ತಾ ಮತ್ತು ಸಾರ್ವಜನಿಕ ಇಲಾಖೆಯ ಹಿರಿಯ ಸಹಾಯಕ ನಿರ್ದೇಶಕ ತುಕಾರಾಂ ರಾವ್ ಬಿ.ವಿ., ಜಿಲ್ಲಾ ಆರೋಗ್ಯ ತರಬೇತಿ ಕೇಂದ್ರದ ಪ್ರಾಂಶುಪಾಲರಾದ ಡಾ.ಹನುಮಂತಪ್ಪ, ಜಿಲ್ಲಾ ರೋಗವಾಹಕ ಆಶ್ರಿತ ರೋಗಗಳ ನಿಯಂತ್ರಣಾಧಿಕಾರಿ ಡಾ.ಅಬ್ದುಲ್ಲಾ, ಜಿಲ್ಲಾ ಕುಟುಂಬ ಕಲ್ಯಾಣ ಕಾರ್ಯಕ್ರಮ ಅನುಷ್ಠಾನಾಧಿಕಾರಿ ಡಾ.ಮರಿಯಂಬಿ ವಿ.ಕೆ., ಜಿಲ್ಲಾ ಸರ್ವೇಕ್ಷಣಾಧಿಕಾರಿ ಡಾ.ಇಂದ್ರಾಣಿ, ಜಿಲ್ಲಾ ಕುಷ್ಠರೋಗ ನಿರ್ಮೂಲನಾಧಿಕಾರಿ ಡಾ.ವೀರೇಂದ್ರ ಕುಮಾರ್ ಸೇರಿದಂತೆ ಇತರರು ಮುಖ್ಯ ಅತಿಥಿಗಳಾಗಿ ಭಾಗವಹಿಸುವರು.

ಜಿಲ್ಲಾ ಆರ್‌ಸಿಹೆಚ್ ಅಧಿಕಾರಿ ಡಾ.ಹನುಮಂತಪ್ಪ ಅವರು ಪ್ರಾಸ್ತಾವಿಕವಾಗಿ ಮಾತನಾಡುವರು.

ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ ಈಶ್ವರ ಹೆಚ್ ದಾಸಪ್ಪನವರ ಅವರು ಸ್ವಾಗತ ಹಾಗೂ ನಿರೂಪಣೆ ಮಾಡುವರು ಎಂದು ಪ್ರಕಟಣೆ ತಿಳಿಸಿದೆ.

# ಕೊಪ್ಪಳ ಜಿಲ್ಲಾ ಕನ್ನಡ ಸಾಹಿತ್ಯ ಸಮ್ಮೇಳನ ಸರ್ವಾಧ್ಯಕ್ಷರಾಗಿ ಲಿಂಗಾರೆಡ್ಡಿ ಆಲೂರ್ ಆಯ್ಕೆ

ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ : ಜಿಲ್ಲಾ ಕನ್ನಡ ಸಾಹಿತ್ಯ ಸಮ್ಮೇಳನದ ಸರ್ವಾಧ್ಯಕ್ಷರಾಗಿ ಆಯ್ಕೆಯಾಗಿರುವ ಲಿಂಗಾರೆಡ್ಡಿ ಆಲೂರು ಅವರಿಗೆ ಅಭಿನಂದನೆಗಳು.

ಪ್ರಾಧ್ಯಾಪಕರಾಗಿ, ಸಾಹಿತಿಯಾಗಿ, ಕೃಷಿ ಮತ್ತು ಸಾಹಿತ್ಯದ ಪತ್ರಿ–ಕೆಯ ಸಂಪಾದಕರಾಗಿ, ವಿವಿಧ ವೇದಿಕೆಗಳಲ್ಲಿ ಅಚ್ಚುಕಟ್ಟು ನಿರ್ವಹಣೆ ಮಾಡುವಲ್ಲಿ ಖ್ಯಾತಿ ಹೊಂದಿರುವ ಲಿಂಗಾರೆಡ್ಡಿ ಆಲೂರು ಅವರು ಗಂಗಾವತಿ ತಾಲೂಕಿನ ಮಲ್ಲಾಪುರ ಗ್ರಾಮದವರಾಗಿದ್ದು ಕೆಸರಟ್ಟಿ ಜಿಜಿಡಿಇ ಶಿಕ್ಷಣ ಟ್ರಸ್ಟ್ ನ ಶೈಕ್ಷಣಿಕ ವಿಭಾಗದ ಆಡಳಿತಾಧಿಕಾರಿಯಾಗಿ ಕಳೆದ ಹತ್ತು ವರ್ಷಗಳಿಂದ ಸೇವೆ ಸಲ್ಲಿಸುತ್ತಿದ್ದಾರೆ.

ದೂರದರ್ಶನ ಮತ್ತು ಆಕಾಶವಾಣಿಯಲ್ಲಿ ಕೃಷಿ, ಶಿಕ್ಷಣ, ಸಾಹಿತ್ಯಕ್ಕೆ ಸಂಬಂಧಿಸಿದ ಹಲವು ಕಾರ್ಯಕ್ರಮಗಳನ್ನು ನಿರ್ವಹಿಸಿರುವ ಅನುಭವ ಹೊಂದಿರುವ ಲಿಂಗಾ–ರೆಡ್ಡಿ ಆಲೂರು ಅವರು ಉತ್ತಮ ವಾಗ್ಮಿಯಾಗಿ ಗಂಗಾವತಿಯಲ್ಲಿ ನಡೆಯುವ ಪ್ರತಿಯೊಂದು ಸಾಹಿತ್ಯ ಸಾಂಸ್ಕೃತಿಕ ಮತ್ತಿತರ ಸಂಘ ಸಂಸ್ಥೆಗಳ ಕಾರ್ಯಕ್ರಮದಲ್ಲಿ ನಿರೂಪಕರಾಗಿ ಜನಮಾನಸದಲ್ಲಿ ಗುರುತಿಸಿಕೊಂಡಿದ್ದಾರೆ. ಕನ್ನಡ ಸಾಹಿತ್ಯ ಪರಿಷತ್ತಿಗೆ ಟೊಂಕಕಟ್ಟಿ ನಿಂತು ಕನ್ನಡ ಸೇವೆಯನ್ನು ಸಲ್ಲಿಸಿರುವ ತಮ್ಮ ಅಧ್ಯಕ್ಷತೆಯಲ್ಲಿ ಜಿಲ್ಲಾ ಕನ್ನಡ ಸಾಹಿತ್ಯ ಸಮ್ಮೇಳನವು ಯಶಸ್ವಿಯಾಗಿ ಜರುಗಲೆಂದು ಅವರ ಅಭಿಮಾನಿ ಬಳಗ ಶುಭ ಹಾರೈಸಿದ್ದಾರೆ.


ವಾರ್ತಾ ಮತ್ತು ಸಾರ್ವಜನಿಕ
ಸಂಪರ್ಕ ಇಲಾಖೆ
ಯುವನಿಧಿ
ಪ್ರತಿ ತಿಂಗಳು ನಿರುದ್ಯೋಗ ಭತ್ಯೆ
₹3000
ಪದವೀಧರರಿಗೆ
₹1500
ಡಿಪ್ಲೊಮಾ ಪದವೀಧರರಿಗೆ
ಫಲಾನುಭವಿಗಳು
2.57 ಲಕ್ಷ
ಒಟ್ಟು ವೆಚ್ಚ
286 ಕೋಟಿ ರೂ.
ಯುವನಿಧಿ
ಯೋಜನೆಯಡಿ ಸರ್ಕಾರ ನೀಡುವ ಹಣವನ್ನು
ಉನ್ನತ ವಿದ್ಯಾಭ್ಯಾಸಕ್ಕೆ ಬಳಸಿಕೊಂಡಿದ್ದೇನೆ.
ಭವಿಷ್ಯ ರೂಪಿಸಿಕೊಳ್ಳಲು ಈ ಯೋಜನೆ
ನಮಗೆ ವರದಾನ.
ಗೌರಿಶಂಕರ್
ಫಲಾನುಭವಿ
ಇದಕ್ಕಾಗಿ ಮುಖ್ಯಮಂತ್ರಿ ಸಿದ್ದರಾಮಯ್ಯ
ಅವರಿಗೆ ಧನ್ಯವಾದ.
ನಮ್ಮ ಕರ್ನಾಟಕ
ಗ್ಯಾರಂಟಿ ಕರ್ನಾಟಕ
ಶಕ್ತಿ
ಮಹಿಳೆಯರಿಗೆ
ಬಸ್ ಪ್ರಯಾಣ ಉಚಿತ
ಅನ್ನಭಾಗ್ಯ
ಬಡವರಿಗೆ ಪ್ರತಿ ತಿಂಗಳು 10 kg ಆಹಾರಧಾನ್ಯ
ಗೃಹ ಜ್ಯೋತಿ
ಪ್ರತಿ ಮನೆಗೆ
200 ಯೂನಿಟ್‌ವರೆಗೆ ವಿದ್ಯುತ್ ಉಚಿತ
ಗೃಹಲಕ್ಷ್ಮಿ
ಪ್ರತಿ ಮನೆಯೊಡತಿಗೆ ಪ್ರತಿ ತಿಂಗಳು
₹2000
ಯುವನಿಧಿ
ಪ್ರತಿ ತಿಂಗಳು ನಿರುದ್ಯೋಗ ಭತ್ಯೆ
₹3000 ಪದವೀಧರರಿಗೆ
₹1500 ಡಿಪ್ಲೊಮಾ ಪದವೀಧರರಿಗೆ
"ಸಾರ್ವಜನಿಕ ಆಸ್ತಿ ಪಾಸ್ತಿ ರಕ್ಷಿಸುವುದು ಮತ್ತು ಹಿಂಸೆಯನ್ನು ತ್ಯಜಿಸುವುದು
ಪ್ರತಿಯೊಬ್ಬ ಭಾರತೀಯನ ಮೂಲಭೂತ ಕರ್ತವ್ಯ"
CMofKarnataka
https://dipr.karnataka.gov.in/
ಗಡಿಭಾಗ ವಿಶೇಷ ಮಾಧ್ಯಮ ಮತ್ತು ನಿಯತಕಾಲಿಕ ಪತ್ರಿಕೆಗಳಿಗೆ ಪ್ರೋತ್ಸಾಹ ರೂಪದ ಜಾಹೀರಾತು
ಕರ್ನಾಟಕ ವಾರ್ತೆ